ಸಂಪುಟ: ೦೭/ ಸಂಚಿಕೆ: ೧೯೮/ ಶುಕ್ರವಾರ ದಿನಾಂಕ : ೨೬-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 198/ FRIDAY Date : 26-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



ನವರಾತ್ರಿ ಉತ್ಸವದ ನಾಲ್ಕನೆಯ ದಿನವಾದ ಗುರುವಾರ ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ಗಾಯತ್ರಿ ದೇವಿ ಅಲಂಕಾರ.

## ಭ್ರೂಣ ಹತ್ಯೆ ವಿರುದ್ಧ ಕಾರ್ಯಾಚರಣೆ

**ಬೆಂಗಳೂರು:** ಹೆಣ್ಣು ಭ್ರೂಣವನ್ನು ಕೊಲ್ಲುವ ಕಟುಕರ ವಿರುದ್ಧ ಸತತ ಕಾರ್ಯಾಚರಣೆ ನಡೆಸುತ್ತಿರುವ ಆರೋಗ್ಯ ಇಲಾಖೆ ಅಧಿಕಾರಿಗಳು, ಹೊರರಾಜ್ಯಕ್ಕೆ ತೆರಳಿ ರಹಸ್ಯ ಕಾರ್ಯಾಚರಣೆ ನಡೆಸಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಬುಧವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದ ತಾಯಂದಿರು ಆಂಧ್ರದಲ್ಲಿ ಭ್ರೂಣ ಹತ್ಯೆ ಮಾಡಿಸಿಕೊಳ್ಳುವ ಘೋರ ಕಾರ್ಯ ಬೆಳಕಿಗೆ ಬಂದಿದ್ದು, ಕಟುಕರನ್ನು ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಭ್ರೂಣ ಹತ್ಯೆ ಎಲ್ಲೇ ಮಾಡಿಸಿಕೊಂಡರೂ, ಇಲಾಖೆ ಕಠಿಣ ಕ್ರಮ ತೆಗೆದುಕೊಳ್ಳಲಿದೆ. ಹೆಣ್ಣು ಭ್ರೂಣ ಹತ್ಯೆ ವಿರುದ್ಧ ಸಮಾಜ ಜಾಗೃತರಾಗಬೇಕು ಎಂದರು.

ರಾಜ್ಯದಲ್ಲಿರುವ ಮಳವಳ್ಳಿಯ 30 ವರ್ಷದ ಮಹಿಳೆಗೆ 3 ಜನ ಹೆಣ್ಣುಮಕ್ಕಳಿದ್ದ ಹಿನ್ನೆಲೆಯಲ್ಲಿ ಅಕ್ರಮವಾಗಿ ಏಜೆಂಟ್ ಮೂಲಕ ಲಿಂಗ ಪತ್ತೆ ಮಾಡಿಸಿದ್ದಾರೆ. ಮಗು ಹೆಣ್ಣು ಎಂದು ಗೊತ್ತಾದಾಗ, ಭ್ರೂಣ ಹತ್ಯೆಗೆ ಮುಂದಾಗಿದ್ದಾರೆ. ಇದನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆ ಎಂದು ವಿವರಿಸಿದರು. ಹೆಣ್ಣು ಭ್ರೂಣ ಹತ್ಯೆ ತಡೆಯುವಲ್ಲಿ ಇಲಾಖೆಯಿಂದ ಏನೆಲ್ಲ ಪ್ರಯತ್ನಗಳನ್ನು ಮಾಡಲು ಸಾಧ್ಯವೋ, ಅದನ್ನು ಪ್ರಾಮಾಣಿಕವಾಗಿ ಮಾಡಲಾಗುತ್ತಿದೆ. ಹೆಣ್ಣು ಭ್ರೂಣ ಹತ್ಯೆ ಒಂದು ಸಾಮಾಜಿಕ ಪಿಡುಗು. ನಮ್ಮ ಸಮಾಜ ಈ ಬಗ್ಗೆ ಜಾಗ್ರತರಾಗುವುದು ಮುಖ್ಯ. ಸಂಪೂರ್ಣವಾಗಿ ಹೆಣ್ಣು ಭ್ರೂಣ ಹತ್ಯೆ ತೊಡೆದುಹಾಕಲು ಸಾಮಾಜಿಕ ಬದಲಾವಣೆ ಆಗುವುದು ಮುಖ್ಯ ಎಂದು ಅವರು ಹೇಳಿದರು.

## ಭಾರತೀಯ ವಾಯುಪಡೆಗೆ 97ತೇಜಸ್ ಜೆಟ್‌ಗಳ ಸೇರ್ಪಡೆ

**ನವದೆಹಲಿ:** ಭಾರತೀಯ ವಾಯುಪಡೆಗೆ 97 ತೇಜಸ್ ಲಘು ಯುದ್ಧ ವಿಮಾನಗಳನ್ನು ಖರೀದಿಸಲು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನೊಂದಿಗೆ ರಕ್ಷಣಾ ಸಚಿವಾಲಯ ಗುರುವಾರ ರೂ. 62,370 ಕೋಟಿ ಒಪ್ಪಂದವನ್ನು ಮಾಡಿಕೊಂಡಿದೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಭದ್ರತೆಯ ಕ್ಯಾಬಿನೆಟ್ ಸಮಿತಿ ಮೆಗಾ ಖರೀದಿಗೆ ಅನುಮೋದನೆ ನೀಡಿದ ಒಂದು ತಿಂಗಳ ನಂತರ ಈ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಇದು ಸರ್ಕಾರಿ ಸ್ವಾಮ್ಯದ ಕಂಪನಿಗೆ ನೀಡಲಾದ ಎರಡನೇ ಒಪ್ಪಂದವಾಗಿದೆ.

ಈ ಹಿಂದೆ ಫೆಬ್ರವರಿ 2021 ರಲ್ಲಿ IAF ಗಾಗಿ 83 ತೇಜಸ್ MK-1A ಜೆಟ್‌ಗಳನ್ನು ಖರೀದಿಸಲು HAL ನೊಂದಿಗೆ ರೂ. 48,000 ಕೋಟಿ ಒಪ್ಪಂದವನ್ನು ರಕ್ಷಣಾ ಸಚಿವಾಲಯ ಮಾಡಿಕೊಂಡಿತ್ತು. ಭಾರತೀಯ ವಾಯುಪಡೆಗಾಗಿ 97 ತೇಜಸ್ ಲಘು ಯುದ್ಧ ವಿಮಾನಗಳನ್ನು ಖರೀದಿಸಲು ಹೆಚ್ ಎಎಲ್ ಜೊತೆಗೆ ರೂ. 62,370 ಕೋಟಿ ವೆಚ್ಚದ ಒಪ್ಪಂದಕ್ಕೆ ಸಹಿ ಹಾಕಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

## ಜಾತಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳದ ಗಣತಿದಾರರ ವಿರುದ್ಧ ಶಿಸ್ತು ಕ್ರಮ

**ಬೆಂಗಳೂರು:** ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಕರ್ತವ್ಯಕ್ಕೆ ಹಾಜರಾಗದ ಸಮೀಕ್ಷಾದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಕಾನೂನು ಸಚಿವ ಹೆಚ್. ಕೆ. ಪಾಟೀಲ್ ತಿಳಿಸಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಹಲವು ಶಿಕ್ಷಕರುಗಳು ಭಾಗಿಯಾಗುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಅದರಲ್ಲೂ ಜಿಬಿಎ ವ್ಯಾಪ್ತಿಯಲ್ಲಿ ಶಿಕ್ಷಕರುಗಳು ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಹಿಂದೇಟು ಹಾಕುತ್ತಿದ್ದಾರೆ. ಈ ಸಂಬಂಧ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆದಿದ್ದು, ಕರ್ತವ್ಯಕ್ಕೆ ಹಾಜರಾಗದ ಸಮೀಕ್ಷಾದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ. ಶಿಸ್ತು ಕ್ರಮ ತೆಗೆದುಕೊಳ್ಳುವ ಅಧಿಕಾರವನ್ನು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ನೀಡಲಾಗಿದೆ. ವಿಶೇಷವಾಗಿ ಜಿಬಿಎ ವ್ಯಾಪ್ತಿಯಲ್ಲಿ ಇದು ಅನ್ವಯವಾಗಲಿದೆ ಎಂದರು.

ಇಂದು ಸಿಎಂ ಸಿದ್ದರಾಮಯ್ಯ ಅವರು ಜಿಲ್ಲಾಧಿಕಾರಿ ಹಾಗೂ ಸಿಇಓಗಳ ಜೊತೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಸ್ಥಿತಿಗತಿ, ಪ್ರಗತಿ, ಸಮಸ್ಯೆಗಳ ಬಗ್ಗೆ ಸಭೆ ನಡೆಸಲಿದ್ದಾರೆ ಎಂದು ಇದೇ ವೇಳೆ ಸಚಿವರು ತಿಳಿಸಿದರು.

**ಡಿವೈಎಸ್‌ಪಿ ಗಣಪತಿ ಆತ್ಮಹತ್ಯೆ ಕುರಿತ ಆಯೋಗದ ವರದಿ ತಿರಸ್ಕಾರ:** ನಿವೃತ್ತ ಪೊಲೀಸ್ ಮಹಾನಿರ್ದೇಶಕ ಎಂ.ಕೆ. ಶ್ರೀವಾಸ್ತವ್ ಅವರ ಅಧ್ಯಯನ ವರದಿ ಆಧಾರದಲ್ಲಿ 2016ರ ಜುಲೈ 7ರಂದು ಡಿವೈಎಸ್ ಪಿ ಎಂ.ಕೆ. ಗಣಪತಿ ಮಡಿಕೇರಿಯ ವಿನಾಯಕ ಲಾಡ್ಜ್ ನಲ್ಲಿ ಅಸ್ವಾಭಾವಿಕ ಮರಣ ಹೊಂದಿರುವ ಘಟನೆಗೆ ಕಾರಣವಾದ ಸಂದರ್ಭಗಳು ಹಾಗೂ ಘಟನಾವಳಿಗಳ ಕುರಿತು- ನ್ಯಾಯಮೂರ್ತಿ ಶ್ರೀ ಕೆ.ಎನ್. ಕೇಶವನಾರಾಯಣ ವಿಚಾರಣಾ ಆಯೋಗವು ನೀಡಿರುವ ವರದಿ ಹಾಗೂ ಶಿಫಾರಸ್ಸುಗಳನ್ನು ತಿರಸ್ಕರಿಸಲು ತೀರ್ಮಾನಿಸಲಾಗಿದೆ.



### ಬಾಡಿಗೆ ಅಧಿನಿಯಮಕ್ಕೆ ತಿದ್ದುಪಡಿ

ಕೇಂದ್ರ ಸರ್ಕಾರ ಜನ್ ವಿಶ್ವಾಸ್ (ನಿಬಂಧನೆಗಳ ತಿದ್ದುಪಡಿ) ಕಾಯ್ದೆ, 2023ಗೆ ಅನುಗುಣವಾಗಿ ರಾಜ್ಯ ಸರ್ಕಾರ ಕರ್ನಾಟಕ ಜನ್ ವಿಶ್ವಾಸ್ (ನಿಬಂಧನೆಗಳ ತಿದ್ದುಪಡಿ) ಕಾಯ್ದೆ, 2025 ಜಾರಿಗೆ ತರಲು ಉದ್ದೇಶಿಸಿದೆ. ಈ ಕಾಯ್ದೆಯನ್ನು ಕಾರ್ಯಗತಗೊಳಿಸಲು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಕರ್ನಾಟಕ ಬಾಡಿಗೆ ಕಾಯ್ದೆ 1999 ರ ವಿವಿಧ ಕಲಂಗಳ ಅಡಿಯಲ್ಲಿನ ದಂಡ ಮತ್ತು ಅಪರಾಧ ನಿಬಂಧನೆಗಳನ್ನು ತಿದ್ದುಪಡಿ ಮಾಡಲು ಪ್ರಸ್ತಾಪಿಸಲಾಗಿದೆ. ತಿದ್ದುಪಡಿ ಪ್ರಕಾರ 1999ರ ಕೆಲವು ವಿಭಾಗಗಳ ಅಡಿಯಲ್ಲಿನ ದಂಡನೆಗಳು ಮತ್ತು ಅಪರಾಧ ನಿಬಂಧನೆಗಳನ್ನು ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ. ಸಣ್ಣಪುಟ್ಟ ತಾಂತ್ರಿಕ ಲೋಪಗಳಿಗೆ ಜೈಲು ಶಿಕ್ಷೆ ಬದಲಾಗಿ ಆರ್ಥಿಕ ದಂಡವನ್ನು ವಿಧಿಸಲು ತಿದ್ದುಪಡಿ ತರಲಾಗಿದೆ. ಪುನರಾವರ್ತಿತ ಅಪರಾಧಗಳಿಗೆ ಪರಿಮಾಣಾತ್ಮಕ ದಂಡವನ್ನು ಪರಿಚಯಿಸಲು ಉದ್ದೇಶಿಸಲಾಗಿದೆ.

ಈ ಹಿನ್ನೆಲೆಯಲ್ಲಿ ನಿವೃತ್ತ ನ್ಯಾಯಧೀಶ ಕೆ.ಎನ್. ಕೇಶವ ನಾರಾಯಣ ವಿಚಾರಣಾ ವರದಿಯನ್ನು ಸಚಿವ ಸಂಪುಟ ಭಾಗಶಃ ಒಪ್ಪಿ, ಅಧಿಕಾರಿಗಳ ವಿರುದ್ಧದ ಇಲಾಖಾ ತನಿಖೆಯ ಶಿಫಾರಸ್ಸನ್ನು ತಿರಸ್ಕರಿಸಿದೆ ಎಂದರು.

### ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನದಲ್ಲಿ ರಷ್ಯಾ ಪಾಲುದಾರಿಕೆ

## ನಮ್ಮ ಸ್ನೇಹ ಮತ್ತಷ್ಟು ಗಟ್ಟಿ

**ನವದೆಹಲಿ:** ರಷ್ಯಾ ಜೊತೆಗಿನ ಭಾರತದ ದೀರ್ಘಕಾಲದ ಪಾಲುದಾರಿಕೆಯನ್ನು ಮತ್ತು ಉಭಯ ದೇಶಗಳ ಬಂಧವನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಮೂರನೇ ಆವೃತ್ತಿಯ ಉತ್ತರ ಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನ -2025ಕ್ಕೆ ಗೌತಮಬುದ್ಧನಗರ ಜಿಲ್ಲೆಯ ಗ್ರೇಟರ್ ನೋಯ್ಡಾದಲ್ಲಿ ಅವರು ಇಂದು ಚಾಲನೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪ್ರಧಾನಿ, ಈ ಬಾರಿ ವ್ಯಾಪಾರ ಪ್ರದರ್ಶನದ ದೇಶದ ಪಾಲುದಾರ ರಷ್ಯಾ ನಮ್ಮ ಜೊತೆಯಾಗಿದೆ. ಈ ವ್ಯಾಪಾರ ಪ್ರದರ್ಶನದ ಮೂಲಕ ನಮ್ಮ ಸಮ-ಪರೀಕ್ಷಿತ ಪಾಲುದಾರಿಕೆ ಮತ್ತಷ್ಟು ಬಲಗೊಳ್ಳಲಿದೆ ಎಂದರು.

ಜಾಗತಿಕ ಅಡೆತಡೆ ಮತ್ತು ಅನಿಶ್ಚಿತತೆ ನಡುವೆ ಭಾರತದ ಆರ್ಥಿಕತೆಯು ಬಲವಾಗಿ ಆಕರ್ಷಿತವಾಗಿ ಬೆಳೆಯುತ್ತಿದೆ ಎಂದು ತಿಳಿಸಿದರು. ಮೇಕ್ ಇನ್ ಇಂಡಿಯಾ ಉಪಕ್ರಮಕ್ಕೆ ಸರ್ಕಾರ ಸಾಕಷ್ಟು ಪ್ರಯತ್ನ ಮಾಡುತ್ತಿದೆ. ನಾವು ಎಲ್ಲಾದರಲ್ಲೂ ಹಡಗಿನಿಂದ ಮೈಕ್ರೋಚಿಪ್?ವರೆಗೆ ಉತ್ಪಾದನೆ ಮಾಡಬೇಕಿದೆ. ವ್ಯವಹಾರದಲ್ಲಿ ಸಣ್ಣಪುಟ್ಟ ತಪ್ಪುಗಳನ್ನು ಮಾಡಿದ ಜನರ ವಿರುದ್ಧ ಪ್ರಕರಣಗಳನ್ನು ದಾಖಲಿಸುವ ಹಲವು ನಿಯಮಗಳನ್ನು ಸರ್ಕಾರ ಅಪರಾಧ ಮುಕ್ತಗೊಳಿಸಿದೆ ಎಂದರು. ತಮ್ಮ ಸ್ವದೇಶಿ ಕರೆಯನ್ನು ಪುನರ್ ಉಚ್ಚರಿಸಿದ ಅವರು, ನಮ್ಮ ರಕ್ಷಣಾ ಬಲಕ್ಕೆ ಸ್ವದೇಶಿ ನಿರ್ಮಿತ ಅಸ್ತ್ರಗಳು ಬೇಕು. ನಾವು ಇತರೆ ದೇಶಗಳ ಮೇಲಿನ ಅವಲಂಬನೆ ಕಡಿಮೆ ಮಾಡಿದ್ದೇವೆ. ರಕ್ಷಣಾ ವಲಯದಲ್ಲಿ ಅಭಿವೃದ್ಧಿ ಕಾಣುತ್ತಿದ್ದು, ಅದಕ್ಕೆ ಪೂರಕ ಪರಿಸರ ವ್ಯವಸ್ಥೆ ಸೃಷ್ಟಿಸುವ ಮೂಲಕ ಮೇಕ್ ಇನ್ ಇಂಡಿಯಾ ಹೆಗ್ಗುರುತು ಸೃಷ್ಟಿಸಲಾಗಿದೆ. ಇದರಲ್ಲಿ



ಉತ್ತರ ಪ್ರದೇಶ ಪಾತ್ರ ದೊಡ್ಡದಿದೆ ಎಂದು ಹೇಳಿದರು.

ಶೀಘ್ರದಲ್ಲೇ, ರಷ್ಯಾದ ಸಹಯೋಗದೊಂದಿಗೆ ಉತ್ತರ ಪ್ರದೇಶದಲ್ಲಿ ಸ್ಥಾಪಿಸಲಾಗಿರುವ ಕಾರ್ಖಾನೆಯಲ್ಲಿ ಎಕೆ-203 ರೈಫಲ್‌ಗಳ ಉತ್ಪಾದನೆಯೂ ಪ್ರಾರಂಭವಾಗಲಿದೆ. ಉತ್ತರ ಪ್ರದೇಶದಲ್ಲಿ ರಕ್ಷಣಾ ಕಾರಿಡಾರ್ ಅನ್ನು ಸಹ ಸ್ಥಾಪಿಸಲಾಗುತ್ತಿದೆ. ಬ್ರಹ್ಮೋಸ್ ಕ್ಷಿಪಣಿಗಳು ಸೇರಿದಂತೆ ಹಲವಾರು ಶಸ್ತ್ರಾಸ್ತ್ರಗಳ ಉತ್ಪಾದನೆಯು ಈಗಾಗಲೇ ಪ್ರಾರಂಭವಾಗಿದೆ ಎಂದರು.

ನಾಲ್ಕು ದಿನಗಳ ಈ ವ್ಯಾಪಾರಿ ಪ್ರದರ್ಶನದಲ್ಲಿ ಅವಿಷ್ಕಾರ, ಸಮಗ್ರತೆ, ಅಂತಾರಾಷ್ಟ್ರೀಕರಣದ ಪ್ರಮುಖ ಮೂರು ಉದ್ದೇಶ ಹೊಂದಿದೆ. ಮೂರು-ಹಂತದ ಖರೀದಿದಾರ ತಂತ್ರವು ಅಂತಾರಾಷ್ಟ್ರೀಯ ಖರೀದಿದಾರರು, ದೇಶಿಯ ವ್ಯವಹಾರದಿಂದ ಖರೀದಿದಾರರು ಮತ್ತು ದೇಶಿಯ ಗ್ರಾಹಕರನ್ನು ಗುರಿಯಾಗಿರಿಸಿಕೊಳ್ಳುತ್ತದೆ. ಇದು ರಫ್ತುದಾರರು, ಸಣ್ಣ ವ್ಯವಹಾರಗಳು ಮತ್ತು ಗ್ರಾಹಕರಿಗೆ ಸಮಾನವಾಗಿ ಅವಕಾಶಗಳನ್ನು ಒದಗಿಸುತ್ತದೆ ಎಂದು ಪ್ರಧಾನಿಮಂತ್ರಿ ಕಚೇರಿ ತಿಳಿಸಿದೆ.

## ಮೈಸೂರಿನಲ್ಲಿ ಸಾಹಿತಿ ಭೈರಪ್ಪ ಸ್ಮಾರಕ



**ಬೆಂಗಳೂರು:** ಸಾಹಿತಿ ಎಸ್.ಎಲ್. ಭೈರಪ್ಪ ಅವರ ಸ್ಮಾರಕವನ್ನು ಮೈಸೂರಿನಲ್ಲಿ ನಿರ್ಮಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಭೈರಪ್ಪ ಅವರ ಅಂತಿಮ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇರು ಸಾಹಿತಿಯ ನಿಧನದಿಂದ ಸಾರಸ್ವತ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಶೋಕಿಸಿದರು.

ಭೈರಪ್ಪ 25ಕ್ಕೂ ಹೆಚ್ಚು ಕಾದಂಬರಿಗಳನ್ನು ಬರೆದಿದ್ದಾರೆ. ಇವರ ಸಾಹಿತ್ಯ 40 ಭಾಷೆಗಳಿಗೆ ಭಾಷಾಂತರಗೊಂಡಿವೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ಬೇರೆ ಸಾಹಿತಿಗಳ ಪುಸ್ತಕಗಳು ತುರ್ಜುಮೆಗೊಂಡಿರುವ ಉದಾಹರಣೆಗಳಿಲ್ಲ ಎಂದರು.

ಪ್ರೌಢಶಾಲೆಯಿಂದ ಸ್ನಾತಕೋತ್ತರವರೆಗೂ ಮೈಸೂರಿನಲ್ಲೇ ವಿದ್ಯಾಭ್ಯಾಸ ಮಾಡಿದ್ದರು. ಕಷ್ಟಪಟ್ಟು ಮೇಲೆ ಬಂದವರು. ತತ್ವಶಾಸ್ತ್ರ ಪ್ರಾಧ್ಯಾಪಕರಾಗಿದ್ದರು. ಚಿಕ್ಕ ವಯಸ್ಸಿನಲ್ಲೇ ಸಾಹಿತ್ಯ ರಚನೆಯಲ್ಲಿ ತೊಡಗಿಸಿಕೊಂಡಿದ್ದರು. ಬೋಧನೆ ಹಾಗೂ ಬರೆವಣಿಗೆ ಎರಡನ್ನೂ ಏಕಕಾಲಕ್ಕೆ ನಿರ್ವಹಿಸುವಲ್ಲಿ ಯಶಸ್ವಿಯಾಗಿದ್ದರು ಎಂದು ಹೇಳಿದರು.

ಪದಶ್ರೀ, ಸರಸ್ವತಿ ಸನಾನ್, ನಾಡೋಜ, ರಾಜ್ಯೋತ್ಸವ, ಪಂಪಾ ಸೇರಿದಂತೆ ಅನೇಕ ಪ್ರಶಸ್ತಿಗಳು ಅವರಿಗೆ ಲಭಿಸಿದ್ದವು. ಎಲ್ಲದಕ್ಕೂ ಅವರು ಅರ್ಹರಿದ್ದರು. ಜ್ಞಾನಪೀಠ ಪ್ರಶಸ್ತಿ ಸಿಗಲಿಲ್ಲ ಎಂಬ ನೋವು ಉಳಿದಿತ್ತು, ನನ್ನ ಪ್ರಕಾರ ಅವರಿಗೆ ಜ್ಞಾನಪೀಠ ಸಿಗಬೇಕಿತ್ತು ಎಂದರು.

ಭೈರಪ್ಪ ಹಾಗೂ ನನ್ನ ವಿಚಾರಗಳ ನಡುವೆ ವ್ಯತ್ಯಾಸವಿದ್ದರೂ ಸ್ನೇಹಕ್ಕೆ ಕುಂದಾಗಿರಲಿಲ್ಲ. ಸಾಹಿತ್ಯ ಹಾಗೂ ದೃಷ್ಟಿಕೋನಗಳು ಬೇರೆ ಬೇರೆಯಾಗಿರಬಹುದು, ಒಂದೇ ಆಗಿರಬೇಕೆಂಬ ನಿಯಮಗಳೂ ಇಲ್ಲ. ಅಭಿಪ್ರಾಯ ಬೇರೆ ಇದೆ ಎಂಬ ಕಾರಣಕ್ಕೆ ಅಭಿಮಾನಿಯಾಗಿರಬಾರದು ಎಂದೇನಿಲ್ಲ ಎಂದರು. ಸಚಿವರಾದ ಮಧುಬಂಗಾರಪ್ಪ, ಶಿವರಾಜ ತಂಗಡಗಿ ಶಾಸಕರಾದ ರಾಘವೇಂದ್ರ ಹಿಟ್ನಾಳ್, ಅಲ್ಲಮಪ್ರಭು ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು.ಇದೇ ಸಂದರ್ಭದಲ್ಲಿ ಭೈರಪ್ಪ ಅವರ ಕುಟುಂಬದ ಸದಸ್ಯರನ್ನು ಸಿದ್ದರಾಮಯ್ಯ ಭೇಟಿ ಮಾಡಿ, ಸಾಂತ್ವಾನ ಹೇಳಿದರು.

## ಅಗ್ನಿ-ಪ್ರೈಮ್ ಕ್ಷಿಪಣಿ ಪರೀಕ್ಷೆ ಯಶಸ್ವಿ

**ಬಾಲಸೋರ್:** ಒಡಿಶಾದ ಬಾಲಸೋರ್ ನಲ್ಲಿರುವ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್‌ನಲ್ಲಿ ಭಾರತದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ನಡೆಸಿದ ಅಗ್ನಿ-ಪ್ರೈಮ್ ಕ್ಷಿಪಣಿಯ ಯಶಸ್ವಿ ಪರೀಕ್ಷೆಯೊಂದಿಗೆ ಮತ್ತೊಂದು ಮಹತ್ವದ ಮೈಲಿಗಲ್ಲು ಸಾಧಿಸಿದಂತಾಗಿದೆ.

ಈ ಪರೀಕ್ಷೆಯನ್ನು ಡಿಆರ್‌ಡಿಒ, ಎಸ್‌ಎಫ್‌ಸಿ ಮತ್ತು ಭಾರತೀಯ ಸಶಸ್ತ್ರ ಪಡೆಗಳು ಜಂಟಿಯಾಗಿ ನಡೆಸಿವೆ. ಈ ಪರೀಕ್ಷೆಯು ಭಾರತದ ಆತನಿರ್ಭರ ಭಾರತ ಯೋಜನೆಯ ಭಾಗವಾಗಿದೆ. ಇದು ಅಗ್ನಿ ಸರಣಿಯ ಆರನೇ ಕ್ಷಿಪಣಿಯಾಗಿದ್ದು, ಇದನ್ನು ಈಗಾಗಲೇ ಭಾರತೀಯ ಸೇನೆಯಲ್ಲಿ ನಿಯೋಜಿಸಲಾಗಿದೆ. ಈ ಹೊಸ ಪೀಳಿಗೆಯ ಕ್ಷಿಪಣಿಯನ್ನು ರೈಲು ಆಧಾರಿತ ಮೊಬೈಲ್ ಲಾಂಚರ್‌ನಿಂದ ಉಡಾಯಿಸಲಾಯಿತು. ಪರೀಕ್ಷೆಯು ಸಂಪೂರ್ಣ ಯಶಸ್ವಿಯಾಗಿದೆ. 2,000 ಕಿ.ಮೀ.ವರೆಗಿನ ವ್ಯಾಪ್ತಿಗಾಗಿ ವಿನ್ಯಾಸಗೊಳಿಸಲಾದ ಈ ಕ್ಷಿಪಣಿಯು ಚಲನಶೀಲತೆ ಮತ್ತು ತ್ವರಿತ ನಿಯೋಜನೆಯನ್ನು ಹೆಚ್ಚಿಸಲು ಸುಧಾರಿತ ವೈಶಿಷ್ಟ್ಯಗಳನ್ನು ಒಳಗೊಂಡಿದೆ. ಈ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉಡಾವಣೆಯ ಕುರಿತು ತಮ ಸಾಮಾಜಿಕ ಜಾಲತಾಣ ಎಕ್?ಸನಲ್ಲಿ ಪೋಸ್ಟ್ ಮಾಡಿದ್ದು, ಭಾರತವು ರೈಲು ಆಧಾರಿತ ಮೊಬೈಲ್ ಲಾಂಚರ್ ವ್ಯವಸ್ಥೆಯಿಂದ ಮಧ್ಯಂತರ ಶ್ರೇಣಿಯ ಅಗ್ನಿ-ಪ್ರೈಮ್ ಕ್ಷಿಪಣಿಯ ಯಶಸ್ವಿ ಉಡಾವಣೆಯನ್ನು ನಡೆಸಿದೆ. ಈ ಮುಂದಿನ ಪೀಳಿಗೆಯ ಕ್ಷಿಪಣಿಯನ್ನು 2000 ಕಿ.ಮೀ.ವರೆಗಿನ ವ್ಯಾಪ್ತಿಯನ್ನು ಕ್ರಮಿಸಲು ವಿನ್ಯಾಸಗೊಳಿಸಲಾಗಿದೆ ಮತ್ತು ವಿವಿಧ ಸುಧಾರಿತ ವೈಶಿಷ್ಟ್ಯಗಳೊಂದಿಗೆ ಸಜ್ಜುಗೊಂಡಿದೆ.ಈ ಸಾಧನೆಗಾಗಿ ಅವರು ಡಿಆರ್‌ಡಿಒ ಇಂಡಿಯಾ ಸ್ಟ್ರಾಟೆಜಿಕ್ ಫೋರ್ಸಸ್ ಕಮಾಂಡ್ (ಎಸ್ ಎಫ್ ಸಿ) ಮತ್ತು ಸಶಸ್ತ್ರ ಪಡೆಗಳನ್ನು ಅಭಿನಂದಿಸಿದ್ದಾರೆ. ಈ ಯಶಸ್ವಿ ಹಾರಾಟ ಪರೀಕ್ಷೆಯು ಭಾರತವನ್ನು ಮೂವ್ ರೈಲ್ ನೆಟ್‌ವರ್ಕ್‌ನಿಂದ ಕ್ಯಾನಿಸ್ಟರೈಸ್ಡ್ ಲಾಂಚ್ ಸಿಸ್ಟಮ್ ಅನ್ನು ಅಭಿವೃದ್ಧಿಪಡಿಸಿದ ಸಾಮರ್ಥ್ಯ ಹೊಂದಿರುವ ಆಯ್ದ ರಾಷ್ಟ್ರಗಳ ಗುಂಪಿಗೆ ಸೇರಿಸಿದೆ ಎಂದು ಬರೆಯಲಾಗಿದೆ. ಪರೀಕ್ಷೆಯು ಎಲ್ಲಾ ಉದ್ದೇಶಗಳನ್ನು ಪೂರೈಸಿದೆ.

## ಹಿಂದಿ ಹೇರಿಕೆ ವಿರೋಧಿಸಿ ಪ್ರತಿಭಟನೆ

**ಬೆಂಗಳೂರು:** ರಾಜಭಾಷಾ ಹೆಸರಿನಲ್ಲಿ ಹಿಂದಿ ಹೇರಿಕೆಯನ್ನು ವಿರೋಧಿಸಿ ಕನ್ನಡ ಪರ ಸಂಘಟನೆಯ ಸದಸ್ಯರು ಗುರುವಾರ ಇಲ್ಲಿನ ಪಂಚತಾರಾ ಹೋಟೆಲ್‌ಗೆ ನುಗ್ಗಿ ಪ್ರತಿಭಟಿಸಿದರು. ಗೃಹ ಸಚಿವಾಲಯದ ರಾಜಭಾಷಾ ಸಮಿತಿಯು ಪಂಚತಾರಾ ಹೋಟೆಲ್‌ನಲ್ಲಿ ಹಿಂದಿ ಪ್ರಚಾರ ಸಭೆ'ಯನ್ನು ಆಯೋಜಿಸಿತ್ತು. ಸ್ಥಳಕ್ಕೆ ಪ್ರತಿಭಟನಾಕಾರರು ಪ್ರವೇಶಿಸಿದಾಗ ಆರು ಸಂಸದರು ಹಾಜರಿದ್ದರು ಎಂದು ಮೂಲಗಳು ತಿಳಿಸಿವೆ. ಕಾರ್ಯಕ್ರಮದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ಕಾರ್ಯಕರ್ತರು ಈ ಸಭೆಯು ಹಿಂದಿಯೇತರ ಮಾತನಾಡುವ ರಾಜ್ಯಗಳ ಮೇಲೆ ಹಿಂದಿ ಹೇರುವ ಪ್ರಯತ್ನವಾಗಿದೆ ಎಂದು ಆರೋಪಿಸಿದರು. ಹಠಾತ್ ಪ್ರತಿಭಟನೆಯು ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿಯನ್ನು ನಿರ್ಮಾಣ ಮಾಡಿತು. ಆದರೆ, ತಕ್ಷಣವೇ ಪೊಲೀಸರು ಮಧ್ಯ ಪ್ರವೇಶಿಸಿದರು.

## ಇಂದು ಪಂಚಮಸಾಲಿ ಸಮಿಕ್ಷಾ ಮಾಹಿತಿ ಪ್ರಚಾರಕ್ಕೆ ಚಾಲನೆ

**ತಾಳಿಕೋಟೆ:** ಕರ್ನಾಟಕ ಸರ್ಕಾರ ವತಿಯಿಂದ ಆರ್ಥಿಕ ಸಮಾಜಿಕ ಜಾತಿ ಸಮಿಕ್ಷೆ ನಡೆದಿದೆ ಎಲ್ಲಕಡೆ ಮನೆ ಮನೆಗೆ ಸಮಿಕ್ಷೆ ಮಾಡಲು ಬರುತ್ತಿದ್ದು ಈಗಾಗಲೇ ನಾನು ಎರಡು ಸಭೆ ಕರೆದು ಏನು ಬರೆಸಬೇಕೆಂಬುದರ ಬಗ್ಗೆ ಮಾಹಿತಿ ನೀಡಿದ್ದೇನೆ ಅದರಂತೆ ಪಂಚಮಸಾಲಿ ಸಮಾಜದವರು ಕೋಡ್ 0868 ಬರೆಯಿಸಬೇಕು ಇದಕ್ಕೆ ಸಾಂಕೇತಿಕವಾಗಿ ಚಾಲನೆ ಕೊಡಬೇಕೆಂದು ತಾಳಿಕೋಟೆಯಲ್ಲಿ ಪಂಚಮಸಾಲಿ ಸಮಾಜದ ವತಿಯಿಂದ ಇದೇ ದಿ. 26 ರಂದು ಸಾಯಂಕಾಲ 4 ಗಂಟೆಗೆ ರಾಜವಾಡೆಯಿಂದ ಪ್ರಚಾರ ಕಾರ್ಯಕ್ಕೆ ಚಾಲನೆ ಕೊಡಲಾಗುತ್ತಿದ್ದು ಅಂದು ಸಮಾಜ ಬಾಂದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೂಡಲ ಸಂಗಮ ಪಂಚಮ ಸಾಲಿ ಪೀಠದ ಜಗದ್ಗುರು ಬಸವಜಯ ಶ್ರೀ ಮೃತ್ಯುಂಜಯ ಮಹಾಸ್ವಾಮಿಗಳು ಮನವಿ ಮಾಡಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಿದ್ದ ಅವರು ಇತ್ತೀಚಿನ ದಿನಗಳಲ್ಲಿ ಆಗಿರತಕ್ಕಂತಹ ಯಾವುದೇ ಘಟನೆಗಳಿದ್ದರೂ ಯಾರೂ ಕೂಡಾ ಮನಸ್ಸಿಗೆ ನೋವು ಮಾಡಿಕೊಳ್ಳಬೇಡಿ ನನಗೂ ಕೂಡಾ ನೋವನ್ನು ಸಹಿಸಿಕೊಳ್ಳುವಂತಹ ಶಕ್ತಿ ಬಸವಣ್ಣ ನನಗೆ ಕೊಟ್ಟಿದ್ದಾನೆ ಹೀಗಾಗಿ ಸಮಾಜ ಬಾಂದವರು ಯಾವುದೇ ರೀತಿಯ ನೋವನ್ನು ಮಾಡಿಕೊಳ್ಳಬೇಡಿ ಎಂದು ಮನವಿ ಮಾಡಿದ ಅವರು ಆ ವಿಷಯದಲ್ಲಿ



ಭಕ್ತರು ವಿಚಲಿತರಾಗುವ ಅವಶ್ಯಕತೆ ಇಲ್ಲಾ ಸಾವಿರ ಕಷ್ಟಗಳು ಬಂದರೂ ಸಹ ಅದನ್ನು ಸಹಿಸಿಕೊಳ್ಳುವ ಎದುರಿಸುವ ಶಕ್ತಿ ಭಗವಂತನು ನೀಡಿದ್ದಾನೆ ನನ್ನ ವಿರೂದ್ದ ಷಡ್ಯಂತ್ರ ಮಾಡುತ್ತಿರುವವರೂ ಕೂಡಾ ಸಮಾಜಕ್ಕಾಗಿ ದುಡಿದವರೇ ಆಗಿದ್ದಾರೆ ನನಗೆ ಮತ್ತು ಅವರಿಗೆ ಕಮ್ಯೂನಿಕೇಶನ್ ಗ್ಯಾಫ್‌ದಿಂದ ಆಗಿದೆ ಯಾರೂ ಕೂಡಾ ಇದರ ಬಗ್ಗೆ ತಲೆ ಕೆಡಿಸಿಕೊಳ್ಳಬೇಡಿ ಸಮಾಜದ ಸಂಘಟನೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯಕೊಡಿಸುವಂತಹ ಕೆಲಸದಲ್ಲಿ ತೊಡಗುತ್ತೇನೆ ಮತ್ತೊಂದು ಸಮೂದಾಯ ನಮ್ಮ ಸಮಾಜವನ್ನು ನೋಡಿ ಗೌರವಿಸುವಂತಹ ಕಾರ್ಯದಲ್ಲಿ ನಾನು ಮುಂದಾಗುತ್ತೇನೆ ಯಾವುದೇ ಬಿನ್ನಾಭಿಪ್ರಾಯಗಳಿದ್ದರೂ ಎಲ್ಲವನ್ನು ಮರೆತು ಸಮಾಜ ಏಳಿಗೆಗಾಗಿ ದುಡಿಯೋಣವೆಂದು ಕೂಡಲ ಸಂಗಮ ಪಂಚಮ ಸಾಲಿ ಪೀಠದ ಜಗದ್ಗುರು ಬಸವಜಯ ಶ್ರೀ ಮೃತ್ಯೂಂಜಯ ಮಹಾಸ್ವಾಮಿಗಳು ಹೇಳಿದರು.

### ಬೊಲ್ಡೋಜರ್‌ನಿಂದ ನೆಲ ಸಮ ಮಾಡ್ತಿವಿ

ಕೂಡಲಸಂಗಮ ಶ್ರೀ ಹೊರಾಟದಲ್ಲಿ ಬಿನ್ನಾಭಿಪ್ರಾಯಗಳು ಬರುವದು ಸಹಜವಾಗಿದೆ ಆದರೆ ನಾನು ತೊಟ್ಟಂತಹ ಸಂಕಲ್ಪ ಇಟ್ಟಂತಹ ಗುರಿಯಕಡೆಗೆ ಮಾತ್ರ ಗಮನಕೊಡುತ್ತೇನೆ ಏನೇ ಇದ್ದರೂ ಕೂಡಾ ಬೊಲ್ಡೋಜರ್‌ಲಿಂದ ನೆಲ ಸಮಗೊಳಿಸುವ ಕೆಲಸ ನಾವು ಮಾಡುತ್ತೇವೆ ಪಾದಯಾತ್ರೆಯಿಂದ ಇಲ್ಲಿಯವರೆಗೂ ಅನೇಕ ಷಡ್ಯಂತ್ರಗಳು ಏನೇನೋ ಕುತಂತ್ರಗಳು ನಡೆಯುತ್ತಾ ಬಂದಿವೆ ಇದಕ್ಕೆ ನಾನು ವಿಚಲಿತನಾಗದೇ ಬಂದಿದ್ದೇನೆ ಸಮಾಜದ ಜನರಿಗೆ ಭಕ್ತರಿಗೆ ಸತ್ಯ ಏನು ಎಂಬುದು ಗೊತ್ತಿದೆ ಕಾಶಪ್ಪನವರ ಸಿಡಿ ಬಿಡುಗಡೆ ವಿಚಾರಕ್ಕೆ ಸಮಾಜದ ಜನರೇ ಅವರಿಗೆ ಉತ್ತರ ಕೊಡುತ್ತಾರೆಂದು ಪತ್ರಕರ್ತರ ಪ್ರಶ್ನೇಗೆ ಕೂಡಲ ಸಂಗಮ ಪಂಚಮ ಸಾಲಿ ಪೀಠದ ಜಗದ್ಗುರು ಬಸವಜಯ ಶ್ರೀ ಮೃತ್ಯೂಂಜಯ ಮಹಾಸ್ವಾಮಿಗಳು ಉತ್ತರಿಸಿದರು.

ಮಿಸಲಾತಿ ಚಳುವಳಿ ನಿಲ್ಲಲು ಸಾದ್ಯವಿಲ್ಲಾ ಪಂಚಮಸಾಲಿ ಸಮಾಜದ ಮಿಸಲಾತಿಗಾಗಿ ನಡೆದಿರುವ ಚಳುವಳಿಯೂ ಎಂತಹದ್ದೇ ಒತ್ತಡ ಬಂದರೂ ಕೂಡಾ ನಿಲ್ಲಲು ಸಾದ್ಯವಿಲ್ಲಾ ಇನ್ನುಮುಂದೆ 8ನೇ ಹಂತದ ಹೋರಾಟ ಪಂಚಮಸಾಲಿ ಪ್ರತಿಜ್ಞಾ ಕ್ರಾಂತಿ ಎಂಬ ಘೋಷವಾಕ್ಯದ ಹೆಸರಿನಲ್ಲಿ ಮೊನ್ನೇ 20 ನೇ ತಾರಿಖು ರಾಯಭಾಗ ತಾಲೂಕಿ ಹಾರುಗೇರಿನಲ್ಲಿ ತಾಲೂಕಾ ಮಟ್ಟದ ರ‍್ಯಾಲಿಯ ಮುಖಾಂತರ ಹೋರಾಟ ಚಾಲು ಮಾಡಿದ್ದೇವೆ ಈ ಹೋರಾಟ ರಾಜ್ಯದ 224 ವಿಧಾನಸಭಾ ಕ್ಷೇತ್ರ 240 ತಾಲೂಕುಗಳನ್ನು ಮಾಡಿ ಜನರ ಜೊತೆ ಸಂವಾದ ಜನರ ಜೊತೆಗೆ ಸಂದಾನ ಮುಂದೆ ಯಾವ ರೀತಿ ಸಂಘಟನೆ ಮಾಡಬೇಕು ಏನು ನಿರ್ಧಾರ ಮಾಡಬೇಕು ಮತ್ತು ಯಾವ ತಾಲೂಕಿನಲ್ಲಿ ಯಾವ ಶಾಸಕರು ನಮಗೆ ಸ್ಪಂದನೆ ಮಾಡಿದ್ದಾರೆ ಎಂಬುದನ್ನು ವಿಚಾರ ಮಾಡಿಕೊಂಡು ಕೊನೆಗೆ ಭಕ್ತರ ನಿರ್ಧಾರದಂತೆ ಪ್ರಕಟಗೊಳಿಸುತ್ತೇವೆ ರಾಯಭಾಗ ತಾಲೂಕಿನಲ್ಲಿ ಅಕ್ಟೋಬರ್ 4ನೇ ತಾರಿಖು, ರಬಕವಿ ಬನ್ನಟ್ಟಿ ತಾಲೂಕಿನಲ್ಲಿ ನಡೆಯಲಿದೆ ನಮ್ಮ ಹೋರಾಟವನ್ನು ನೋಡಿ ಸರ್ಕಾರದವರೇ ನಮಗೆ ಕರೆದು ಮನಸ್ಸು ಪರಿವರ್ತನೆ ಯಾಗಿ ನಮಗೆ ಮಿಸಲಾತಿ ಕೊಡುವಂತಹ ಪ್ರಯತ್ನ ಆಗುವವರೆಗೂ ನಮ್ಮ ನಿರಂತರ ಹೋರಾಟ ಇರಲಿದೆ, ನಮ್ಮ ಹೋರಾಟದ ಸಂದರ್ಬದಲ್ಲಿ ಯಾವ ಸರ್ಕಾರವು ನಮಗೆ ಎಷ್ಟು ಸ್ಪಂದನೆ ಮಾಡಿದೆ ಯಾವ ಸರ್ಕಾರ ನಮ್ಮ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದೆ ಎಂಬುದನ್ನು ಜನರ ಮುಂದೆ ಇಡುತ್ತಾ ಹೋಗುತ್ತೇವೆ ಜನರ ನಿರ್ಣಯದಂತೆ ನಮ್ಮ ಹೋರಾಟ ಮುಂದುವರೆಯಲಿದೆ ಎಂದು ಕೂಡಲ ಸಂಗಮ ಪಂಚಮ ಸಾಲಿ ಪೀಠದ ಜಗದ್ಗುರು ಬಸವಜಯ ಶ್ರೀ ಮೃತ್ಯೂಂಜಯ ಮಹಾಸ್ವಾಮಿಗಳು ಹೇಳಿದರು.

ಈ ಸಮಯದಲ್ಲಿ ಸಮಾಜದ ಮುಖಂಡರುಗಳು ಉಪಸ್ಥಿತರಿದ್ದರು.

## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವಿಚಾರವಾಗಿ ಗೊಂದಲವಿಲ್ಲ

**ಬೆಂಗಳೂರು:** ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವಿಚಾರವಾಗಿ ಯಾವುದೇ ಗೊಂದಲ, ತೊಂದರೆಗಳು ಉಂಟಾಗಿಲ್ಲ. ಈ ಹಿಂದೆ ಅನೇಕ ಸಮುದಾಯಗಳು ನಮ್ಮನ್ನು ಸಮೀಕ್ಷೆಯಿಂದ ಕೈಬಿಡಲಾಗಿದೆ ಎಂದು ದನಿ ಎತ್ತಿದ್ದರು. ಇದೀಗ ಎಲ್ಲರಿಗೂ ಅವಕಾಶ ಸಿಕ್ಕಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ.



ಗುರುವಾರ ವಿಧಾನಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮತನಾಡಿದ ಅವರು, ನಾವು ಎಲ್ಲರಲ್ಲಿಯೂ ಮನವಿ ಮಾಡುತ್ತಿದ್ದೇವೆ. ಸಂಘ-ಸಂಸ್ಥೆಗಳು, ವಿವಿಧ ಸಮುದಾಯದ ಮುಖಂಡರು ತಮ್ಮ ಸಮುದಾಯಗಳಲ್ಲಿ ಜಾಗೃತಿ ಮೂಡಿಸಿ ನಿಮ್ಮ ಸಮುದಾಯಗಳ ಬಗ್ಗೆ ಬರೆಸಬೇಕು. ಇಲ್ಲದಿದ್ದರೆ ಮುಂದಿನ ಪೀಳಿಗೆಗೆ ನೀವೇ ಅನ್ಯಾಯ ಮಾಡಿದಂತಾಗುತ್ತದೆ ಎಂದು ಸಲಹೆ ನೀಡಿದರು.

ಸಮೀಕ್ಷೆಯ ಬಗ್ಗೆ ಯಾರೋ ಇಬ್ಬರು ವಿರೋಧ ಮಾಡುತ್ತಾರೆ. ವಿಶೇಷ ಚೇತನರಿಗೆ ಬುದ್ದಿವಂತಿಕೆ ಹೆಚ್ಚು ಎಂದ ಅವರು, ನಾನು ಯಾವುದೇ ಸಮುದಾಯದ ಸಭೆಗೆ ಕರೆದರೂ ಹೋಗುತ್ತೇನೆ. ನನಗೆ ಯಾವುದೇ ಜಾತಿಯಿಲ್ಲ. ನಾನು ಎಲ್ಲರಿಗೂ ಬೇಕಾದವನು. ಒಕ್ಕಲಿಗರ ಪರವಾಗಿ ಮಾತ್ರ ಇರಬೇಡಿ ಎಂದು ಒಕ್ಕಲಿಗರ ಸಭೆಯಲ್ಲಿ ನಾನು ಹೇಳಿದ್ದೇನೆ. ಇತರೇ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗಳ ಬಗ್ಗೆ ನಮಗೆ ಏನು ತಿಳಿದಿರುತ್ತದೆ. ಅದಕ್ಕೆ ಅವರುಗಳು ಏನಾದರೂ ಮಾಹಿತಿ ನೀಡಲಿ ಎಂದು ಹೇಳಿದ್ದೇನೆ ಎಂದು ಹೇಳಿದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಸೂಚನೆ

# ವೈದ್ಯಕೀಯ ವ್ಯವಸ್ಥೆ ಸನ್ನದ್ಧ ಸ್ಥಿತಿಯಲ್ಲಿರಲಿ

**ಕಾರವಾರ:** ಜಿಲ್ಲೆಯಲ್ಲಿ ಯಾವುದೇ ರೀತಿಯ ವಿಪತ್ತುಗಳು ಸಂಭವಿಸಿದ ಸಂದರ್ಭದಲ್ಲಿ ಸಂತ್ರಸ್ಥರ ರಕ್ಷಣೆಗಾಗಿ ವೈದ್ಯಕೀಯ ಸೇವೆ, ಔಷಧಗಳು, ವೈದ್ಯಕೀಯ ಉಪಕರಣಗಳು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ತಕ್ಷಣದಲ್ಲಿ ಲಭ್ಯವಿರುವಂತೆ ಎಲ್ಲಾ ಅಗತ್ಯ ಮುಂಜಾಗ್ರತಾ ವ್ಯವಸ್ಥೆಗಳನ್ನು ಮಾಡಿಕೊಳ್ಳುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಸೂಚಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಪತ್ತು ಸಂದರ್ಭದಲ್ಲಿ ಸಂತ್ರಸ್ಥರ ರಕ್ಷಣೆಗಾಗಿ ತುರ್ತಾಗಿ ಸ್ಪಂದಿಸಬೇಕಿದ್ದು, ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ವೈದ್ಯಕೀಯ ಸೇವೆಗಳು ಸಂಪೂರ್ಣವಾಗಿ ಸನ್ನದ್ಧವಾಗಿರುವುದು ಅಗತ್ಯವಿದ್ದು, ಜಿಲ್ಲೆಯಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಯ ಆರೋಗ್ಯ ಕೇಂದ್ರಗಳು, ತಾಲೂಕು ಆಸ್ಪತ್ರೆಗಳು, ಜಿಲ್ಲಾ ಆಸ್ಪತ್ರೆ, ವೈದ್ಯಕೀಯ ಕಾಲೇಜು ಮತ್ತು ಖಾಸಗಿ ನರ್ಸಿಂಗ್ ಹೋಂ ಗಳಲ್ಲಿರುವ ವೈದ್ಯಕೀಯ ಉಪಕರಣಗಳು, ಔಷಧಗಳ ದಾಸ್ತಾನು,



ವೈದ್ಯರು ಮತ್ತು ಸಿಬ್ಬಂದಿಗಳ ವಿವರಗಳನ್ನು ಕ್ರೋಡೀಕರಿಸುವಂತೆ ಮತ್ತು ಆಗಾಗ್ಗೆ ಇದನ್ನು ಪರಿಶೀಲನೆ ಮಾಡುವುದರ ಮೂಲಕ ತುರ್ತು ಸಂದರ್ಭದಲ್ಲಿ ಯಾವುದೇ ವೈದ್ಯಕೀಯ ವ್ಯತ್ಯಯ ಆಗದಂತೆ ಎಚ್ಚರವಹಿಸಬೇಕು ಎಂದರು.

ತುರ್ತು ಸಂದರ್ಭದಲ್ಲಿ ಜಿಲ್ಲೆಯ ಒಂದು ಕಡೆಯಿಂದ ಮತ್ತೊಂದು ಕಡೆಗೆ ವೈದ್ಯಕೀಯ ಸೇವೆಗಳನ್ನು ಸಾಗಿಸಲು ಅಗತ್ಯವಿರುವ ವಾಹನಗಳು ಮತ್ತು ಸಮೀಪದ ರಸ್ತೆ ಮಾರ್ಗವನ್ನು ಗುರುತು ಮಾಡಿಟ್ಟುಕೊಳ್ಳಬೇಕು, ವೈದ್ಯಕೀಯ ಉಪಕರಣಗಳು ಮತ್ತು ಔಷಧಗಳ ಕೊರತೆಯಿದ್ದಲ್ಲಿ ಈಗಿನಿಂದಲೇ ಅಗತ್ಯ ಪ್ರಮಾಣದಲ್ಲಿ ಖರೀದಿ ಮಾಡಿ, ದಾಸ್ತಾನು ಮಾಡಿಟ್ಟುಕೊಳ್ಳುವಂತೆ ಮತ್ತು ದಾಸ್ತಾನು ಪಟ್ಟಿಯನ್ನು ಸಿದ್ದಪಡಿಸಿ ನಿಯಮಿತವಾಗಿ ಪರಿಶೀಲನೆ ನಡೆಸುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ವಿಪತ್ತು ನಿರ್ವಹಣಾ ಕಾರ್ಯದಲ್ಲಿ ತೊಡಗಿಕೊಳ್ಳುವ ಎಲ್ಲಾ ಇಲಾಖೆಗಳು ತಮ್ಮಲ್ಲಿರುವ ರಕ್ಷಣಾ ಉಪಕರಣಗಳ ಮಾಹಿತಿಯನ್ನು ಜಿಲ್ಲಾ ವಿಪತ್ತು ನಿರ್ವಹಣೆಯ ಕಂಟ್ರೋಲ್ ರೂಂ ಗೆ ನೀಡುವಂತೆ ಮತ್ತು ಈ ಎಲ್ಲಾ ಉಪಕರಣಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಆಗಾಗ್ಗೆ ಪರಿಶೀಲನೆ ನಡೆಸಬೇಕು, ಉಪಕರಣಗಳು ಹಳೆಯದಾಗಿದ್ದರೆ ಆಧುನಿಕ ಉಪಕರಣಗಳ ಖರೀದಿಸುವಂತೆ ನಿರ್ದೇಶನ ನೀಡಿದರು.

ರಾಜ್ಯ ಜೈವಿಕ ವಿಪತ್ತು ತಾಂತ್ರಿಕ ಸಲಹ ಸಮಿತಿಯ ಸದಸ್ಯ ಪ್ರದೀಪ್ ಮಾತನಾಡಿ, ಜಿಲ್ಲೆಯಲ್ಲಿ ವಿಪತ್ತು ಸಂಭವಿಸಿದ ಸಂದರ್ಭದಲ್ಲಿ ಅಗತ್ಯವಿರುವ ವೈದ್ಯಕೀಯ ವ್ಯವಸ್ಥೆಯನ್ನು ಒದಗಿಸುವ ಬಗ್ಗೆ ಸಂಪೂರ್ಣ ವಿವರಗಳನ್ನು ಸಿದ್ದಪಡಿಸಿಕೊಳ್ಳಬೇಕು, ವಿಪತ್ತು ನಿರ್ವಹಣಾ ಕಾರ್ಯದಲ್ಲಿ ತೊಡಗಿಕೊಂಡಿರುವ ಇಲಾಖೆಗಳ ಎಲ್ಲಾ ಸಿಬ್ಬಂದಿಗಳಿಗೆ ಅಗತ್ಯ ತರಬೇತಿಗಳನ್ನು ನೀಡಬೇಕು, ಯಾವುದೇ ಸಂದರ್ಭದಲ್ಲಿ ಎಲ್ಲಾ ಅಗತ್ಯ ಸೇವೆಗಳು ಲಭ್ಯವಿರುವಂತೆ ಸಿದ್ದತೆಗಳನ್ನು ಮಾಡಿಕೊಳ್ಳಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ. ಎನ್, ತರಬೇತಿ ಇತರ ಐ.ಎ.ಎಸ್ ಅಧಿಕಾರಿ ಝೂಫಿಶನ್ ಹಕ್, ಅಪರ ಜಿಲ್ಲಾಧಿಕಾರಿ ಸಜೀದ್ ಮುಲ್ಲಾ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ನವರಾತ್ರಿ ನಿಮಿತ್ಯ ಶ್ರೀ ದೇವಿ ಪುರಾಣ




**ರಾಯಬಾಗ:** ಪುರಾಣ ಪ್ರವಚನಗಳಿಂದ ಮನಸ್ಸಿಗೆ ನೆಮ್ಮದಿ ಸಿಗುತ್ತದೆ. ಮನುಷ್ಯನ ಜೀವನ ಶೈಲಿಯೂ ಬದಲಾಯಿಸುತ್ತದೆ ಎಂದು ಮಾತೋಶ್ರೀ ಬ್ರಹ್ಮರಾಂಬಿಕಾ ಹೇಳಿದರು. ತಾಲೂಕಿನ ಬಾವನ ಸೌಂದತ್ತಿ ಮದ ಶ್ರೀ ಮಹಾಂತ ಮಠದ ಆವರಣದಲ್ಲಿ ನವರಾತ್ರಿ ನಿಮಿತ್ಯ ನಡೆಯಲಿರುವ ಶ್ರೀ ದೇವಿ ಪುರಾಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಶ್ರೀ ದೇವಿ ಪುರಾಣವನ್ನು ಯಾರೂ ಅಧ್ಯಯನ ಮಾಡುತ್ತಾರೆ ಅವರಿಗೆ ಕಷ್ಟಗಳು ದೂರಾಗುತ್ತದೆ. ದೇವಿಯ ಆರಾಧನೆಯಲ್ಲಿ ಇರುವವರಿಗೆ ಸಂಪತ್ತು ನೀಡುತ್ತಾಳೆ. ಇಂತಹ ಮಹಾತ್ಮೆಯ ಕಥೆಯನ್ನು ಎಲ್ಲರೂ ಆಲಿಸಬೇಕು ಎಂದು ಹೇಳಿದರು.

ನವರಾತ್ರಿ ಶುಭ ಸಂದರ್ಭದಲ್ಲಿ ಎಲ್ಲರೂ ಪಾಠ ಪ್ರವಚನ ಆಲಿಸಬೇಕು. ಜೀವನ ಯಾವರೀತಿ ನಡೆಸಬೇಕು ಎಂಬುದು ಮಾಹಿತಿ ಸಿಗುತ್ತದೆ. ಗುರುಗಳ ನೀಡಿದ ಆಧ್ಯಾತ್ಮ ನಮಗೆ ಬಹಳ ಮುಖ್ಯವಾಗುತ್ತದೆ. ಎಲ್ಲರೂ ಸನ್ಮಾರ್ಗದಿಂದ ನಡೆಯಬೇಕು ಎಂದರು. ಈ ಸಂದರ್ಭದಲ್ಲಿ ಶ್ರೀ ಶಿವಶಂಕರ ಸ್ವಾಮೀಜಿಯವರ ದಿನ ದಿವ್ಯ ಸಾನಿಧ್ಯ ವಹಿಸಿದ್ದರು. ಶ್ರೀ ನಾಗಲಂಬಿಕಾ ದೇವಿ ಸೇರಿದಂತೆ ಮಹಂತ ಭಕ್ತ ಮಂಡಲ ಕಮಿಟಿ ಹಾಗೂ ಅನೇಕರು ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರದ ದುರಾಡಳಿತ ನೀತಿ ಖಂಡಿಸಿ ಪ್ರತಿಭಟನೆ




**ತಾಲೂಕಿನ ತುರನೂರ ಗ್ರಾಮದಲ್ಲಿ ಬಿಜೆಪಿ ಮಂಡಲ ವತಿಯಿಂದ ರಾಜ್ಯ ಸರಕಾರದ ದುರಾಡಳಿತ ನೀತಿ ಖಂಡಿಸಿ ಪ್ರತಿಭಟನೆ ನಡೆಸಿದರು.**

**ರಾಮದುರ್ಗ:** ರಾಜ್ಯದ ಕಾಂಗ್ರೆಸ್ ಸರಕಾರ ದುರಾಡಳಿತ ನೀತಿಯನ್ನು ಖಂಡಿಸಿ ತಾಲೂಕು ಬಿಜೆಪಿ ವತಿಯಿಂದ ಮಂಡಲ ಅಧ್ಯಕ್ಷ ಡಾ. ಕೆ.ವಿ.ಪಾಟೀಲ ನೇತೃತ್ವದಲ್ಲಿ ತುರನೂರ ಗ್ರಾಮದಲ್ಲಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಮಾತನಾಡಿದ ಮಂಡಲ ಅಧ್ಯಕ್ಷ ಕೆ.ವಿ.ಪಾಟೀಲ, ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಎರಡುವರೆ ವರ್ಷಗಳು ಗತಿಸಿದ್ದರೂ ಹೇಳಿಕೊಳ್ಳುವಂತ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿಲ್ಲ. ರಸ್ತೆಗಳೆಲ್ಲವೂ ಗುಂಡಿ ಬಿದ್ದಿಹೋಗಿವೆ. ಜನರ ಸಂಚಾರಕ್ಕೆ ಸಾಕಷ್ಟು ತೊಂದರೆಯಾಗುತ್ತಿದೆ. ಘೋಷಣೆ ಮಾಡಿರುವ ಪಂಚಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನ ಮಾಡಿಲ್ಲ. ಅಭಿವೃದ್ಧಿ ಕೆಲಸಗಳಿಗೆ ಮೀಸಲಿಟ್ಟ ಅನುದಾನವನ್ನು ಬೇಕಾಬಿಟ್ಟು ಖರ್ಚು ಮಾಡಿ ರಾಜ್ಯ ಬೊಕ್ಕಸವನ್ನೆ ಲೂಟಿ ಮಾಡುತ್ತಿದೆ. ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ. ತಾಲೂಕಿನ ಜನತೆ ಮುಂಬರುವ ಚುನಾವಣೆಗಳಲ್ಲಿ ಸರಕಾರಕ್ಕೆ ತಕ್ಕ ಪಾಠ ಕಲಿಸಬೇಕೆಂದು ಜನರಲ್ಲಿ ಮನವಿ ಮಾಡಿದರು.

ಮುಖಂಡರಾದ ವಿಜಯ ಗುಡದಾರಿ, ಜನಕರಡ್ಡಿ ಹಕಾಟಿ, ಮಲ್ಲಿಕಾರ್ಜುನ ಭಾವಿಕಟ್ಟಿ, ಬಸವರಾಜ ಮಾದನ್ನವರ, ತಿಪ್ಪಣ್ಣಾ ಪೂಜೇರ, ಮಾರುತಿ ಮೆಟ್ಟಿನ, ದಾನಪ್ಪ ಲಮಾಣಿ, ಬಾಬುರಡ್ಡಿ ಹೆಬ್ಬಳ್ಳಿ, ಹನಮಂತ ತಿಪ್ಪರಡ್ಡಿ, ಜಿ.ಟಿ ಪಾಟೀಲ, ಪ್ರಕಾಶ ಮೆಟ್ಟಿನ, ಮಹ್ಮದ ನಿಗದಿ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು..

## ಸ್ವಚ್ಛತಾ ಹೀ ಸೇವಾ ಅಭಿಯಾನ

**ರಬಕವಿ-ಬನಹಟ್ಟಿ:** ತಾಲೂಕಿನಲ್ಲಿ ಸೆ.17 ರಿಂದ ಅ.2 ರವರೆಗೆ ನಡೆಯುತ್ತಿರುವ ಸ್ವಚ್ಛತಾ ಹೀ ಸೇವಾ ಅಭಿಯಾನದ ಮೂಲಕ ಶುಚಿತ್ವ ಮತ್ತು ನೈರ್ಮಲ್ಯತೆ ಬಗ್ಗೆ ಜಾಗೃತಿ ಮೂಡಿಸಬೇಕೆಂದು ತಾಪಂ ಕಾರ್ಯ ನಿರ್ವಾಹಕ ಸಿದ್ದಪ್ಪ ಪಟ್ಟಿಹಾಳ ಹೇಳಿದರು.

ಗುರುವಾರ ನಗರದ ತಾಪಂ ಕಚೇರಿ ಆವರಣದಲ್ಲಿ ಸ್ವಚ್ಛೋತ್ಸವ ಅಭಿಯಾನದಲ್ಲಿ ಮಾತನಾಡಿದ ಅವರು, ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಾರ್ವಜನಿಕರು ನೈರ್ಮಲ್ಯ ಹಾಗೂ ಶುಚಿತ್ವವನ್ನು ಕಾಪಾಡಿಕೊಳ್ಳಲು ಆದ್ಯತೆ ನೀಡುವಂತೆ ಜನಜಾಗೃತಿ ಮೂಡಿಸುವದು ಈ ಅಭಿಯಾನದ ಉದ್ದೇಶವಾಗಿದೆ. ಗ್ರಾಮೀಣ ಪ್ರದೇಶದ ಬೃಹತ್ ಕಸದ ರಾಶಿಯನ್ನು ಗುರ್ತಿಸಿ ಅವುಗಳನ್ನು ಸ್ವಚ್ಛಗೊಳಿಸುವದು. ಐತಿಹಾಸಿಕ ಸ್ಥಳಗಳು ಹಾಗೂ ಧಾರ್ಮಿಕ ಸ್ಥಳಗಳ ಶುಚಿತ್ವವನ್ನು ಸುಧಾರಿಸಲು ಶ್ರಮದಾನಗಳನ್ನು ಹಮ್ಮಿಕೊಳ್ಳಲಾಗುವದೆಂದರು.

ಇಂದು ಒಂದು ದಿನ, ಒಂದು ಗಂಟೆ, ಎಲ್ಲರೂ ಶ್ರಮದಾನ ಮಾಡುವ ಮೂಲಕ ಅಭಿಯಾನದ ಯಶಸ್ವಿಯಾಗುವಲ್ಲಿ ಕಾರಣವಾಗಿದ್ದು, ಬಹುತೇಕ ಸಾರ್ವಜನಿಕರು ಹಾಗು ಸಂಘ-ಸಂಸ್ಥೆಗಳು ಕೈ ಜೋಡಿಸಿ ಕಾರ್ಯ ನಡೆಸಿರುವದಕ್ಕೆ ಅಭಿನಂದಿಸಿದರು. ಇದೇ ಸಂದರ್ಭ ಬಸವರಾಜ ಮುನ್ನೋಳ್ಳಿ, ಸದಾನಂದ ಅರನಾಡ, ಬಸವರಾಜ ಕಟಾವೆ, ಗಂಗಪ್ಪ ಸವದಿ, ವಿನಯಕುಮಾರ ಹುಲ್ಯಾಳ, ಜ್ಯೋತಿ ಗೊಲಬಾಂವಿ, ಜ್ಯೋತಿ ಉಳ್ಳಾಗಡ್ಡಿ, ಲಕ್ಷ್ಮೀ ಕೀರ್ತಿ, ರಾಜು ಗಾಡಿವಡ್ಡರ, ಆಕಾಸ ಹೋಸಕೋಟಿ, ರಾಮ ಹೊಸೂರ, ಕೇಶವ ದೋಮಡೆಕರ, ಅಶ್ವಿನಿ ಹೊಸಕೋಟಿ, ಆನಂದ ಕಾಂಬಳೆ, ಪ್ರವೀಣ ಹಿಡಕಲ್ ಸೇರಿದಂತೆ ಅನೇಕರಿದ್ದರು.



## ಸಮುದಾಯ ಭವನ ನಿರ್ಮಾಣಕ್ಕೆ ಹಣ ಮಂಜೂರು

**ಗೋಕಾಕ:** ಹುಕ್ಕೇರಿ ತಾಲೂಕಿನ ಸಾರಾಪೂರ ಗ್ರಾಮದ ಶಾಂತಿನಾಥ ದಿಗಂಬರ್ ಜೈನ್ ಮಂದಿರ ವತಿಯಿಂದ ಸಮುದಾಯ ಭವನ ನಿರ್ಮಿಸಲು 50 ಲಕ್ಷ ರೂ. ಹಾಗೂ ಬಾಗೇವಾಡಿಯ ಆದಿನಾಥ ಭಸ್ತಿ ದೇವಸ್ಥಾನ ಕಮಿಟಿಯಿಂದ ಸಮುದಾಯ ಭವನ ನಿರ್ಮಿಸಲು 40 ಲಕ್ಷ ರೂಪಾಯಿಯನ್ನು ಸರ್ಕಾರದಿಂದ ಮಂಜೂರು ಮಾಡಲಾಗಿದೆ ಎಂದು ಬೆಳಗಾವಿ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ನಗರದ ಹಿಲ್ ಗಾರ್ಡನ್ ಕಚೇರಿಯಲ್ಲಿ ಮಾಧ್ಯದವರೊಂದಿಗೆ ಈ ಕುರಿತು ಮಾತನಾಡಿದ ಅವರು, ಹುಕ್ಕೇರಿ ತಾಲೂಕಿನ ಜೈನ್ ಸಮುದಾಯದ ಮುಖಂಡರು ಹುಕ್ಕೇರಿಯ ಅನೇಕ ಗ್ರಾಮಗಳಲ್ಲಿ ಸಮುದಾಯ ಭವನ ನಿರ್ಮಿಸಲು ಅನುದಾನ ನೀಡಬೇಕೆಂದು ಮನವಿ ಮಾಡಿದ್ದರೂ, ಆದ ಕಾರಣ ಹುಕ್ಕೇರಿ ತಾಲೂಕಿನ ಎರಡು ಗ್ರಾಮಗಳಲ್ಲಿ ಸಮುದಾಯ ಭವನ ನಿರ್ಮಿಸಲು ಅನುದಾನ ಬಿಡುಗಡೆಗೊಳಿಸಲಾಗಿದ್ದು, ಇಂದು ನಾಲ್ಕು ಗಂಟೆಗೆ ಹುಕ್ಕೇರಿ ಪ್ರವಾಸಿ ಮಂದಿರದಲ್ಲಿ ಅನುದಾನ ಬಿಡುಗಡೆಗೊಳಿಸಿರುವ ಆದೇಶ ಪ್ರತಿಯನ್ನು ಪಡೆಯಬೇಕೆಂದು ತಿಳಿಸಿದರು.

ಇನ್ನು ಹುಕ್ಕೇರಿ ತಾಲೂಕಿನ 23 ಗ್ರಾಮಗಳಿಗೆ ಲೋಕೋಪಯೋಗಿ ಇಲಾಖೆಯಿಂದ 1 ಕೋಟಿ ರೂಪಾಯಿ ವೆಚ್ಚದಲ್ಲಿ ಹೈಮಾಸ್ಟ್ ದೀಪ ಅಳವಡಿಸಲು ಆದೇಶಿಸಲಾಗಿದ್ದು, ಸಂಬಂಧಿಸಿದ ಗ್ರಾಮದ ಮುಖಂಡರು ಆದೇಶ ಪ್ರತಿ ಪಡೆಯಲು ಹುಕ್ಕೇರಿ ಪ್ರವಾಸಿ ಮಂದಿರಕ್ಕೆ ಆಗಮಿಸಬೇಕೆಂದು ಸಚಿವರು ತಿಳಿಸಿದ್ದಾರೆ.

**ಹೈಮಾಸ್ಟ್ ದೀಪ ಮಂಜೂರಾದ ಗ್ರಾಮಗಳು:** ಹುಕ್ಕೇರಿ ತಾಲೂಕಿನ ಶಿರಪುರ, ಇಟ್ನಿ, ಕರಜಗಾ, ಹಂಜಾನಟ್ಟಿ, ಯಾದಗೂಡ, ಶಿರಹಟ್ಟಿ, ಶಿರಹಟ್ಟಿ ಕೆ.ಡಿ,




ಬೆಳವಿ, ಸೈಲಾಪುರ, ಅಮಿನಬಾವಿ, ಕಮತನೂರ, ನಿಡಸೋಸಿ, ಅಂಕಲಿ, ಬೋರ್ಗಲ್ಲ, ಚೆಸ್ತಿ, ಆಲೂರ ಕೆ.ಎಂ, ಅಕ್ಕಿವಾಟ, ಹಂದಿಗೂರ, ನಿಡಸೋಸಿ ವಾಡಿ, ಅಮ್ಮಣಗಿ ಸೇರಿದಂತೆ ಹುಕ್ಕೇರಿ ನಗರಕ್ಕೆ ಮೂರು ಹೈಮಾಸ್ಟ್ ದೀಪ ಮಂಜೂರು ಮಾಡಲಾಗಿದೆ.

ಇದೇ ರೀತಿ ಹುಕ್ಕೇರಿ ತಾಲೂಕಿನ ಎಸ್ಸಿ, ಎಸ್ಟಿ, ಮುಸ್ಲಿಂ ಸಮುದಾಯದವರಿಗೂ ಭರ್ಜರಿ ಗಿಫ್ಟ್ ನೀಡಿದ ಸಚಿವರು, ಹುಕ್ಕೇರಿ ತಾಲೂಕಿನ ಹರಗಾಪುರ, ಹಡಲಗಾ, ಕೆ.ಎಸ್. ನಾಗನೂರು, ಶಿರಪೂರು ಗ್ರಾಮಗಳಲ್ಲಿ ವಾಲ್ಮೀಕಿ ಭವನ ನಿರ್ಮಿಸಲು ತಲಾ 20 ಲಕ್ಷ ರೂ. ಅನುದಾನ ಬಿಡುಗಡೆಗೊಳಿಸಿದ್ದು, ಹುಕ್ಕೇರಿ ತಾಲೂಕಿನ 17 ಗ್ರಾಮಗಳಲ್ಲಿ ತಲಾ 20 ಲಕ್ಷ ರೂ. ಅನುದಾನದಂತೆ ಡಾ.ಬಿ.ಆರ್. ಅಂಬೇಡ್ಕರ್ ಭವನ, ಬಾಬು ಜಗಜೀವನ ರಾಮ್ ಭವನ ನಿರ್ಮಿಸಲು ಅನುದಾನ ಬಿಡಗಡೆಗೊಳಿಸಿದ್ದಾಗಿ ಮಾಹಿತಿ ನೀಡಿದರು. ತಾಲೂಕಿನ ವಿವಿಧ ಗ್ರಾಮದ ಅಲ್ಪಸಂಖ್ಯಾತ ಕಾಲೋನಿಗಳಲ್ಲಿಯೂ ಸಿಸಿ ರಸ್ತೆ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗೊಳಿಸಿದ್ದಾರೆ.

# ರಾಜ್ಯ ಸರ್ಕಾರ ನಿರ್ಧಾರ ಖಂಡಿಸಿ ಬೃಹತ್ ಪ್ರತಿಭಟನೆ

**ಯರಗಟ್ಟಿ:** ಮಹರ್ಷಿ ವಾಲ್ಮೀಕಿ ನಾಯಕ ಸಂಘದ ಯರಗಟ್ಟಿ ತಾಲೂಕಾ ಘಟಕದಿಂದ ಪರಿಶಿಷ್ಟ ಪಂಗಡದ (ಎಸ್.ಡಿ) ಮೀಸಲಾತಿ ಪಟ್ಟಿಗೆ ಅನ್ಯ ಸಮುದಾಯಗಳನ್ನು ಸೇರಿಸಲು ಹುನ್ನಾರ ನಡೆಸುವ ರಾಜ್ಯ ಸರ್ಕಾರ ನಿರ್ಧಾರವನ್ನು ಖಂಡಿಸಿ ಬೃಹತ್ ಪ್ರತಿಭಟನೆ ಮೂಲಕ ತಹಶೀಲ್ದಾರ ಎಮ್ ವ್ಹಿ ಗುಂಡಪ್ಪಗೋಳ ಮೂಲಕ ರಾಜ್ಯಪಾಲರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ವಾಲ್ಮೀಕಿ ಸಮುದಾಯದ ಹಿರಿಯರಾದ ಎಸ್. ಎಚ್. ನಾಯ್ಕರ ಮಾತನಾಡಿದ ಅವರು ಕರ್ನಾಟಕ ರಾಜ್ಯದಲ್ಲಿ ಪರಿಶಿ?್ಟ ಪಂಗಡದ ನಾಯಕ ತಳವಾರ ಹೆಸರಿನಲ್ಲಿ ಪ್ರವರ್ಗ-1 ರಲ್ಲಿರುವ ಬೇರೆ ಸಮುದಾಯದವರು ಅಕ್ರಮವಾಗಿ ಪರಿಶಿ?್ಟ ಪಂಗಡದ ಜಾತಿ ಪ್ರಮಾಣ ಪತ್ರ ಮತ್ತು ಸಿಂಧುತ್ವ ಪ್ರಮಾಣ ಪತ್ರಗಳನ್ನು ತೆಗೆದುಕೊಂಡು ವಂಚಿಸುತ್ತಿರುವ ಹಾಗೂ ಅನ್ಯ ಸಮುದಾಯದವರನ್ನು ಎಸ್.ಟಿ ಪಟ್ಟಿಗೆ ಸೇರಿಸುತ್ತಿರುವುದು ಸಮಂಜಸವಲ್ಲ ಭಾರತ ಸಂವಿಧಾನ ಪರಿಚ್ಛೇಧ 341 ಮತ್ತು 342ರಡಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ರಾಜಕೀಯವಾಗಿ ಹಿಂದುಳಿದಿರುವ ಅನೇಕ




ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗಾಗಿ 1950 ಮತ್ತು ಅದರ ನಂತರ ಹೊರಡಿಸಿರುವ ಅಧಿಸೂಚನೆಗಳಡಿ ಮೀಸಲಾತಿ ನೀಡಿ ಅವಕಾಶಗಳನ್ನು ಒದಗಿಸಿರುವುದು ಸರಿಯ?, ಆದರೆ ದೇಶಕ್ಕೆ ಸ್ವಾತಂತ್ರ್ಯ ಬಂದು 7 ದಶಕಗಳು ಕಳೆಯುತ್ತಾ ಬಂದರೂ ಪರಿಶಿ?್ಟ ಪಂಗಡದವರ ಮೇಲೆ ನಿರಂತರ ಶೋ?ಣೆ, ದಬ್ಬಾಳಿಕೆ, ದೌರ್ಜನ್ಯಗಳು ಮತ್ತು ಮೀಸಲಾತಿಯ ವಂಚನೆಯ ಪ್ರಕರಣಗಳು ಹೆಚ್ಚಾಗುತ್ತಿರುವುದು ಖಂಡನೀಯ ಎಂದು ಹೇಳಿದರು. ನಿವೃತ್ತ ತಹಶೀಲ್ದಾರ ಬಾಬಣ್ಣಾ ತಳವಾರ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-1 ರಲ್ಲಿರುವ ಬೆಸ್ತ, ಅಂಬಿಗ, ಕಬ್ಬಲಿಗ, ಕಬ್ಬೇರ, ಕೊಲಿ ಮುಂತಾದ ಜಾತಿಯವರಿಗೆ ನಾಯಕ ತಳವಾರರ ಹೆಸರಿನಲ್ಲಿ ಪರಿಶಿಷ್ಟ ಪಂಗಡದ ನಕಲಿ ಜಾತಿ ಪ್ರಮಾಣ ಪತ್ರಗಳನ್ನು ನೀಡುವುದನ್ನು ಕೂಡಲೆ ನಿಲ್ಲಿಸುವುದು

ಹಾಗೇನಾದರೂ ನಾಯಕ ತಳವಾರ ಜಾತಿಗೆ ಸೇರಿಲ್ಲದವರು ವಾಮ ಮಾರ್ಗದಲ್ಲಿ ಪರಿಶಿಷ್ಟ ಪಂಗಡದ ನಕಲಿ ಜಾತಿ ಪ್ರಮಾಣ ಪತ್ರಗಳನ್ನು ಪಡೆದಿದ್ದಲ್ಲಿ ಕರ್ನಾಟಕ ಉಚ್ಚನ್ಯಾಯಲಯದ ಆದೇಶದಂತೆ ಅಂತಹವರ ಮೇಲೆ ಮತ್ತು ಅಂತಹ ಜಾತಿ ಪ್ರಮಾಣ ಪತ್ರಗಳನ್ನು ನೀಡಿದ ಅಧಿಕಾರಿಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಿ ನಿಯಮಾನುಸಾರ ಕ್ರಮ ತೆಗೆದುಕೊಳ್ಳಲು ಒತ್ತಾಯಿಸಿದೆ.

ರಾಜ್ಯ ಸರ್ಕಾರ ಕುಲಶಾಸ್ತ್ರೀಯ ಅಧ್ಯಯನದೊಂದಿಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವಾಗ ಅಲ್ಲಿಂದ ಪರಿಶಿ?್ಟ ಪಂಗಡದ ಪಟ್ಟಿಯ ಕ್ರಮ ಸಂಖ್ಯೆ 38ರಲ್ಲಿ ಸೇರಿಸಿರುವುದು ನಾಯಕ ತಳವಾರ ಜಾತಿ ಮಾತ್ರ, ಆದ್ದರಿಂದ ಬೆಸ್ತ, ಅಂಬಿಗ, ಕಬ್ಬಲಿಗ, ಕಬ್ಬೇರ, ಕೊಲಿ ಮುಂತಾದ ಜಾತಿಗೆ ಸೇರಿದ ತಳವಾರರನ್ನು ಅವರು ಸೇರಿರುವ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-1 ರ ಕ್ರಮ ಸಂಖ್ಯೆ 6 ರಲ್ಲಿ ಬೆಸ್ತ ಮುಂತಾದವುಗಳ ಜೊತೆ ಸೇರಿಸಿ ಉದ್ಭವಿಸಿರುವ ಗೊಂದಲಕ್ಕೆ ತೆರೆ ಎಳೆಯಬೇಕು ಎಂದು ಆಗ್ರಹಿಸಿರು.

ಈ ವೇಳೆ ಸಾ. ತ. ನಾಯ್ಕರ, ಮುದಕಪ್ಪ ಆನಿಗೋಳ, ಮಾರುತಿ ಕುರುಬಗಟ್ಟಿ, ಮಾರುತಿ ಗೋರಗುದ್ದಿ, ಕೆಂಚಪ್ಪ ಬೆಳ್ಳಿಕುಂಪಿ, ಸೋಮನಗೌಡ ಪಾಟೀಲ, ವಿಠ್ಠಲ ನಾಯ್ಕರ, ಅರ್ಜುನ ದಳವಾಯಿ, ಶಶಿಧರ ಪಾಟೀಲ, ಸುರೇಶ ದಾಸಪ್ಪನವರ, ಪ್ರಕಾಶ ಮುರಗೋಡ, ಸಿದ್ದಪ್ಪ ಮಾಳಗಿ, ಪ್ರಕಾಶ ಲಿಂಗರೆಡ್ಡಿ, ಬಿ. ಬಿ. ತಳವಾರ, ಶಿವಪ್ಪ ಹೊಗರ್ತಿ, ಭೀಮಪ್ಪ ದೇಗಾನಟ್ಟಿ, ಶಂಕರ ಮಾದನ್ನವರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



**ಬೈಲಹೊಂಗಲ ಪಟ್ಟಣದ ಹೊಸೂರ ರಸ್ತೆಯಲ್ಲಿನ ಶ್ರೀ ಭಗಳಂಭದೇವಿ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಶ್ರೀದೇವಿಗೆ ಗುರುವಾರ ವಿಶೇಷ ಅಲಂಕಾರ ಮಾಡಲಾಗಿತ್ತು.**

# ಭತ್ತ ಉತ್ಪನ್ನ ಖರೀದಿ ಕೇಂದ್ರ ಆರಂಭಕ್ಕೆ ಸೂಚನೆ

**ಹಾವೇರಿ:** ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ ಭತ್ತ ಉತ್ಪನ್ನ ಖರೀದಿ ಕೇಂದ್ರಗಳನ್ನು ಜಿಲ್ಲೆಯ ವಿವಿಧ ತಾಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ಆರಂಭಿಸುವಂತೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನಿಷ್ಟ ಬೆಂಬಲ ಬೆಲೆಯಡಿ ಸರ್ಕಾರದ ಮಾರ್ಗಸೂಚಿಯಂತೆ ಭತ್ತ ಖರೀದಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

**ಬೆಂಬಲ ಬೆಲೆ:** ಬೆಂಬಲ ಬೆಲೆ ಯೋಜನೆಯಡಿ ಸಾಮಾನ್ಯ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ.2,369ರಂತೆ ಹಾಗೂ ಗ್ರೇಡ್ ಎ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ.2,389/- ರಂತೆ ಭತ್ತ ಖರೀದಿಗೆ ದಿ.15-09-2025 ರಿಂದ ದಿ.31-10-2025ರವರೆಗೆ ರೈತರ ನೋಂದಣಿ ಪ್ರಕ್ರಿಯೆ ಕೈಗೊಳ್ಳಲು ಹಾಗೂ ದಿ.01-11-2025 ರಿಂದ 28-02-2026ರವರೆಗೆ ನೋಂದಾಯಿತ ರೈತರಿಂದ ಭತ್ತವನ್ನು ಖರೀದಿಸಿ, ಮಿಲ್‌ಗಳಲ್ಲಿ ಶೇಖರಿಸುವ ಮತ್ತು ಪರಿವರ್ತಿಸುವ ಕಾರ್ಯ ಕೈಗೊಳ್ಳಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿದೆ.

ರೈತರಿಂದ ಖರೀದಿಸಿದ ಉತ್ಪನಗಳ ಮೊತ್ತವನ್ನು ರೈತರ ಹೆಸರಿನ ಆಧಾರ್ ಸಂಖ್ಯೆ ಜೋಡಣೆಯಾದ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಹಣ ಜಮೆ ಮಾಡಬೇಕು ಎಂದು ಸೂಚನೆ ನೀಡಿದರು.

### ಖರೀದಿ ಕೇಂದ್ರಗಳ ವಿವರ

ಬೆಂಬಲ ಬೆಲೆ ಯೋಜನೆಯಡಿ ಭತ್ತ ಖರೀದಿ ಕೇಂದ್ರಗಳನ್ನು ಹಾನಗಲ್, ರಾಣೇಬೆನ್ನೂರು, ಶಿಗ್ಗಾಂವ ಹಾಗೂ ಹಿರೇಕೆರೂರು/ರಟ್ಟಿಹಳ್ಳಿ ತಾಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಪ್ರಾಂಗಣದಲ್ಲಿ ತೆರೆಯಲು ಸೂಚನೆ ನೀಡಿದರು.

ಬೆಂಬಲ ಬೆಲೆಯಡಿ ಭತ್ತ ಉತ್ಪನ್ನ ಖರೀದಿ ಕೇಂದ್ರ ಆರಂಭಿಸಿರುವ ಕುರಿತಂತೆ ವ್ಯಾಪಕ ಪ್ರಚಾರನಡೆಸಿ, ಕರಪತ್ರ, ಬ್ಯಾನರ್ ಅಳಡಿಸುವ ಮೂಲಕ ರೈತರಿಗೆ ಮಾಹಿತಿ ತಲುಪಿಸಬೇಕು. ರೈತರಿಂದ ಖರೀದಿಸಿದ ಭತ್ತ ಉತ್ಪನ್ನ ದಾಸ್ತಾನುಮಾಡಿಕೊಳ್ಳಲು ಮುಂಜಾಗ್ರತಾ ಕ್ರಮವಾಗಿ ಉಗ್ರಾಣಗಳನ್ನು ಕಾಯ್ದಿರಿಸಬೇಕು ಎಂದು ಸೂಚನೆ ನೀಡಿದರು.

**ನೋಡಲ್ ಅಧಿಕಾರಿಗಳ ನೇಮಕ:** ಬೆಂಬಲ ಬೆಲೆ ಯೋಜನೆಯಡಿ ಖರೀದಿ ಕೇಂದ್ರಗಳ ಪ್ರಕ್ರಿಯೆ ಮೇಲೆ ನಿಗಾ ವಹಿಸಲು ಹಾಗೂ ವ್ಯವಸ್ಥಿತವಾಗಿ ಸುಗಮವಾಗಿ ನಡೆಸಲು ಆಯಾ ತಾಲೂಕು ತಹಶೀಲ್ದಾರ, ಕಂದಾಯ ಇಲಾಖೆ ಹಾಗೂ ಸಂಬಂಧಪಟ್ಟ ತಾಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ತಾಲೂಕು ನೋಡಲ್ ಅಧಿಕಾರಿಗಳಾಗಿ ಹಾಗೂ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರನ್ನು ಜಿಲ್ಲಾ ನೋಡಲ್ ಅಧಿಕಾರಿಗಳಾಗಿ ನೇಮಕ ಮಾಡಲಾಗಿದೆ.

ಭತ್ತ ಉತ್ಪನ್ನವನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 25 ಕ್ವಿಂಟಲ್‌ನಂತೆ ಗರಿಷ್ಠ 50 ಕ್ವಿಂಟಲ್ ಭತ್ತವನ್ನು ಖರೀದಿಸಲು ಅವಕಾಶವಿದೆ.

**ಬಿತ್ತನೆ ಪ್ರದೇಶ:** ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಭತ್ತ ಉತ್ಪನ್ನ ಜಿಲ್ಲೆಯ 29,836 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಹಾನಗಲ್ ತಾಲೂಕಿನ 14,620, ಶಿಗ್ಗಾಂವ-6,681, ಹಿರೇಕೆರೂರು ಮತ್ತು ರಟ್ಟಿಹಳ್ಳಿ ತಾಲೂಕಿನಲ್ಲಿ 1,780 ಹಾಗೂ ರಾಣೇಬೆನ್ನೂರ ತಾಲೂಕಿನ 6,220 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತೆಯಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ , ತೋಟಗಾರಿಕೆ ಇಲಾಖೆ ಅಧಿಕಾರಿಗಳು, ಸಹಕಾರಿ ಸಂಘಗಳ ಉಪನಿಬಂಧಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಶಾಖಾ ವ್ಯವಸ್ಥಾಪಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

## ಸಾಹಿತಿ ಭೈರಪ್ಪಗೆ ಶ್ರದ್ಧಾಂಜಲಿ



**ಮಹಾಲಿಂಗಪುರ:** ಸಮೀಪದ ರನ್ನ ಬೆಳಗಲಿಯ ಶ್ರೀ ಸಿದ್ದಾರೂಢ ಸರಕಾರಿ ಪ್ರೌಢಶಾಲೆಯ ಚಿತ್ರಕಲಾ ಶಿಕ್ಷಕ ಹಾಗೂ ಅವರ ಶಿಷ್ಯಂದಿರಾದ ಬೇರೆ ಶಾಲೆಯ ಚಿತ್ರಕಲಾ ಶಿಕ್ಷಕರು ಸೇರಿ ತವರು ಶಾಲೆಯ ಅಂಗಳದಲ್ಲಿ ರಂಗೋಲಿ ಬಿಡಿಸುವ ಮೂಲಕ ಅಗಲಿದ ಖ್ಯಾತ ಕಾದಂಬರಿಕಾರ ಎಸ್. ಎಲ್. ಭಯರಪ್ಪ ಅವರಿಗೆ ಅಂತಿಮ ನಮನ ಸಲ್ಲಿಸಿದರು.

ರಜೆಯಲ್ಲೂ ಶಾಲೆಗೆ ತೆರಳಿ ರಂಗೋಲಿಯಲ್ಲಿ ಭೈರಪ್ಪ ಅವರ ಭಾವಚಿತ್ರ ಬಿಡಿಸಿ ಶ್ರದ್ಧಾಂಜಲಿ ಸಲ್ಲಿಸಿದರು. ಚಿತ್ರಕಲಾ ಶಿಕ್ಷಕರಾದ ಬಾಲಕೃಷ್ಣ ಚೋಪಡೆ, ಕಿರಣ ಪವಾರ, ರವಿ ಹಿರೇಕಲ್ಮಠ, ಶಿವಾನಂದ ನೀಲನ್ನವರ, ಮಾಯಪ್ಪ ಲೋಕ್ಯಾಗೋಳ, ಮಹಾಂತೇಶ ಲೋಕಾಪೂರ, ಲಕ್ಷ್ಮಣ ಕುಂಬಾಳೆ, ಸಾಮ್ರಾಟ ಚೋಪಡೆ, ಅಜೇಯ ಹೊನ್ನಕುಪ್ಪಿ ಇದ್ದರು.

## ಪೋಸ್ಟರ್ ಬಿಡುಗಡೆ

**ಕೊಪ್ಪಳ:** ಕರ್ನಾಟಕ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಆಯೋಜಿಸಲಾಗಿರುವ ಶುಶ್ರೂಷಕರ ವಿದೇಶಿ ಭಾಷಾ ತರಬೇತಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಗುರುವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಪೋಸ್ಟರ್ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಕೃಷ್ಣಮೂರ್ತಿ, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್ಸಿನಿಂದ ಮೂಲ ಸೌಕರ್ಯ ನಿರ್ಲಕ್ಷ್ಯ




**ಜಮಖಂಡಿ:** ರಾಜ್ಯದ ಕಾಂಗ್ರೆಸ ಸರ್ಕಾರ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದ್ದು, ರಾಜ್ಯದ ಬಹುತೇಕ ಎಲ್ಲ ರಸ್ತೆಗಳು ಹದಗೆಟಗೆಟ್ಟು ಹೋಗಿದೆ. ನಮ್ಮ ಮತಕ್ಷೇತ್ರದ 1200 ಕಿಮಿ ರಸ್ತೆ ಪೈಕಿ 850 ಕಿ.ಮಿ ರಸ್ತೆಗಳು ಹಾಳಾಗಿವೆ ಎಂದು ಶಾಸಕ ಜಗದೀಶ ಗುಡಗುಂಟಿ ಆರೋಪಿಸಿದರು.

ನಗರದಲ್ಲಿ ಬುಧವಾರ ಕಟ್ಟೆಕರೆ ರಸ್ತೆ ಪಕ್ಕದಲ್ಲಿ ಬಿಜೆಪಿ ಪಕ್ಷದವರು ಹಮ್ಮಿಕೊಂಡಿದ್ದ ರಸ್ತಾರೋಕೊ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರಿಲ್ಲ, ಔಷಧಿಯ ಕೊರತೆಯಿದೆ. ಹಲವು ಬಾರಿ ಸರ್ಕಾರಕ್ಕೆ ಹಾಗೂ ಮಂತ್ರಿಗಳಿಗೆ ಮನವಿ ಸಲ್ಲಿಸಿದರು ಯಾವುದೇ ರೀತಿಯ ಪ್ರಯೋಜನವಾಗಿಲ್ಲ. ಉಚಿತ ಯೋಜನೆಗಳನ್ನು ಜಾರಿಗೊಳಿಸಿರುವ ರಾಜ್ಯ ಸರ್ಕಾರದ ಆರ್ಥಿಕ ಪರಿಸ್ಥಿತಿ ಮುಗ್ಗರಿಸಿದೆ ಎಂದರು.

ರಾಜ್ಯ ಸರ್ಕಾರ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಜವಾಬ್ದಾರಿ ಮರೆತಿದೆ. ರಸ್ತೆಗಳು ಹಾಳಾಗಿದ್ದು ರಾಜ್ಯದ ಮರ್ಯಾದೆ ಹರಾಜಾಗುತ್ತಿದೆ. ಪರ ರಾಜ್ಯ ಮತ್ತು ದೇಶಗಳ ಜನರು ರಸ್ತೆ ದುರಸ್ತಿಯನ್ನು ಟೀಕಿಸುತ್ತಿದ್ದಾರೆ. ಕೆಲ ಕಂಪನಿಗಳು ಪಲಾಯನಕ್ಕೆ ಮುಂದಾಗಿವೆ. ರಾಜ್ಯದಾನಿ ಬೆಂಗಳೂರಿನಲ್ಲಿ ಕೂಡ ಪರಿಸ್ಥಿತಿ ಹೊರತಾಗಿಲ್ಲ. ಮುಖ್ಯಮಂತ್ರಿ ಸಿದ್ಧರಾಮಯ್ಯ ಗಮನ ಹರಿಸುವ ಮೂಲಕ ರಾಜ್ಯದ ರಸ್ತೆಗಳ ಅಭಿವೃದ್ಧಿಗೆ ಮುಂದಾಗಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಪ್ರತಿಭಟನೆಗಳನ್ನು ಎದುರಿಸಬೇಕಾಗುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಸಿದರು.

ಮಾಜಿ ಶಾಸಕ ಶ್ರೀಕಾಂತ ಕುಲಕರ್ಣಿ ,ಮಾತನಾಡಿ, ಕಾಂಗ್ರೆಸ ಸರ್ಕಾರದ ನೀತಿಯಿಂದಾಗಿ ರಾಜ್ಯದ ರಸ್ತೆಗಳ ಸ್ಥಿತಿ ಹದಗೆಟ್ಟು ಹೋಗಿದೆ. ಗುಂಡಿಗಳ ಊರು ಎಂಬ ಕುಗ್ಗಳಿಕೆಗೆ ಪಾತ್ರವಾಗಿದೆ. ಸರ್ಕಾರ ಎಚ್ಚೆತ್ತುಕೊಂಡು ಗುಂಡಿ ಮುಚ್ಚುವ ಕೆಲಸ ಮಾಡದಿದ್ದರೇ ರಾಜ್ಯದ ಜನರು ಅದೇ ಗುಂಡಿಗಳಲ್ಲಿ ಕಾಂಗ್ರೆಸ ಪಕ್ಷವನ್ನು ಮುಚ್ಚುತ್ತಾರೆ ಎಂದು ಎಚ್ಚರಿಸಿದರು. ಕಾಂಗ್ರೆಸ ಮುಖಂಡರು ಜಮಖಂಡಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಬೇಕು. ತಮ್ಮದೇ ಸರ್ಕಾರ ಇರುವದರಿಂದ ಅಭಿವೃದ್ಧಿಗೆ ಸಹಕಾರ ನೀಡಬೇಕು. ಕ್ಷೇತ್ರದ ವಿಷಯ ಬಂದಾಗ ಎಲ್ಲ ಪಕ್ಷದವರು ಒಂದಾಗಿ ಸಮಸ್ಯೆಗಳನ್ನು ಬಗೆ ಹರಸಿಕೊಳ್ಳಬೇಕು ಎಂದರು.

ರಾಜ್ಯ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ವಿಜಯಲಕ್ಷ್ಮೀ ತುಂಗಳ, ನಗರಮಂಡಲ ಅಧ್ಯಕ್ಷ ಅಜಯ ಕಡಪಟ್ಟಿ, ಗ್ರಾಮೀಣ ಮಂಡಲ ಅಧ್ಯಕ್ಷ ಮಲ್ಲು ದಾನಗೌಡ, ಧರೆಪ್ಪ ಗುಗ್ಗರಿ, ಮಲ್ಲೇಶ ಹುಟಗಿ, ರಾಜಾಸಾಬ ಕಡಕೋಳ, ಶಾಲಿನಿ ಹಿರೇಮಠ, ಗೀತಾ ಸೂರ್ಯವಂಶಿ, ಶ್ರೀಧರ ಕಂಬಿ, ಸುರೇಶಗೌಡ, ಪಾಟೀಲ, ಎಂ.ಬಿ.ಪಾಟೀಲ, ಗಣೇಶ ಸಿರಗಣ್ಣವರ, ಯಮನೂರು ಮೂಲಂಗಿ, ಪಿ.ಎಂ.ಝುಲಪಿ, ಗುರುಪಾದಪ್ಪ ಮೆಂಡಿಗೇರಿ, ಪ್ರಕಾಶ ಅರಕೇರಿ, ಶಕೀಲ ರಾಯಭಾಗ ಸಹಿತ ನೂರಾರು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಬೆಳಗಾವಿ–ವಿಜಯಪೂರ ರಾಜ್ಯ ಹೆದ್ದಾರಿಯಲ್ಲಿ ಬರತಕ್ಕ ಮುಧೋಳ ರಸ್ತೆಯ ಕಟ್ಟೆಕೆರೆ ರಸ್ತೆ ಪಕ್ಕದಲ್ಲಿ ಜಮಾಯಿಸಿದ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರು ಕೆಲಕಾಲ ರಸ್ತೆ ಸಂಚಾರ ತಡೆದು ನಡೆಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

# ಸ್ತ್ರೀ ಚೇತನ ಅಭಿಯಾಕ್ಕೆ ಚಾಲನೆ



**ಸವದತ್ತಿ:** ತಾಲೂಕಿನ ಚುಳಕಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸಮುದಾಯ ಭವನದಲ್ಲಿ ಬುಧವಾರ ಜಿಲ್ಲಾ ಪಂಚಾಯತ ಬೆಳಗಾವಿ, ತಾಲೂಕ ಪಂಚಾಯತ ಸವದತ್ತಿ ಹಾಗೂ ಚುಳಕಿ ಗ್ರಾಮ ಪಂಚಾಯತಿ ಸಹಯೋಗದೊಂದಿಗೆ ಹಮ್ಮಿಕೊಂಡ "ಸ್ತ್ರೀ ಚೇತನ" ಅಭಿಯಾನವನ್ನು ಗ್ರಾಮ ಪಂಚಾಯತಿ ಅಧ್ಯಕ್ಷೆ ಯಲ್ಲವ್ವ ಮಾರುತಿ ಉಪ್ಪಾರ ಹಾಗೂ ಮಾನ್ಯ ತಾಪಂ ಸಹಾಯಕ ನಿರ್ದೇಶಕರು (ಗ್ರಾ.ಉ) ಶ್ರೀ ಆರ್ ಬಿ ರಕ್ಕಸಗಿ ರವರು ಜ್ಯೋತಿ ಬೆಳಗಿಸುವ ಮೂಲಕ ಚಾಲನೆಯನ್ನು ನೀಡಿದರು.

ತಾಪಂ ಸಹಾಯಕ ನಿರ್ದೇಶಕರು (ಗ್ರಾ.ಉ) ಆರ್ ಬಿ ರಕ್ಕಸಗಿ ರವರು ಮಾತನಾಡಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ದುಡಿಯುವ ಕೈಗಳಿಗೆ ನಿರಂತರ ಕೂಲಿ ಕೆಲಸವನ್ನು ನೀಡಲಾಗುತ್ತಿದೆ. ಗಂಡು ಹೆಣ್ಣಿಗೆ ಸಮಾನ ಕೆಲಸಕ್ಕೆ ಸಮಾನ ವೇತನವನ್ನು ನೀಡಲಾಗುತ್ತಿದೆ. ಸನ್ 2024–25ನೇ ಸಾಲಿನಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣ 50% ಕ್ಕಿಂತ ಕಡಿಮೆ ಇರುವ ಗ್ರಾಮ ಪಂಚಾಯತಿಯಲ್ಲಿ *"ಸ್ತ್ರೀ–ಚೇತನ" ಅಭಿಯಾನ* ವನ್ನು ಹಮ್ಮಿಕೊಂಡು ನರೇಗಾ ಯೋಜನೆಯ ಕುರಿತು ಜಾಗೃತಿಯನ್ನು ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಕೂಡಾ ಭಾಗವಹಿಸುವಂತೆ ಮಾಡಿ ಅವರು ಕೂಡಾ ಆರ್ಥಿಕವಾಗಿ ಸಬಲರಾಗುವಂತೆ ಮಾಡಲು ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲರೂ ಸದರಿ ಯೋಜನೆಯ ಲಾಭವನ್ನು ಪಡೆಯಬೇಕು ಎಂದು ತಿಳಿಸಿದರು. ಬಳಿಕ ಮನರೇಗಾ ಯೋಜನೆಯ ಮಾಹಿತಿಯುಳ್ಳ ಕರಪತ್ರಗಳ್ಳು ಗ್ರಾಮದ ಮಹಿಳೆಯರಿಗೆ ಹಂಚಲಾಯಿತು ಹಾಗೂ ಮನೆ–ಮನೆಗೆ ಭೇಟಿ ನೀಡಿ ಕರಪತ್ರಗಳನ್ನು ಹಂಚಿ ನರೇಗಾ ಯೋಜನೆಯ ಕುರಿತು ಮಾಹಿತಿಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಆನಂದ ಎ ಸುತಗಟ್ಟಿ, ಗ್ರಾಪಂ ಸರ್ವಸದಸ್ಯರು, ತಾಪಂ ಐಇಸಿ ಸಂಯೋಜಕ ಮಲೀಕಜಾನ ಮೋಮಿನ, ತಾಂತ್ರಿಕ ಸಹಾಯಕ ವಿಜಯ ಪೇಠೆ, ಬಿಎಫ್ ಟಿ, ಗ್ರಾಮ ಕಾಯಕ ಮಿತ್ರ, ಮಹಿಳಾ ಸ್ವ–ಸಹಾಯ ಸಂಘದ ಸದಸ್ಯರು, ಎಲ್ ಸಿ ಆರ್ ಪಿ, ಕೃಷಿ ಸಖಿ, ಗ್ರಾಮದ ಮಹಿಳೆಯರು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಇನ್ನಿತರರು ಉಪಸ್ಥಿತರಿದ್ದರು.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಧಾರವಾಡ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2025–26 ನೇ ಸಾಲಿಗೆ ಅನುಷ್ಠಾನಗೊಳ್ಳುತ್ತಿರುವ ವೃತ್ತಿ ಪ್ರೋತ್ಸಾಹ ಯೋಜನೆ, ಶ್ರಮಶಕ್ತಿ ಯೋಜನೆ, ಸ್ವಾವಲಂಬಿ ಸಾರಥಿಯೋಜನೆ (ಪ್ಯಾಸೆಂಜರ್ ಅಟೋ ರಿಕ್ಷಾ, ಟ್ಯಾಕ್ಸಿ, ಗೂಡ್ಸ್), ನೇರಸಾಲ ವ್ಯಾಪಾರ ಉದ್ದಿಮೆ, ವಿದೇಶ ವ್ಯಾಸಾಂಗಕ್ಕೆ ಸಾಲ ಯೋಜನೆ, ಮಹಿಳಾ ಸ್ವ ಸಹಾಯ ಸಂಘ ಯೋಜನೆ, ಸಾಂತ್ವನ ಯೋಜನೆ, ರೇಷ್ಮೆ ನೂಲು ಬಿಚ್ಚಾಣಿಕೆ ಯೋಜನೆಗಳಡಿ ಸಾಲ, ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ವೆಬ್‌ಸೈಟ್ https://kmdconline.karnataka.gov.in ಮೂಲಕ ಅಕ್ಟೋಬರ 16, 2025ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 0836–2748226 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಧಕರಿಂದ ಅರ್ಜಿ ಆಹ್ವಾನ

**ಧಾರವಾಡ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26 ನೇ ಸಾಲಿನ ಅಕ್ಟೋಬರ 7, 2025 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ ಪರಿಶಿಷ್ಟ ಪಂಗಡದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಪರಿಶಿಷ್ಟ ಪಂಗಡಕ್ಕೆ ಸೇರಿದ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಜಿಲ್ಲಾಮಟ್ಟದ ಶ್ರೀ ಮಹರ್ಷಿ ವಾಲ್ಮೀಕಿ ಅವರ ಜಯಂತಿಯ ದಿನದಂದು ಸನ್ಮಾನಿಸಲಾಗುವುದು. ಆಸಕ್ತರು, ಕಚೇರಿಯಿಂದ ಅರ್ಜಿ ಪಡೆದು, ಪೂರಕ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳೊಂದಿಗೆ ಸಹಾಯಕ ನಿರ್ದೇಶಕರು, ಗ್ರೇಡ್–I,II ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಕಚೇರಿಗಳಲ್ಲಿ ಅಕ್ಟೋಬರ 3, 2025 ರೊಳಗಾಗಿ ಆಯಾ ತಾಲ್ಲೂಕುಗಳಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ:0836–2447201 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಖಾಸ್ಗತೇಶ್ವರ ಸೋಸಾಯಿಟಿಗೆ 11ಲಕ್ಷ ರೂ. ಲಾಭ




**ತಾಳಿಕೋಟೆ:** 2000ನೇ ಸಾಲಿನಲ್ಲಿ ಸುಮಾರು 3 ಲಕ್ಷ ರೂ. ಚಿಕ್ಕ ಬಂಡವಾಳದೊಂದಿಗೆ ಪ್ರಾರಂಭಗೊಂಡ ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಅರ್ಬನ್ ಕೋ–ಆಪ್ ಕ್ರೇಡಿಟ್ ಸೋಸಾಯಿಟಿಯು 26ನೇ ವರ್ಷಕ್ಕೆ ದಾಪುಗಾಲು ಹಾಕಿ ಈಗ 13 ಕೋಟಿ ರೂ. ದುಡಿಯುವ ಬಂಡವಾಳದೊಂದಿಗೆ ಮುನ್ನಡೆದಿದ್ದು ಇದಕ್ಕೆ ಗ್ರಾಹಕರ ಹಾಗೂ ಶೇರುದಾರರ ಸಹಕಾರವೇ ಕಾರಣವಾಗಿದೆ ಎಂದು ಜೆಡಿಎಸ್ ಜಿಲ್ಲಾ ಅಧ್ಯಕ್ಷ ಸೋಸಾಯಿಟಿಯ ನಿರ್ದೇಶಕ ಬಸನಗೌಡ ಮಾಡಗಿ ಅವರು ನುಡಿದರು.

ಬುಧವಾರರಂದು ಶ್ರೀ ನಿಮಿಷಾಂಭಾದೇವಿ ಮಂದಿರದಲ್ಲಿ ಏರ್ಪಡಿಸಲಾದ ಶ್ರೀ ಖಾಸ್ಗತೇಶ್ವರ ಅರ್ಬನ್ ಕೋ–ಆಪ್ ಕ್ರೇಡಿಟ್ ಸೋಸಾಯಿಟಿಯ 26ನೇ ವರ್ಷದ ಸರ್ವ ಸಾದಾರಣಾ ಸಭೆಯಲ್ಲಿ ಶ್ರೀ ಖಾಸ್ಗತೇಶ್ವರ ಭಾವಚಿತ್ರಕ್ಕೆ ಪುಷ್ಪಹಾರ ಹಾಕಿ ಗೌರವಿಸಿ ಮಾತನಾಡುತ್ತಿದ್ದ ಅವರು ಈ ವರ್ಷದಲ್ಲಿ 11 ಲಕ್ಷ 20 ಸಾವಿರ ರೂ. ನಿವ್ವಳ ಲಾಭಗಳಿಸಲಾಗಿದ್ದು ಈ ಸೇವಾ ಕಾರ್ಯದಲ್ಲಿ ಆಡಳಿತ ಮಂಡಳಿಯವರ ಹಾಗೂ ಸಿಬ್ಬಂದಿಯವರ ಪ್ರೀತಿ ವಿಶ್ವಾಸವನ್ನು ಗ್ರಾಹಕರು ಶೇರುದಾರರೊಂದಿಗೆ ಬೆಳೆಸಿಕೊಂಡಿರುವದು ಕಾರಣವಾಗಿದೆ ಎಂದ ಅವರು ತಾಳಿಕೋಟೆ ತಾಲೂಕಿನಲ್ಲಿ ಸಹಕಾರಿ ಬ್ಯಾಂಕುಗಳ ಸಾಕಷ್ಟು ಇವೆ ಆದರೂ ಈ ಸೋಸಾಯಿಟಿ ಮೇಲ್ಮಟ್ಟಕ್ಕೇರಲು ಮಾರ್ಗದರ್ಶಕರು ಕಾರಣಿಬೂತರಾಗಿದ್ದಾರೆ ಸಾಲ ಪಡೆದ ಸಾಲಗಾರರು ಮರುಪಾವತಿ ಮಾಡುತ್ತಾ ಸಾಗುವ ಕಾರ್ಯ ಮಾಡುತ್ತಾ ಸಾಗಿದರೆ ಯಾವುದೇ ಸೋಸಾಯಿಟಿ ಸಂಘಗಳಾಗಲಿ, ಬ್ಯಾಂಕುಗಳಾಗಲಿ ಬೆಳವಣಿಗೆಯತ್ತ ಸಾಗಲಿವೆ ಎಂದರು. ಇನ್ನೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಾಹಿತಿಗಳು ಹಾಗೂ ಆದ್ಯಾತ್ಮೀಕ ಚಿಂತಕರಾದ ಸಾಹೇಬಗೌಡ ಬಿರಾದಾರ ಅವರು ಮಾತನಾಡಿ ಯಾವ ರೀತಿ ವಿದ್ಯೆಯನ್ನು ಪಡೆಯಲು ಶಿಕ್ಷಕ ಎಂಬವನ ಸೇವೆ ಅಗತ್ಯವಾಗುತ್ತದೆ ಹಾಗೆ ಸಾಲ ಪಡೆಯಲು ಎಲ್ಲ ಸಹಕಾರ ಬೇಕಾಗುತ್ತದೆ ಕಾರಣ ಸಾಲ ಪಡೆಯುವವರು ಹದ್ದು ಮೀರಿ ಸಾಲ ಪಡೆಯುವದಾದರೆ ಮುಂದೆ ಮರುಪಾವತಿ ಮಾಡುವ ಸಮಯದಲ್ಲಿ ಸಂಕಷ್ಟಕ್ಕೆ ಸಿಲುಕಬೇಕಾಗುತ್ತದೆ ಜೀವ ಹೋಗುವಂತಹಗಳು ಬಂದು ಹೋಗಲಿವೆ ಕಾರಣ ಹೊರೆಯಾಗುವಂತೆ ಸಾಲ ಪಡೆಯಬಾರದು ಸಾಲ ಪಡೆದ ಹಣ ಸದ್ಬಳಿಕೆಯಾಗಬೇಕು ಅದರಿಂದ ಉತ್ಪನ್ನವಾಗುವಂತಹ ಕಾರ್ಯಕ್ಕೆ ಮುಂದಾದರೆ ಬ್ಯಾಂಕು ಸಾಲ ಪಡೆದ ಸಾಲಗಾರನು ಏಳಿಗೆಯಾಗಬಲ್ಲನೆಂದು ಚಿಕ್ಕ ಕಥೆಯೊಂದನ್ನು ಹೇಳಿದ ಬಿರಾದಾರ ಅವರು ಹಣಕಾಸಿನ ವಿಚಾರದಲ್ಲಿ ನಾನು ಬಧುಕಬೇಕು ತಿಳಿದು ಬಧುಕಬೇಕು ಎಂದು ಸಹಕಾರ ತತ್ವ ಹೇಳುತ್ತದೆ ಇದನ್ನು ಅರ್ಥೈಸಿಕೊಂಡು ಎಲ್ಲದಕ್ಕೂ ಬಳಕೆಯಾಗುವಂತಹ ಹಣವನ್ನು ಸದ್ಬಳಿಕೆ ಮಾಡಿಕೊಳ್ಳಬೇಕೆಂದರು.

ಇನ್ನೋರ್ವ ಅಧ್ಯಕ್ಷತೆ ವಹಿಸಿದ ಸೋಸಾಯಿಟಿಯ ಅಧ್ಯಕ್ಷರಾದ ಸಿದ್ರಾಮಪ್ಪ ಅಸ್ಕಿ ಅವರು ಮಾತನಾಡಿದರು. ಎಸ್.ಎಸ್.ಎಲ್.ಸಿ. ಪರಿಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಶೇರುದಾರರ ಮಕ್ಕಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದ ಮೊದಲಿಗೆ ಅಗಲಿದ ಶೇರುದಾರರ ಕುರಿತು ಎರಡು ನಿಮಿಷ ಮೌನ ಆಚರಿಸಿ ಶ್ರದ್ದಾಂಜಲಿ ಸಲ್ಲಿಸಲಾಯಿತು.

ಈ ಸಮಯದಲ್ಲಿ ಸೋಸಾಯಿಟಿಯ ಉಪಾಧ್ಯಕ್ಷ ನ್ಯಾಯವಾದಿ ಆನಂದ ಮದರಕಲ್ಲ, ಹಾಗೂ ನಿರ್ದೇಶಕರುಗಳಾದ ಪ್ರಕಾಶ ಉಭಾಳೆ, ಪ್ರಕಾಶ ಕಶೆಟ್ಟಿ, ಘನಶಾಮ ಚವ್ಹಾಣ, ಮೋಹನ್ ಶೇವಳಕರ, ದೊಂಡಿಸಿಂಗ್ ಹಜೇರಿ, ನರಸಿಂಗ್ ವಿಜಾಪೂರ, ಶಾಂತಾ ಇರಾಜ, ಮುರುಗೆಮ್ಮ ಯರನಾಳ, ದಯಾನಂದ ಕೊಂಡಗೂಳಿ, ಚಂದ್ರಕಾಂತ ಗುಡಗುಂಟಿ, ಹಾಗೂ ಗುರುಪಾದಪ್ಪ ಯರನಾಳ, ಹಿರಿಯರಾದ ಸಾಹೇಬಗೌಡ ಪಾಟೀಲ(ಲಕ್ಕುಂಡಿ) ಅವರು ಉಪಸ್ಥಿತರಿದ್ದರು.

## ಇಂದು ವಿದ್ಯುತ್ ವ್ಯತ್ಯಯ

**ಹಾವೇರಿ:** ಗುತ್ತಲ 110 ಕೆ.ವ್ಹಿ.ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆ.26 ರಂದು ಶುಕ್ರವಾರ ತುರ್ತು ನಿರ್ವಹಣಾ ಕಾಮಗಾರಿ ಇರುವುದರಿಂದ ಗುತ್ತಲ, ಹೊಸರಿತ್ತಿ ಮತ್ತು ನೀರಲಗಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಎಲ್ಲಾ 11 ಕೆ.ವಿ ಫೀಡರ್‌ಗಳಲ್ಲಿ ಬೆಳಿಗ್ಗೆ 10 ರಿಂದ ಸಾಯಂಕಾಲ 5–30ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಈ ಫೀಡರ ವ್ಯಾಪ್ತಿಗೆ ಬರುವ ಎಲ್ಲ ಸಾರ್ವಜನಿಕರು ಸಹಕರಿಸಬೇಕು ಎಂದು ಹೆಸ್ಕಾಂ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಸ್ಥಳಗಳಲ್ಲಿ ಮಾಸಿಕ ಶಿಬಿರ

**ಹಾವೇರಿ:** ಹಾವೇರಿಯ ಪ್ರಾದೇಶಿಕ ಸಾರಿಗೆ ಕಚೇರಿ ವತಿಯಿಂದ ಮಾಸಿಕ ಶಿಬಿರಗಳು ಪ್ರತಿ ತಿಂಗಳ ಮೊದಲನೆಯ ಶಿಗ್ಗಾಂವ ಮತ್ತು ಸವಣೂರ ಎಪಿಎಂಸಿಗಳಲ್ಲಿ, ಪ್ರತಿ ಮೂರನೇ ಶನಿವಾರ ಗೆಜ್ಜಿಹಳ್ಳಿ ಪರಿವೀಕ್ಷಣಾ ಮಂದಿರದಲ್ಲಿ ಜರುಗಲಿದ್ದು, ಸಾರ್ವಜನಿಕರು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಹಾವೇರಿ:** ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸಲು ಹಾಗೂ ಶುದ್ಧ ಖಾದ್ಯತೈಲ ಉಪಯೋಗಿಸಲು ಅನುಕೂಲವಾಗುವಂತೆ ಹಾಗೂ ಮೌಲ್ಯಸರಪಳಿ ಉತ್ತೇಜಿಸಲಿಕ್ಕೆ "ಪ್ರಾಥಮಿಕ ಮತ್ತು ದ್ವಿತೀಯ ಎಣ್ಣೆಕಾಳು ಕೊಯ್ಲೋತ್ತರ ಮೂಲ ಸೌಕರ್ಯ ಸೌಲಭ್ಯ"ವನ್ನು ರಾಷ್ಟ್ರೀಯ ಖಾದ್ಯತೈಲ ಅಭಿಯಾನ ಎಣ್ಣೆಕಾಳು ಬೆಳೆಗಳ ಯೋಜನೆಯಡಿ ಸಂಸ್ಕರಣಾ ಘಟಕಗಳಿಗೆ ಅವಶ್ಯವಿರುವ ಯಂತ್ರೋಪಕರಣಗಳನ್ನು ಸರ್ಕಾರ/ಸರ್ಕಾರೇತರ ಸಂಸ್ಥೆಗಳು, FPOಗಳಿಂದ, ಅರ್ಜಿ ಆಹ್ವಾನಿಸಲಾಗಿದೆ.

ಹಾವೇರಿ ಜಿಲ್ಲೆಗೆ ಒಂದು ಗುರಿ ನೀಡಲಾಗಿದ್ದು, ಈ ಘಟಕಕ್ಕೆ ಗರಿಷ್ಠ ಯೋಜನಾವರದಿಯ ಶೇ 33 ರಷ್ಟು ಅಥವಾ ರೂ.9.99 ಲಕ್ಷಕ್ಕೆ ಮೀರದಂತೆ ಅನುದಾನ ನೀಡಲಾಗುವುದು. ಈ ಘಟಕದಡಿ ಕಟ್ಟಡ ವೆಚ್ಚ ಮತ್ತು ಭೂಮಿ ಬಾಡಿಗೆಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಹಾವೇರಿ ಜಂಟಿ ಕೃಷಿನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಹಿತಿ ಭೈರಪ್ಪ ಅಗಲಿಕೆ ಸಾರಸ್ವತ ಲೋಕಕ್ಕೆ ತುಂಬಲಾರದ ಹಾನಿ

**ರಬಕವಿ–ಬನಹಟ್ಟಿ:** ನಾಡಿನ ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪನವರು ವಯೋಸಹಜ ಕಾಯಿಲೆಯಿಂದ ನಿಧನರಾಗಿದ್ದು, ಅವರ ನಿಧನವು ಕನ್ನಡ ಸಾಹಿತ್ಯ ಲೋಕಕ್ಕೆ ದೊಡ್ಡ ನಷ್ಟವನ್ನುಂಟು ಮಾಡಿದೆಯೆಂದು ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ಬೇಸರ ವ್ಯಕ್ತಪಡಿಸಿದರು.

ಬುಧವಾರ 'ಕವಿ–ಬನ'ದಲ್ಲಿ ಎಸ್.ಎಲ್. ಭೈರಪ್ಪನವರ ನುಡಿ ನಮನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಗೊರೂರು ರಾಮಸ್ವಾಮಿ ಅಯ್ಯಂಗಾರ್ ಅವರ ಬರಹಗಳಿಂದ ಪ್ರಭಾವಿತರಾಗಿದ್ದರೆಂದರು. ಮಕ್ಕಳ ಸಂಗಮದ ಅಧ್ಯಕ್ಷ ಜಯವಂತ ಕಾಡದೇವರ ಮಾತನಾಡಿ, ಚಿಕ್ಕ ವಯಸ್ಸಿನಲ್ಲಿಯೇ ಸಾಹಿತ್ಯದ ಕೃಷಿಯಲ್ಲಿ ತೊಡಗಿ, ನಿರ್ಭೀತ ಹಾಗು ಮಹಾನ್ ಚಿಂತಕರಾಗಿ, ಅವರ ಬರವಣಿಗೆಗಳ ಮೂಲಕ ಕನ್ನಡ ಸಾಹಿತ್ಯವನ್ನು ಸಮೃದ್ಧಿಗೊಳಿಸಿದವರು ಎಂದರು.

ಬಸವ ಸಂಪದ ಬಳಗದ ಅಧ್ಯಕ್ಷ ಮಲ್ಲಿಕಾರ್ಜುನ ಹುಲಗಬಾಳಿ ಮಾತನಾಡಿ, ಅವರ ಬರಹಗಳು ಸಮಾಜದ ಕುರಿತು ಚಿಂತಿಸಲು, ಪ್ರಶ್ನಿಸಲು ಒಂದು ಪೀಳಿಗೆಗೆ ಪ್ರೇರಣೆ ನಿಡಿದವು. ಇತಿಹಾಸ ಹಾಗು ಸಂಸ್ಕೃತಿಯ ಕುರಿತು ಅವರಿಗಿದ್ದ ಒಲವು ಮುಂದಿನ ತಲೆಮಾರಿಗೂ ಮಾದರಿಯಾಗಲಿದೆಯೆಂದರು.ಹಿರಿಯ ಸಾಹಿತಿ ಜಿ.ಎಸ್. ವಡಗಾಂವಿ, ಯಶವಂತ ವಾಜಂತ್ರಿ, ಶಿವಾನಂದ ಮಹಾಬಳಶೆಟ್ಟಿ, ವಿಶ್ವಜ ಕಾಡದೇವರ, ಕಿರಣ ಆಳಗಿ, ಬಸಯ್ಯ ವಸ್ತ್ರದ ಸೇರಿದಂತೆ ಅನೇಕರಿದ್ದರು.

## ಇಂದು ಸಾರಿಗೆ ಅದಾಲತ್

**ಕಾರವಾರ:** ಪ್ರಾದೇಶಿಕ ಸಾರಿಗೆ ಕಚೇರಿ, ಕಾರವಾರ ವ್ಯಾಪ್ತಿಯಲ್ಲಿರುವ ವಾಹನ ಮಾಲೀಕರಿಗೆ, ಚಾಲಕರಿಗೆ ಹಾಗೂ ಸಾರಿಗೆ ಇಲಾಖೆಯ ಸೇವೆ ಪಡೆಯುತ್ತಿರುವ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳನ್ನು ಪರಿಹರಿಸಲು ಸೆ.26 ರಂದು ಮದ್ಯಾಹ್ನ 12 ಗಂಟೆಗೆ ಸಾರಿಗೆ ಅದಾಲತ್‌ನ್ನು ಪ್ರಾದೇಶಿಕ ಸಾರಿಗೆ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಸದರಿ ಕಾರ್ಯಕ್ರಮಕ್ಕೆ ಸೇವಾ ನ್ಯೂನ್ಯತೆ ಮತ್ತು ಇನ್ನಿತರೇ ತೊಂದರೆಗಳಿಗಾಗಿ ಸ್ಥಳೀಯ ಸಂಘ–ಸಂಸ್ಥೆ ಹಾಗೂ ಸಂಘಟಣೆಯವರು ಖುದ್ದಾಗಿ ಹಾಜರಾಗಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವಂತೆ ಹಾಗೂ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ.

# ವಾಲ್ಮೀಕಿ ಜಯಂತಿ ಅದ್ದೂರಿ ಆಚರಣೆಗೆ ನಿರ್ಧಾರ

**ಬಾಗಲಕೋಟೆ:** ಜಿಲ್ಲೆಯಲ್ಲಿ ಅಕ್ಟೋಬರ 7 ರಂದು ಆಚರಿಸಲ್ಪಡುವ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾಡಳಿತದಿಂದ ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ವಾಲ್ಮೀಕಿ ಜಯಂತಿ ಆಚರಣೆ ಕುರಿತಂತೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂದು ಬೆಳಿಗ್ಗೆ ಜಿಲ್ಲಾಡಳಿತದಿಂದ ವಾಲ್ಮೀಕ ಅವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಭಾಗವಹಿಸಲಿದ್ದು, ತಂಡಗಳನ್ನು ಆಹ್ವಾನಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಿಗೆ ತಿಳಿಸಿದರು. ಮೆರವಣಿಗೆ ಮಾರ್ಗವನ್ನು ಸ್ವಚ್ಛಗೊಳಿಸಲು ನಗರಸಭೆಗೆ ಸೂಚಿಸಿದರು. ವಾಲ್ಮೀಕಿ ಅವರ ಕುರಿತು ಉಪನ್ಯಾಸ ನೀಡಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸಲು ತಿಳಿಸಿದರು.

ವೇದಿಕೆ ಕಾರ್ಯಕ್ರಮ ನವನಗರದ ಮಹರ್ಷಿ ವಾಲ್ಮೀಕಿ ಭವನದಲ್ಲಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದ್ದು, ವೇದಿಕೆ ಸಿದ್ಧತೆ, ಅಲಂಕಾರ ಮಾಡಲು ಕ್ರಮವಹಿಸಲು ತಿಳಿಸಿದರು. ಶಿಷ್ಟಾಚಾರ ಪ್ರಕಾರ ಆಮಂತ್ರಣ ಪತ್ರಿಕೆ ಮುದ್ರಣ ಹಾಗೂ ವಿತರಣೆ, ಕಾನೂನು ವ್ಯವಸ್ಥೆ ಕಾಪಾಡಲು ಪೊಲೀಸ್ ವ್ಯವಸ್ಥೆ ಪೊಲೀಸ್ ಇಲಾಖೆಗೆ ತಿಳಿಸಲಾಯಿತು. ಜಿಲ್ಲೆಯ ಎಲ್ಲ ತಾಲೂಕಾ ಕೇಂದ್ರಗಳಲ್ಲಿ ಹಾಗೂ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ನಿರ್ದೇಶನ ನೀಡುವುದಾಗಿ ತಿಳಿಸಿದರು.



ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ದ್ವಿತೀಯ ವರ್ಷದ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದಲ್ಲಿ ಅತೀ ಹೆಚ್ಚು ಅಂಕ ಪಡೆದು ಜಿಲ್ಲೆಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲು ತೀರ್ಮಾನಿಸಲಾಗಿದ್ದು, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ವಿದ್ಯಾರ್ಥಿಗಳ ಮಾಹಿತಿ ನೀಡುವಂತೆ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ ಕಾರ್ಯಕ್ರಮದ ರೂಪುರೇಷೆಗಳ ಬಗ್ಗೆ ಸಭೆಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಕೃಷಿ ಜಂಟಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ ಸೇರಿದಂತೆ ಸಮುದಾಯದ ಮುಖಂಡರಾದ ದ್ಯಾಮಣ್ಣ ಗಾಳಿ, ಆರ್.ಜಿ.ಸನ್ನಿ, ಲಕ್ಷ್ಮಣ ಮಾಳಗಿ, ಕೃಷ್ಣಾ ಪಾಟೀಲ, ನಿಂಗಪ್ಪ ಕ್ಯಾದಿಗ್ಗೇರಿ, ಶಂಭುಗೌಡ ಪಾಟೀಲ ಹಾಗೂ ಇತರರು ಉಪಸ್ಥಿತರಿದ್ದರು.

# ಆಯುರ್ವೇದ ಚಿಕಿತ್ಸಾ ಪದ್ಧತಿಯನ್ನು ಬಲಗೊಳಿಸಿ



**ಕಾರವಾರ:** ಆಯುರ್ವೇದ ಚಿಕಿತ್ಸಾ ಪದ್ಧತಿಯನ್ನು ಇನ್ನಷ್ಟು ಬಲಗೊಳಸಿ ಅದರ ಮಹತ್ವವನ್ನು ಅರ್ಥ ಮಾಡಿಕೊಂಡು ಬದುಕಿನ ಭಾಗವಾಗಿ ಜೋಡಿಸಿಕೊಳ್ಳಬೇಕಿದೆ ಎಂದು ವಿಧಾನಸಭಾ ಸದಸ್ಯ ಗಣಪತಿ ಉಳ್ವೇಕರ್ ಹೇಳಿದರು.

ಅವರು ಮಂಗಳವಾರ, ಸರ್ಕಾರಿ ನೌಕರರ ಭವನದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆಯುಷ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಕಾರವಾರ, ಆಯುಷ್ ಅಧಿಕಾರಿಗಳ ಸಂಘ ಉತ್ತರ ಕನ್ನಡ ಹಾಗೂ ನಗರಸಭೆ ಕಾರವಾರ ಸ್ಥಳೀಯ ಸಂಘ–ಸಂಸ್ಥೆಗಳ ಸಹಯೋಗದೊಂದಿಗೆ ಜನತೆಗಾಗಿ ಮತ್ತು ಜಗತ್ತಿಗಾಗಿ ಆರ್ಯವೇದ ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಲಾದ, ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಹಾಗೂ ಆರ್ಯುವೇದ ಗಿಡಮೂಲಿಕೆ ಸಸಿಗಳ ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷ ಧನ್ವಂತರಿಯ ಜನ್ಮ ದಿನದಂದು ಸರ್ಕಾರವು ಸೆ.23ನ್ನು ರಾಷ್ಟ್ರೀಯ ಆರ್ಯವೇದ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಆರ್ಯವೇದವು ದೇಹ, ಮನಸ್ಸು ಆತ್ಮದ ನಡುವಿನ ಸಮತೋಲನವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಿದೆ. ಅನೇಕ ಕಾಯಿಲೆಗಳಿಗೆ ರಾಸಾಯನಿಕ ಔಷಧಿಗಳಿಗಿಂತ ಪ್ರಕೃತಿಯಲ್ಲಿ ಸಿಗುವಂತ ಆರ್ಯವೇದ ಚಿಕಿತ್ಸೆಯ ಮೂಲಕ ದೇಹ ಮತ್ತು ಶರೀರವನ್ನು ಕಾಪಾಡಿಕೊಳ್ಳಲು ಸಾಧ್ಯವಾಗಲಿದ್ದು, ಇದನ್ನು ಇನ್ನಷ್ಟು ಬಲಪಡಿಸಬೇಕಾಗಿದೆ ಎಂದರು.

ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೇಕರ ಮಾತನಾಡಿ, ಪ್ರಸ್ತುತ ಇಡೀ ಜಗತ್ತಿನಲ್ಲಿ ಆರ್ಯುವೇದ ಚಿಕಿತ್ಸೆಯನ್ನು ಅಳವಡಿಸಿಕೊಳ್ಳಲಾಗುತ್ತಿದ್ದು, ಇದರಿಂದ ಯಾವುದೇ ಅಡ್ಡ ಪರಿಣಾಮಗಳಿಲ್ಲದೇ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಸ್ವಚ್ಛತೆ ಮಹತ್ವದ ಪಾತ್ರವಹಿಸುತ್ತಿದ್ದು, ಎಲ್ಲರೂ ಎಲ್ಲೆಡೆ ಸ್ವಚ್ಛತೆಯನ್ನು ಕಾಪಾಡಬೇಕು ಮತ್ತು ಪರಿಸರಕ್ಕೆ ಹಾನಿಯಾಗಿರುವ ಏಕ ಬಳಕೆ ಪ್ಲಾಸ್ಟಿಕ್‌ಗಳನ್ನು ಬಳಸದಂತೆ ಜಾಗೃತಿಯನ್ನು ಮೂಡಬೇಕು ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ವೈದ್ಯಾಧಿಕಾರಿ ಡಾ.ಜಗದೀಶ ಯಾಜಿ, ಸ್ವಾಸ್ಥ್ಯಕ್ಕೆ ಸಣ್ಣ ಹೆಜ್ಜೆಗಳು, ಆರ್ಯುವೇದ ಜಾಗೃತಿ ಕುರಿತು ಉಪನ್ಯಾಸ ನೀಡಿ, ರೋಗಿಗಳಿಗೆ ರೋಗವನ್ನು ಗುಣಪಡಿಸುವುದಕ್ಕಿಂತ ರೋಗ ರಹಿತ ಸಮಾಜವನ್ನು ನಿರ್ಮಾಣ ಮಾಡುವ ಉದ್ದೇಶದಿಂದ ಯೋಗ ಮತ್ತು ಆರ್ಯುವೇದವನ್ನು ಇಂದು ಜಗತ್ತಿಗೆ ವಿಸ್ತರಿಸಲಾಗಿದೆ. ತಂದೆ ತಾಯಿಗಳು ಆರೋಗ್ಯವಂತರಾಗಿದ್ದರೆ ಆರೋಗ್ಯವಂತ ಮಕ್ಕಳಿಗೆ ಜನ್ಮ ನೀಡಬಹುದು. ಆದರಿಂದ ಧೂಮಪಾನ, ಮದ್ಯಪಾನ ಸೇವನೆ ಮಾಡಬಾರದು, ಇದರಿಂದ ರೋಗನಿರೋಧಕ ಶಕ್ತಿ ಕಡಿಮೆಯಾಗುತ್ತದೆ. ರಾಸಾಯನಿಕ ಮಿಶ್ರಿತ ಪದಾರ್ಥಗಳನ್ನು ಸೇವಿಸದೆ ಮನೆಯಲ್ಲೇ ತಯಾರಿಸಿರುವ ಆಹಾರಗಳನ್ನು ಸೇವಿಸಿ, ಆರೋಗ್ಯವನ್ನು ಕಾಪಾಡಿಕೊಳ್ಳಿ ಎಂದರು.

ಆರ್ಯುವೇದ ತಜ್ಞವೈದ್ಯ ಡಾ. ಎಮ್. ಎಸ್. ಅವಧಾನಿ ಆರ್ಯುವೇದದ ಕುರಿತು ಉಪನ್ಯಾಸ ನೀಡಿದರು.

ಆಯುಷ್ ಇಲಾಖೆಯ ಜಿಲ್ಲಾ ಆಯುಷ್ ಅಧಿಕಾರಿ ಡಾ. ಪ್ರವೀಣ ಜಿ.ಎನ್ ಸ್ವಾಗತಿಸಿದರು, ಡಾ. ಸಂಜೀವ್ ಗಲಗಲಿ ಪ್ರಾಸ್ತಾವಿಕ ಮಾತನಾಡಿದರು.

ಕಾರ್ಯಕ್ರಮದಲ್ಲಿ ಆಯುಷ್ ಇಲಾಖೆಯ ಎಇಓ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಾಕ್ಷ ಸಂಜೀವ್ ಕುಮಾರ್ ನಾಯ್ಕ, ಆಯುಷ್ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು, ನರ್ಸಿಂಗ್ ವಿದ್ಯಾರ್ಥಿಗಳು ಮತ್ತಿತರರು ಉಪಸ್ಥಿತರಿದ್ದರು.

## ಪ್ರತಿನಿತ್ಯ ೩೦೦ಕ್ಕೂ ಹೆಚ್ಚು ಉಡಿತುಂಬುವ ಕಾರ್ಯಕ್ರಮ



**ಜಮಖಂಡಿ:** ನಗರದ ಮುತ್ತಿನಕಂತಿ ಹಿರೇಮಠದಲ್ಲಿ ಶ್ರೀದೇವಿ ಪುರಾಣ ಮತ್ತು ಪ್ರವಚನ ಕಾರ್ಯಕ್ರಮದಲ್ಲಿ ಜ್ಯೋತಿ ಮಹಿಳಾ ಮಂಡಳ (ಆಳಗಿ ಪರಿವಾರ) ವತಿಯಿಂದ ಪ್ರತಿನಿತ್ಯ 300ಕ್ಕೂ ಹೆಚ್ಚು ಮಹಿಳೆಯರಿಗೆ ಅಕ್ಟೋಬರ್ 4ರ ವರೆಗೆ ನಿರಂತರವಾಗಿ ಉಡಿ ತುಂಬುವ ಕಾರ್ಯಕ್ರಮ ಜರುಗುತ್ತಿದೆ.

ಮುತ್ತಿನಕಂತಿ ಹಿರೇಮಠದ ಶಿವಲಿಂಗ ಪಂಡಿತಾರಾಧ್ಯ ಶಿವಾಚರ್ಯರ ನೇತೃತ್ವದಲ್ಲಿ ಪ್ರವಚನ ನಂತರ ಪ್ರತಿನಿತ್ಯ ಸಂಜೆ 7 ಗಂಟೆಯಿಂದ 9 ಗಂಟೆವರೆಗೆ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪ್ರತಿನಿತ್ಯ ನಡೆಯುವ ಉಡಿ ತುಂಬುವ ಸೇವೆಯಲ್ಲಿ ಜ್ಯೋತಿ ಆಳಗಿ, ಗಾಯತ್ರಿ ಶಿವಣಗಿ, ವಿಜಯಲಕ್ಷ್ಮೀ ಶಿವಸಿಂಪಿ, ಜಯಶ್ರೀ ಐಹೊಳ್ಳಿ, ರಾಜಶ್ರೀ ಭಾವಿಕಟ್ಟಿ, ಮಾದೇವಿ ಕರ್ಜಗಿ, ಪಾರ್ವತಿ ಗುರ್ಲಾಪುರ, ಉಷಾ ಹರಕಂಗಿ, ಗಿರಿಜಾ ಮಳಗುಂಡಿ, ವಿದ್ಯಾ ಸೋಲಾಪುರ ತೊಡಗಿಕೊಂಡಿದ್ದಾರೆ.

### ಬೆಳಗಾವಿಯಲ್ಲಿ ಅದ್ದೂರಿಯಾಗಿ ಜರುಗಿದ ಶ್ರೀ ಭುವನೇಶ್ವರಿ ಉತ್ಸವ ಸಮಾರಂಭ

# ಸಮಾಜಕ್ಕೆ ಮಹಿಳೆಯರ ಕೊಡುಗೆ ಅಪಾರ: ಡಾ. ಆಶಾದೇವಿ



**ಬೆಳಗಾವಿ:** ಸಮಾಜಕ್ಕೆ ಮಹಿಳೆಯರ ಕೊಡುಗೆ ಅಪಾರವಾಗಿದೆ. ಮಕ್ಕಳಲ್ಲಿ ಉತ್ತಮ ಸಂಸ್ಕಾರ, ಸಂಸ್ಕೃತಿ ಮೂಡಿಸುವ ಹೆಣ್ಣು ಇಂದು ಪ್ರತಿಯೊಂದು ಕ್ಷೇತ್ರದಲ್ಲಿ ಮಹಿಳೆ ಅಮೋಘ ಸಾಧನೆ ಮಾಡಿದ್ದಾಳೆ ಎಂದು ಖ್ಯಾತ ಸಾಹಿತಿ, ವಿಮರ್ಶಕಿ, ವಾಗ್ಮಿ ಡಾ.ಎಂ.ಎಸ್. ಆಶಾದೇವಿ ಅವರು ಹೇಳಿದರು.

ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಬುಧವಾರ ಸೆ. 24 ರಂದು ಶ್ರೀ ಭುವನೇಶ್ವರಿ ಉತ್ಸವ ಸಂಘದ ವತಿಯಿಂದ ಆಯೋಜಿಸಲಾದ ಶ್ರೀ ಭುವನೇಶ್ವರಿ ಉತ್ಸವದ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಮಹತ್ವದಾಗಿದೆ. 'ಮಹಿಳೆಯರಿಗೆ ಮನೆಯನ್ನು ನಿಭಾಯಿಸುವುದರ ಜೊತೆಗೆ ಸಮಾಜವನ್ನು ನಿಭಾಯಿಸುವ ಆತ್ಮವಿಶ್ವಾಸವಿದೆ. ಆದರೂ, ಮನೆಗೆ ಶಕ್ತಿಯಾಗಿ ನಿಂತಿರುವ ಹೆಣ್ಣಿನ ಮೇಲೆ ನಿರಂತರ ಅನ್ಯಾಯವೂ ಆಗುತ್ತಿದೆ ಅವುಗಳನ್ನು ತಡೆಯಬೇಕು. ಹೆಣ್ಣುಮಕ್ಕಳ ರಕ್ಷಣೆಗೆ ಸಾಕಷ್ಟು ಕಾನುನೂಗಳು ಇದ್ದರೂ ಜೀವನದಲ್ಲಿ ಎಡುತ್ತಿರುವುದು ಹೆಣ್ಣು ಯಾಕೆ..? ಪ್ರತಿರಂಗದಲ್ಲೂ ಮಹಿಳೆಯರು ವಿಶೇಷ ಸಾಧನೆ ಮಾಡಿದ್ದಾರೆ, ಪುರುಷರಷ್ಟೆ ಸಮನಾಗಿ ಹೆಣ್ಣುಮಕ್ಕಳು ಬೆಳೆದು, ಸಮಾಜ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ತನ್ನನ್ನು ತಾನು ರಕ್ಷಿಸುಕೊಳ್ಳುವಲ್ಲಿ ವಿಫಲಳಾಗಿದ್ದಾಳೆ ಇದು ನೋವಿನ ಸಂಗತಿ ಎಂದು ವಿಷಾದ ವ್ಯಕ್ತಪಡಿಸಿದರು.

ಕೆಲವು ಮಹಿಳೆಯರು ಪುರುಷರಷ್ಟೇ ಬಲಶಾಲಿಗಳು ಎಂಬ ಸತ್ಯವನ್ನು ಅರ್ಥಮಾಡಿಕೊಳ್ಳಬೇಕು. ಹೆಣ್ಣು ಸಂಸಾರದ ಕಣ್ಣು, ದೇಶದ ಕಣ್ಣು, ಕಾಲ ಬದಲಾದರೂ ಸೊಸೆಯಾಗಿ, ಮಗಳಾಗಿ, ಅತ್ತೆಯಾಗಿ ಕುಟುಂಬದ ಜವಾಬ್ದಾರಿಯನ್ನು ಹೊರುತ್ತಾಳೆ ಆದರೂ, ಈ ಸಮಾಜದಲ್ಲಿ ಹೆಣ್ಣಿನ ಬಗ್ಗೆ ಕಿಳಹಿರಿಮೆ ಇನ್ನೂ ಜೀವಂತವಾಗಿದೆ. ಅದು ಹೊಗಬೇಕು ಎಂದರೇ ದುಡಿಯುವ ಹೆಣ್ಣುಮಕ್ಕಳು ದೈರ್ಯದಿಂದ ಸಾಗಬೇಕು. ಅಂದಾಗಲೇ ಸಮಾಜದಲ್ಲಿ ಸಮನಾಗಿ ಬದುಕಿ-ಬಾಳಲು ಸಾಧ್ಯ ಎಂದರು. ಪ್ರತಿ ವರ್ಷವೂ ಬೆಳಗಾವಿಯಲ್ಲಿ ಶ್ರೀ ಭುವನೇಶ್ವರಿ ಉತ್ಸವ ಅದ್ದೂರಿಯಾಗಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ, ಭುವನೇಶ್ವರಿ ಉತ್ಸವ ಸಂಘದಿಂದ ಹೆಚ್ಚಿನ ಕಾರ್ಯಕ್ರಮಗಳು ನಡೆಯಲಿ ಎಂದು ಹಾರೈಸಿದರು.

ಶಾಸಕ ರಾಜು(ಆಸೀಫ್) ಸೇಠ ಅವರು ಮಾತನಾಡಿ, ಮಹಿಳೆಯರು ಆತ್ಮವಿಶ್ವಾಸದಿಂದ ಜೀವನ ನಡೆಸಬೇಕು. ಮಹಿಳೆಯರು ಉತ್ತಮ ಶಿಕ್ಷಣವನ್ನು ಪಡೆಯುವುದರ ಜೊತೆಗೆ ತಮ್ಮ ಅಭಿರುಚಿಯನ್ನು ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು' ಎಂದು ಹೇಳಿದರು.

ಭುವನೇಶ್ವರಿ ಉತ್ಸವ ಸಂಘದ ಮಹಿಳೆಯರು ಆಹ್ವಾನ ನೀಡಿರುವುದಕ್ಕೆ ಅತೀವ ಸಂತೋಷವಾಗಿದೆ, ನಿಮ್ಮ ಸಂಘಟನೆ ಇನ್ನಷ್ಟೂ ಬೆಳೆಯಲಿ ಅದಕ್ಕೆ ಸಹಕಾರ ನೀಡಲಾಗುವುದು ಎಂದು ಹೇಳಿದರು. ಈ ವೇಳೆ ಕನ್ನಡ ಸಾಹಿತ್ಯ ಲೋಕದ ದಿಗ್ಗಜ, ಪದ್ಮಭೂಷಣ ಪುರಸ್ಕೃತ, ಸರಸ್ವತಿ ಸಮ್ಮಾನ್ ಪುರಸ್ಕೃತ, ಹಿರಿಯ ಎಸ್.ಎಲ್. ಭೈರಪ್ಪ ಅವರ ಆತ್ಮಕ್ಕೆ ಶಾಂತಿ ಕೋರಿ, ಒಂದು ನಿಮಿಷ ಮೌನಾಚರಣೆ ನಡೆಸಲಾಯಿತು. ಈ ವೇಳೆ ಶಾಸಕ ರಾಜು(ಆಸೀಫ್) ಸೇಠ ಹಾಗೂ ಸಾಹಿತಿ ಡಾ.ಎಂ.ಎಸ್. ಆಶಾದೇವಿ ಅವರು ಅವರನ್ನು ಸನ್ಮಾನಿಸಲಾಗುವುದು ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ ಉದ್ಘಾಟಿಸಿದರು. ಭುವನೇಶ್ವರಿ ಉತ್ಸವ ಮಂಡಳದ ಸಂಸ್ಥಾಪಕ ಅಧ್ಯಕ್ಷೆ ಲಿಲಾ ಚೌಗಲಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು, ಸುಪ್ರಿಯಾ ದೇಶಪಾಂಡೆ ಸ್ವಾಗತಿಸಿದರು. ಶೈಲಜಾ ಭಿಂಗೆ, ಸುಮಾ ಕಿತ್ತೂರ, ರತ್ನಪ್ರಭಾ ಬೆಲ್ಲದ, ರಾಜೇಶ್ವರಿ ಕೆಂಭಾವಿ, ಮೀರಾ ಬಡಕುಂದ್ರಿ, ರಂಜನಾ ನಾಯಕ, ಹಾಗೂ ಕರ್ನಾಟಕದ ಭಜನಾ ಮಹಿಳಾ ಮಂಡಳದಿಂದ ಪ್ರಾರ್ಥನಾ ಗೀತೆ ನಡೆಸಿದರು. ಇತರರು ಇದ್ದರು.

## ಬ್ಯಾಂಕ್ ಲಾಕರ್ ಭದ್ರತೆ ಪರಿಶೀಲನೆ



**ಸಾವಳಗಿ:** ಬ್ಯಾಂಕಗಳಲ್ಲಿನ ಲಾಕರಗಳಿಗೆ ಇರುವ ಭದ್ರತೆ, ಸಿ ಸಿ ಟಿವಿ ನಿರ್ವಹಣೆಯ, ಸೇರಿದಂತೆ ಆಯಾ ಬ್ಯಾಂಕುಗಳ ಕೈಗೊಂಡಿರುವ ಭದ್ರತಾ ಕ್ರಮಗಳನ್ನು ಪರಿಶೀಲಿಸಲು ಜಿಲ್ಲಾ ಪೊಲೀಸ್ ಇಲಾಖೆ ಮುಂದಾಗಿದೆ.

ಅಪರಾದ ವಿಭಾಗದ ಪಿಎಸ್‌ಐ ನಾಗೇಶ್ ವಾಲಿಕಾರ ನೇತೃತ್ವದ ತಂಡ ಭವಾನಿ ಬ್ಯಾಂಕ್ ಸೇರಿದಂತೆ ವಿವಿಧ ಬ್ಯಾಂಕಗಳ ಲಾಕರ್, ಸಿಸಿಟಿವಿ ಕ್ಯಾಮೆರಾ, ಹಾಗೂ ಭದ್ರತಾ ಕ್ರಮಗಳನ್ನು ಪರಿಶೀಲಿಸಿದರು.

ಇತ್ತೀಚೆಗೆ ವಿಜಯಪುರ ಹಾಗೂ ವಿವಿಧ ನಗರದಲ್ಲಿ ಬ್ಯಾಂಕಗೆ ನುಗ್ಗಿ ಸೀನಿಮಿಯರ್ ರೀತಿಯಲ್ಲಿ ಬ್ಯಾಂಕ್ ದರೋಡೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಎಚ್ಚೆತ್ತುಕೊಂಡು ಪ್ರತಿಯೊಂದು ಬ್ಯಾಂಕುಗಳಿಗೆ ಪೊಲೀಸ್ ತಂಡ ಭೇಟಿ ನೀಡಿ ಬ್ಯಾಂಕುಗಳ ಲಾಕರ್ ಹಾಗೂ ಸಿಸಿಟಿವಿ ಕ್ಯಾಮೆರಾ ಗಳನ್ನು ಪರಿಶೀಲಿಸಿದರು. ಇದೇ ಸಂದರ್ಭದಲ್ಲಿ ಪೊಲೀಸ ಇಲಾಖೆ ಸಿಬ್ಬಂದಿ ಶಿವಾನಂದ ಭಜಂತ್ರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರಸ್ತೆ ಕಾಮಗಾರಿಗೆ ಭುಮಿಪೂಜೆ



**ಗದಗ:** ತಾಲೂಕಿನ ಕಾರವಾರ ಇಳಕಲ್ಲ ರಾ.ಹೆ 06 ಕಿ ಮೀ 245.2 ರ ಚೆನ್ನಮ್ಮ ವೃತ್ತ ಮತ್ತು ಬನ್ನಿಕಟ್ಟಿಯ ಹತ್ತಿರ ಹಾಗೂ ಕಿ.ಮೀ 245.40 ರಲ್ಲಿ ಲದ್ವಾ ವೃತ್ತದಿಂದ ಬನ್ನಿಕಟ್ಟೆಯ ರಸ್ತೆ ಭೀಷ್ಮ ಕೆರೆಯ ಹತ್ತಿರ ರಸ್ತೆ ಸುರಕ್ಷತಾ ಕಾಮಗಾರಿಗಳಿಗೆ ಬುಧವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ರೋಹನ ಜಗದೀಶ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಆಶೋಕ ಮಂದಾಲಿ, ಕೊಟ್ರೇಶ್ವರ ವಿಭೂತಿ, ನಗರಸಬೆ ಆಯುಕ್ತ ರಾಜಾರಾಮ ಪವಾರ ಸೇರಿದಂತೆ ಹಿರಿಯರು, ಗಣ್ಯರು ಹಾಜರಿದ್ದರು.

# ಅಂತರ ರಾಜ್ಯ ಕಬಡ್ಡಿ ಪಂದ್ಯಾವಳಿಗೆ ಸಕಲ ಸಿದ್ಧತೆ



**ರಾಮದುರ್ಗ:** ಪಟ್ಟಣದ ಐ.ಎಸ್. ಯಾದವಾಡ ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ದಕ್ಷಿಣ ಭಾರತ ಅಂತರ ದಕ್ಷಿಣ ಭಾರತದ ಅಂತರ ವಿಶ್ವವಿದ್ಯಾಲಯಗಳ ಪುರುಷರ ಕಬಡ್ಡಿ ಪಂದ್ಯಾವಳಿಗಳನ್ನು ಶನಿವಾರ ಅಕ್ಟೋಬರ-4 ರಿಂದ ಮಂಗಳವಾರ ಅಕ್ಟೋಬರ-7 ರ ವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ವಿಧಾನಸಭೆ ಮುಖ್ಯ ಸಚೇತಕ ಹಾಗೂ ಶಾಸಕ ಅಶೋಕ ಪಟ್ಟಣ ಹೇಳಿದರು.

ಪಟ್ಟಣದ ಐ.ಎಸ್. ಯಾದವಾಡ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಮಂಗಳವಾರ ಏರ್ಪಡಿಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ, ಆಂದ್ರಪ್ರದೇಶ, ಕೇರಳ, ತಮಿಳುನಾಡು, ತೆಲಂಗಾಣ ಹಾಗೂ ಪಾಂಡಿಚೇರಿ ರಾಜ್ಯಗಳ 131 ವಿಶ್ವ ವಿದ್ಯಾಲಯಗಳ ತಂಡಗಳು ಈ ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿದ್ದಾರೆ. ಕ್ರೀಡಾಪಟುಗಳಿಗೆ ರಾಮದುರ್ಗ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ 13 ವಸತಿ ನಿಲಯದಲ್ಲಿ ವಸತಿ ಸೌಲಭ್ಯಕ್ಕೆ ವ್ಯವಸ್ಥೆ ಮಾಡಲಾಗಿದೆ. ಸುಸಜ್ಜಿತ 4 ಮ್ಯಾಟ್ ಕ್ರೀಡಾಂಗಣಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಸುಮಾರು 8000 ಸಾವಿರ ಕ್ರೀಡಾ ಪ್ರೀಯರಿಗೆ ಕುಳಿತುಕೊಳ್ಳಲು ಗ್ಯಾಲರಿ ಮಾಡಲಾಗುತ್ತಿದೆ. ಕ್ರೀಡಾಕೂಟ ನೆಡಸಲು 60 ಜನ ನುರಿತ ಅನಿಭವಿ ನಿರ್ಣಾಯಕರು ಆಗಮಿಸುತ್ತಿದ್ದಾರೆ ಒಟ್ಟು ಕಬಡ್ಡಿ ಕ್ರೀಡಾಕೂಟದಲ್ಲಿ 2100 ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಕಬಡ್ಡಿ ಹೊನಲು ಬೆಳಕಿನ ಒಂದು ಗ್ರಾಮೀಣ ಕ್ರೀಡೆಯಾಗಿದ್ದು, ಆಸಕ್ತಿದಾಯಕ, ಮನೊರಂಜನೆ ನೀಡುವ ಕ್ರೀಡೆಯಾಗಿದೆ. ಜನತೆ ಶಾಂತಿಯುತವಾಗಿ ವೀಕ್ಷಣೆ ಮಾಡಬೇಕು ಎಂದು ಅಶೋಕ ಪಟ್ಟಣ ಮನವಿ ಮಾಡಿದರು.

ವಿವಿಧ ಇಲಾಖೆಯ ಅಧಿಕಾರಿಗಳಿಗೆ ನೀಡಿದ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು. ಎನ್.ಎಸ್.ಎಸ್. ಹಾಗೂ ಸ್ಕೌಟ ಮತ್ತು ಗೈಡ್ಸ ವಿದ್ಯಾರ್ಥಿಗಳನ್ನು ಸ್ವಯಂ ಸೇವಕರಾಗಿ ಕೆಲಸ ಮಾಡಲು ಆಯೋಜನೆ ಮಾಡಬೇಕು. ಕಾಲೇಜು ಸಿ.ಡಿ.ಸಿ. ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರು ಸಕಲ ಸಿದ್ದತೆ ಮಾಡಿಕೊಂಡಿದ್ದು, ನ್ಯಾಯಸಮ್ಮತ ಕ್ರೀಡೆ ನಡೆಯಲು ಒಗ್ಗಟ್ಟಿನ ಸಂಘಟನೆ ಅಗತ್ಯವಿದೆ. ಆ ನಿಟ್ಟಿನಲ್ಲಿ ಎಲ್ಲರೂ ಸುಸಜ್ಜಿತ ಸಂಘಟನೆ ಮಾಡಬೇಕು ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಎಂ.ಡಿ. ಕಮತಗಿ, ಕಾಲೇಜು ಸಿ.ಡಿ.ಸಿ ಸಮಿತಿಯ ಪದಾಧಿಕಾರಿಗಳಾದ ಜಿ.ಬಿ. ರಂಗನಗೌಡ್ರ, ಪ್ರೊ.ಎಸ್. ಎಸ್. ಕೊಡತೆ, ಎಸ್.ಜಿ. ಚಿಕ್ಕನರಗುಂದ, ಎಂ.ಡಿ ಸಾರವಾನ, ಜಹೂರ ಹಾಜಿ, ನಂದಕುಮಾರ ಸುರೇಬಾನ, ಸೇರಿದಂತೆ ಇತರರಿದ್ದರು.

## ರಸ್ತೆ ಕಾಮಗಾರಿಗೆ ಚಾಲನೆ

**ಗದಗ:** ಬಿಂಕದಕಟ್ಟಿ ಅಸುಂಡಿ ಮಲ್ಲಸಮುದ್ರವರೆಗೆ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜಾ ಕಾರ್ಯಕ್ರಮವನ್ನು ಬುದವಾರದಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ನೆರವೇರಿಸಿದರು.

ಈ ಸಂದರ್ಬದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಇತರರು ಉಪಸ್ಥಿತರಿದ್ದರು.



# ಸಾಲ ಮರುಪಾವತಿಯಿಂದ ಸಂಘದ ಬೆಳವಣಿಗೆ ಸಾಧ್ಯ



**ಮುದ್ದೇಬಿಹಾಳ:** ಕೃಷಿ ಸಹಕಾರಿ ಸಂಘಗಳು ಆರ್ಥಿಕವಾಗಿ ಬೆಳೆಯಲು ಉತ್ತಮ ಠೇವುದಾರರಗಿಂತ ಉತ್ತಮ ಸಾಲವನ್ನು ಮರುಪಾವತಿ ಸಂಘವು ಬೆಳವಣಿಗೆ ಸಾಧ್ಯವಾಗುತ್ತದೆ ಎಂದಜ

ಹಿರೇಮುರಾಳ ಶ್ರೀ ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಮಲ್ಲನಗೌಡ ಪಾಟೀಲ್ ಹೇಳಿದರು.

ತಾಲ್ಲೂಕಿನ ಹಿರೇಮುರಾಳ ಗ್ರಾಮದ ಶ್ರೀ ನೀಲಕಂಠೇಶ್ವರ ಸಭಾಭವನದಲ್ಲಿ ಶ್ರೀ ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 21 ನೇ ವಾರ್ಷಿಕ ಮಹಾಸಭೆಯನ್ನು ಉದ್ದೇಶಿಸಿ ಮಾತನಾಡಿದರು ಪ್ರಸ್ತಕ ವರ್ಷ ಸಂಘ 16.05 ಲಕ್ಷ ಲಾಭಗಳಿಸಿದೆ ದೀಪಾವಳಿ ಒಳಗೆ ಸಂಘದ ನೂತನ ಕಟ್ಟಡ ಲೋಕಾರ್ಪಣೆ ಮಾಡಲಾಗುತ್ತದೆ ಎಂದು ವಿವರಿಸಿದರು.

ವಾರ್ಷಿಕ ವರದಿಯನ್ನು ವಾಚಿಸಿದ ಮುಖ್ಯ ಕಾರ್ಯನಿರ್ವಾಹಕ ಎ.ಬಿ ಬಾಗೇವಾಡಿ ಕಳೆದ 17 ವರ್ಷಗಳಿಂದ ಸಂಘ ಅಡಿಟ್ ವರ್ಗೀಕರಣದಲ್ಲಿ ಎ ಗ್ರೇಡ್ ಹೊಂದಿದೆ ಹಾಗೂ ನಮ್ಮ ಸಂಘದಲ್ಲಿ ಮೈಕ್ರೋ ಎಟಿಎಂ ವ್ಯವಸ್ಥೆ ಕಾಮನ್ ಸರ್ವಿಸ್ ಇ_ಸ್ಟಾಪಿಂಗ್ ಸೌಲಭ್ಯವಿದ್ದು ಸದಸ್ಯರು ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಈ ವೇಳೆ ರೈತ ಮುಖಂಡ ಜೆಡಿಎಸ್ ಪಕ್ಷದ ನಾಯಕ ಬಿ.ಬಿ ಪಾಟೀಲ್ ಮಾತನಾಡಿ ಡಿಸಿಸಿ ಬ್ಯಾಂಕ್ ಬೇರುಗಳೆಂದರೆ ಸಹಕಾರಿ ಪತ್ತಿನ ಬ್ಯಾಂಕ್ ಗಳಾಗಿವೆ ಸಹಕಾರಿ ಸಂಘಗಳು ಸ್ವಂತ ಬಲದಿಂದ ಬೆಳೆಯುತ್ತಿವೆ ಎಂದ ಅವರು ನಮ್ಮ ಭಾಗದ ರೈತರು ನೀರಾವರಿ ಬಗ್ಗೆ ಎಚ್ಚರಗೊಳ್ಳಬೇಕು ಸಂಪೂರ್ಣ ನೀರಾವರಿ ನಮ್ಮ ಭಾಗದಲ್ಲಿ ಆದರೆ ರೈತರು ಸಂಘದಲ್ಲಿ ಸಾಲವಲ್ಲ ಡಿಪಾಜಿಟ್ ಇಡುತ್ತಾರೆ ಎಂದರು.

ಸಂಘದ ನಿಕಟಪೂರ್ವ ಅದ್ಯಕ್ಷ ಬಿ ಬಿ ಭೋವಿ ಮಾತನಾಡಿ ಸಕಾಲದಲ್ಲಿ ತೆಗೆದುಕೊಂಡ ಸಾಲ ಮರುಪಾವತಿಸಬೇಕು ಸಂಘದ ನೂತನ ಕಟ್ಟಡ ಕಾನೂನು ಸಲಹೆಯಿಂದ ಪೂರ್ಣಗಳ್ಳಲು ಸಾಧ್ಯವಿದೆ ಹೊಸ ಕಟ್ಟಡಕ್ಕೆ ಪರ್ನಿಚರ್ಸ್ ಮಾಡಿಸಲು ಕಟ್ಟಡ ನಿಧಿ ಬಳಕೆ ಮಾಡಿಕೊಳ್ಳಬೇಕೆಂದು ಸಲಹೆ ನೀಡಿದರು. ಹತ್ತನೆ ಹಾಗೂ ದ್ವೀತಿಯ ಪಿಯುಸಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ಮಾಡಲಾಯಿತು. ಸಭೆಯಲ್ಲಿ ಪಣಯ್ಯ ಹಿರೇಮಠ, ಗಣ್ಯರಾದ ಪ್ರಸನ್ನ ಕುಮಾರ್ ಜಾಗಿರದಾರ, ಬಿ.ಜಿ ಮಠ, ಎನ್. ಎಸ್ ರಾಮೋಡಗಿ, ಆದೇಶ ನಾಗರತ್ತಿ, ಸಿ ಬಿ ನಾಗರಬೆಟ್ಟ ಅಕ್ಬರ್ ಮುಲ್ಲಾ, ಮಲ್ಲೇಶಪ್ಪ ಬಿರಾದಾರ, ಬಸವಂತರಾಯ ನಾಗರತ್ತಿ, ಆದಪ್ಪರಾಮೋಡಗಿ, ಗದ್ದೆಪ್ಪ ಜೈನಾಪುರ, ಬಸಣ್ಣ ಕೇಸಾಪೂರ, ಎಂ.ಬಿ ಪಾಟೀಲ್, ಸಂಘದ ಉಪಾಧ್ಯಕ್ಷ ಸಿ.ಎಸ್ ರಾಮೋಡಗಿ, ನಿರ್ದೇಶಕರಾದ ಕೆ.ಎಸ್ ಹಿರೇಗೌಡರ, ಬಾಬುಸಾಬ ಮುಲ್ಲಾ, ಎಸ್ ಆರ್ ಕಿರಿಶ್ಯಾಳ, ಎಸ್ ಬಿ ಸಿದರೆಡ್ಡಿ,ಎಸ್ ಎಂ ಬಿರಾದಾರ, ವಿ ಎಚ್ ವಾಲಿಕಾರ, ಎಸ್ ವೈ ಭೋವಿ,ಎನ್ ಎಚ್ ಧನ್ನೂರ,ಶ್ರೀದೇವಿ ಬಾಗೇವಾಡಿ, ಸಾವಿತ್ರಿ ವಗ್ಗರ ವೃತ್ತಿಪರ ನಿರ್ದೇಶಕರಾದ ಯು.ವಿ ನಾಗಠಾಣ, ಎಸ್ ಬಿ ಕಟ್ಟಿಮನಿ ಸೇರಿದಂತೆ ಸಂಘದ ಸದಸ್ಯರು ಸಿಬ್ಬಂದಿಗಳು ಭಾಗವಹಿಸಿದ್ದರು.

# ಗಣತಿದಾರರ ಗೋಳು ಕೇಳುವರಾರು?

## ಗಣತಿಗೆ ಹೋದ ಶಿಕ್ಷಕರೇ ಸಂತ್ರಸ್ತರಾಗುತ್ತಿದ್ದಾರೆ

ವರದಿ ಶಿವಲಿಂಗ ಸಿದ್ನಾಳ

**ಮಹಾಲಿಂಗಪುರ:** ರಾಜ್ಯ ಸರಕಾರ ಹಮ್ಮಿಕೊಂಡಿರುವ ಸಾಮಾಜಿಕ, ಶೈಕ್ಷಣಿಕ ಎಂದು ಹೇಳಿಕೊಳ್ಳುವ ಜಾತಿ ಗಣತಿ ಪೂರ್ವ ತಯಾರಿ ಇಲ್ಲದೇ ಅರೆಬೆಂದ ಅವಸರದ ಕೆಲಸವಾಗಿದೆ ಎಂದು ಗಣತಿದಾರರು ಮತ್ತು ಸಾರ್ವಜನಿಕರು ಆರೋಪಿಸುತ್ತಿದ್ದಾರೆ.

ಗಣತಿಗಾಗಿ ಸರಕಾರ ಸಿದ್ದಗೊಳಿಸಿರುವ ಸಾಫ್ಟ್‌ವೇರ್ ಸರಿಕಾಗಿ ಅಪ್‌ಡೇಟ್ ಆಗಿಲ್ಲ, ಮೋಬೈಲ್‌ನಲ್ಲಿ ಇನ್ಸ್ಟಾಲ್ ಮಾಡಿದ ಆ್ಯಪ್ ಸರಿಯಾಗಿ ಕೆಲಸ ಮಾಡುತ್ತಿಲ್ಲ, ಪ್ರತಿ ಕುಟುಂಬದ ಪ್ರತಿ ಸದಸ್ಯನಿಗೂ 60 ಪ್ರಶ್ನೆ ಕೇಳಿ ಮಾಹಿತಿ ಮಾರ್ಕ್ ಮಾಡಿ ಆನ್‌ಲೈನ್ ಆ್ಯಪ್ ನಲ್ಲಿ ಎಂಟ್ರಿ ಮಾಡಿ ಸಬ್ಮಿಟ್ ಮಾಡುವಷ್ಟರಲ್ಲಿ ಸರ್ವರ್ ಸಮಸ್ಯೆ ಉಂಟಾಗಿ ಎರ್ರರ್ ಎಂದು ತೋರಿಸುತ್ತದೆ. ಸಮಸ್ಯೆಗೆ ಸ್ಪಂದಿಸಲು ಮೇಲಧಿಕಾರಿಗಳು ಮಾಡಿದ ವಾಟ್ಸಾಪ್ ಗ್ರುಪ್‌ಗೆ ಸಮಸ್ಯೆಯ ಸ್ಥಿತಿಗತಿ ತಿಳಿಸಿದರೆ ಅಧಿಕಾರಿಗಳೂ ಅಸಹಾಯಕರಾಗುತ್ತಿದ್ದಾರೆ. ಕೆಲವರು ಫೋನ್ ಕೂಡ ರಿಸೀವ್ ಮಾಡೋದಿಲ್ಲ, ನಮ್ಮ ಗೋಳು ಕೇಳುವರಾರು? ಎಂದು ಹೆಸರು ಹೇಳಲು ಇಚ್ಚಿಸದ ಗಣತಿದಾರರು ಅಳಲು ತೋಡಿಕೊಳ್ಳುತ್ತಿದ್ದಾರೆ. ಕುಟುಂಬಗಳ ಪಟ್ಟಿ ನೀಡದೇ ಕೆಇಬಿಯವರ ಜಿಯೋ ಟ್ಯಾಗ್ ನಂಬರ್ ನೀಡಿದ್ದು, ಆ ನಂಬರ್ ಮನೆಯನ್ನು ಗೂಗಲ್ ಮ್ಯಾಪ್‌ನಲ್ಲಿ ಲೋಕೇಶನ್ ಅರಸುತ್ತ ಮನೆಯ ಹಿಂದೆ ಮುಂದೆ ಗಿರಕಿ ಹೊಡೆಯುವಂತಾಗಿದೆ. ಅಂತೂ ಮನೆ ಸಿಕ್ಕಿತು ಅಂತ ಮಾಹಿತಿ ಕೇಳಿದ್ರೆ ಅಯ್ಯೋ ತಡೀರಿ ಅಂತ ಆಗ ಮನೆಯಲ್ಲಿನ ದಾಖಲೆಗಳನ್ನು ಹುಡುಕಲು ಶುರು ಮಾಡುತ್ತಾರೆ. ಎಲ್ಲಾ ದಾಖಲೆಗಳ ಚೀಲ ತಂದು ಗಣತಿದಾರರ ಮುಂದೆ ಸುರುವುತ್ತಾರೆ. ಅಂಥವರನ್ನು 60 ಪ್ರಶ್ನೆ ಕೇಳಿ ಎಲ್ಲಾ ಮಾಹಿತಿ ಕಲೆ ಹಾಕುವಷ್ಟರಲ್ಲಿ ಸಂಜೆಯಾಗುತ್ತದೆ. ಕೆಲವು ಅಂಗಡಿಕಾರರು ಸಾಹೇಬ್ರೇ ಸ್ವಲ್ಪ ತಡೀರಿ ಗಿರಾಕಿಗಳಿಗೆ ಸಾಮಾನು ಕೊಟ್ಟು ಬರ್ತೀನಿ ಅಂತ ಎದ್ದು ಹೋಗುತ್ತಾರೆ. ಕೆಲವರಂತೂ ನಮ್ಮನೆಯಲ್ಲಿ ದೊಡ್ಡವರಾರೂ ಇಲ್ಲ ಅವರಿದ್ದಾಗ ಮತ್ತೆ ಬನ್ನಿ ಎಂದು ಮರಳಿ ಕಳಿಸುತ್ತಾರೆ. ಹೀಗಾಗಿ ಗಣತಿಗೆ ಹೋದ ಶಿಕ್ಷಕರೇ ಸಂತ್ರಸ್ತರಾಗುತ್ತಿದ್ದಾರೆ.

ಇಂಥ ಅಪರಿಪಕ್ವ ಸಾಧನಗಳೊಂದಿಗೆ ಅಪರಿಪೂರ್ಣ ಮಾಹಿತಿಯೊಂದಿಗೆ ಪೂರ್ವ ತಯಾರಿ ಇಲ್ಲದೇ ಒಲ್ಲದ ಅತಿಥಿಯಂತೆ ಸಾರ್ವಜನಿಕರ ಅವಕೃಪೆಗೆ ಒಳಗಾಗುವ ಸ್ಥಿತಿ ಗಣತಿದಾರ ಶಿಕ್ಷಕರದ್ದಾಗಿದೆ. ಆದ್ದರಿಂದ ವಿಧಾನದಲ್ಲಿ ಮತ್ತೇನಾದರೂ ಸರಳೀಕರಣ ಅಥವಾ ತಕ್ಷಣ ಮಾಹಿತಿ ಪಡೆಯುವ ಮ್ಯಾನ್ಯುವಲ್ ಮೆಥಡ್ ಅಳವಡಿಸುವಂತಾದರೆ ಜನಗಣತಿ ಮತ್ತಷ್ಟು ಸುಲಭವಾಗುತ್ತದೆ ಎಂದು ಸಂತ್ರಸ್ತ ಶಿಕ್ಷಕರು ಅವಲತ್ತುಕೊಳ್ಳುತ್ತಿದ್ದಾರೆ.

### ಹತ್ತು ಜನರಿಗೆ ಅರವತ್ತು ಪ್ರಶ್ನೆ

ಯಾರ ಮನೆಯಲ್ಲೂ ಫಲಾನುಭವಿಗಳು ತಮ್ಮ ದಾಖಲೆಗಳನ್ನು ಸಿದ್ದಗೊಳಿಸಿಕೊಂಡು ಮಾಹಿತಿಗೆ ಸಹಕರಿಸುವುದಿಲ್ಲ, ಒಂದು ಮನೆಯಲ್ಲಿ 10 ಜನ ಸದಸ್ಯರಿದ್ದರೆ ಹತ್ತೂ ಜನರಿಗೆ ತಲಾ 60 ಪ್ರಶ್ನೆಯಂತೆ 600 ಪ್ರಶ್ನೆಗಳಿಗೆ ಅವರಿಂದ ಉತ್ತರ ಪಡೆಯುವುದರಲ್ಲಿ ಇಡೀ ದಿನ ಮುಗಿಯುತ್ತದೆ. ತಂದೆ ಕಾಲಂ ನಲ್ಲಿ ಜಾತಿ ಯಾವುದು ಅಂತ ಕೇಳಿದ್ದಾರೆ. ಆದರೆ ಅವರ ಮಕ್ಕಳ ಕಾಲಂನಲ್ಲೂ ಜಾತಿ ಕಾಲಂ ತುಂಬಬೇಕು. ಗಣತಿದಾರರಿಗೆ ತರಬೇತಿ ಸರಿಯಾಗಿ ಸಿಕ್ಕಿಲ್ಲ, ತರಬೇತಿ ಕೊಡುವವರಿಗೇ ಸರಿಯಾದ ಪರಿಪೂರ್ಣ ಮಾಹಿತಿ ಇಲ್ಲ. ಒಬ್ಬ ಶಿಕ್ಷಕನಿಗೆ ಹೆಚ್ಚೂ ಕಡಿಮೆ ನೂರಾರು ಮನೆಗಳನ್ನು ಹಂಚಿ ಕೊಡಲಾಗಿದೆ. ಆದರೆ ಮೂರು ದಿನ ಸುತ್ತಾಡಿದರೂ ಬರೀ ಮೂರೇ ಕುಟುಂಬಗಳ ಮಾಹಿತಿ ಪಡೆಯಲು ಸಾಧ್ಯವಾಗಿದೆ. ಗ್ರಾಮೀಣ ಭಾಗದಲ್ಲಿ ಬಹುತೇಕ ಕುಟುಂಬಗಳು ತೋಟದ ವಸತಿಯಲ್ಲಿರುತ್ತವೆ. ಅಲ್ಲಿ ನೆಟ್‌ವರ್ಕ್ ಸರಿಯಾಗಿ ಇರುವುದಿಲ್ಲ.



## ಹಳದಿ ದಿನ ಆಚರಣೆ

**ಬೆಳಗಾವಿ:** ಇಲ್ಲಿನ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯಲ್ಲಿ ನವರಾತ್ರಿಯ ನಾಲ್ಕನೆಯ ದಿನದ ಅಂಗವಾಗಿ ಅಂಭಾ ಭವಾನಿ ದೇವಿಯು ಹಳದಿ ಬಣ್ಣದಲ್ಲಿ ಕಂಗೊಳಿಸಿದ ನಿಮಿತ್ಯ ಇಲ್ಲಿನ ಮಹಿಳೆಯರು ಹಳದಿ ಬಣ್ಣದ ಸೀರೆ ಬಟ್ಟೆ ಧರಿಸಿ ಹಳದಿ ದಿನವನ್ನು ಆಚರಣೆ ಮಾಡಿ ಸಂಭ್ರಮಿಸಿದರು.

## ಸೆ.29 ರಂದು ಪ್ರಗತಿ ಪರಿಶೀಲನಾ ಸಭೆ

**ಕೊಪ್ಪಳ:** ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಸೆಪ್ಟೆಂಬರ್ 29 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜಿ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಸಭೆಗೆ ಹಾಜರಾಗಬೇಕು. ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳುವಂತೆ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಪ್ರಯುಕ್ತ ವಿಶೇಷ ಶ್ರಮದಾನ




**ಬೆಳಗಾವಿ:** "ಸ್ವಚ್ಛತಾ ಹೀ ಸೇವಾ" ಕಾರ್ಯಕ್ರಮದ ಅಂಗವಾಗಿ ಬೆಳಗಾವಿ ತಾಲೂಕಿನ ಬಸ್ತವಾಡ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛ ವಾಹಿನಿಗೆ ಚಾಲನೆ ನೀಡುವ ಮೂಲಕ "ಏಕ್ ದಿನ್, ಏಕ್ ಘಂಟಾ, ಏಕ್ ಸಾಥ್" ಎಂಬ ಘೋಷ ವಾಕ್ಯದಡಿ ಹಮ್ಮಿಕೊಳ್ಳಲಾಗಿದ್ದ ಸಾಮೂಹಿಕ ಶ್ರಮದಾನ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿದರು.

ಗುರುವಾರದಂದು ಕಾರ್ಯಕ್ರಮದಲ್ಲಿ ಮಾತನಾಡಿದ ಜಿಪಂ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ ಪ್ರತಿ ವರ್ಷದಂತೆ ಈ ವರ್ಷವೂ ಸಹ "ಸ್ವಚ್ಛತಾ ಹೀ ಸೇವಾ" ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಂಡಿದ್ದು, ಪ್ರತಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿನ ಕಸದ ರಾಶಿಗಳನ್ನು ಗುರುತಿಸಿ ಅವುಗಳನ್ನು ಸ್ವಚ್ಛಗೊಳಿಸುವುದು, ಸಾರ್ವಜನಿಕ ಸ್ಥಳಗಳ ಸ್ವಚ್ಛತೆ, ಸಫಾಯಿ ಮಿತ್ರರಿಗೆ ಸುರಕ್ಷಾ ಶಿಬಿರಗಳನ್ನು ಹಮ್ಮಿಕೊಳ್ಳುವುದು, ತ್ಯಾಜ್ಯ ರಹಿತ ಹಬ್ಬಗಳ ಪ್ರೋತ್ಸಾಹ, ನೈಸರ್ಗಿಕ ವಿಕೋಪ ಪೀಡಿತ ಪ್ರದೇಶಗಳಲ್ಲಿ ಸ್ವಚ್ಛತಾ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು, ಸಸಿ ನೆಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಕಾರ್ಯಕ್ರಮದಲ್ಲಿ ಉಪಸ್ಥತಿರಿದ್ದಅಧಿಕಾರಿ, ಜನಪ್ರತಿನಿಧಿಗಳು ಹಾಗೂ ಸ್ವ-ಸಹಾಯ ಸಂಘದ ಮಹಿಳೆಯರಿಗೆ ತಿಳಿಸಿದರು.

ತದನಂತರ ಗ್ರಾಮ ಪಂಚಾಯತಿ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಅದೇ ರೀತಿ ಸುವರ್ಣ ಸೌಧದ ಸೈನ್ಸ ಪಾರ್ಕ ನಲ್ಲಿ ಶ್ರಮದಾನ ಕಾರ್ಯಕ್ರಮವನ್ನು ಹಮ್ಮಿಕೊಂಡು ಸಸಿ ನೆಡಲಾಯಿತು. ಅದೇ ರೀತಿ ರಾಷ್ಟ್ರೀಯ ಜೀವನೋಪಾಯ ಅಭಿಯಾನ ಯೋಜನೆಯಡಿ ಸದರಿ ದಿನದಂದು ಮಾದಕ ಮುಕ್ತ ಕರ್ನಾಟಕ ಅಭಿಯಾನದಡಿ ಗ್ರಾಮ ಪಂಚಾಯತ ವ್ಯಾಪ್ತಿಯ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಇದಾದ ನಂತರ ಸ್ವಚ್ಛ ವಾಹಿನಿ ವಾಹನವೂ ಸ್ವ-ಸಹಾಯ ಸಂಘದ ಮಹಿಳೆಯರ ಮೂಲಕ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂಚರಿಸಿ ಜೀಂಗಲ್ಸ ಮೂಲಕ ಮಾದಕ ಮುಕ್ತ ಕರ್ನಾಟಕ ಅಭಿಯಾನ ಹಾಗೂ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಬಗ್ಗೆ ವ್ಯಾಪಕ ಪ್ರಚಾರ ಕಾರ್ಯ ಕೈಗೊಳ್ಳಲಾಯಿತು. ಈ ಸಂದರ್ಭದಲ್ಲಿ ಬೆಳಗಾವಿ ಸಾಮಾಜಿ ಅರಣ್ಯ ವಲಯ ಅಧಿಕಾರಿ ಗಿರೀಶ್ ಇಟಗಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪ್ರಶಾಂತ ಸಾವಂತ, ಸಹಾಯಕ ನಿರ್ದೇಶಕ(ಗ್ರಾಉ) ಬಸವಂತ ಕಡೆಮನಿ, ಗ್ರಾಮ ಪಂಚಾಯತ ಅಧ್ಯಕ್ಷರು ಶಿಲ್ಪಾ ಪಾಟೀಲ, ಉಪಾಧ್ಯಕ್ಷರು ವಿಠ್ಠಲ ಸಾಂಬ್ರೇಕರ, ಗ್ರಾಪಂ ಅಭಿವೃದ್ಧಿ ಅಧಿಕಾರಿ ಹಣಮಂತ ಪೋಳ್, ಜಿಪಂ ಎಸ್.ಬಿ.ಎಮ್ ಯೋಜನೆಯ ಎಲ್ಲ ಜಿಲ್ಲಾ ಸಮಾಲೋಚಕರುಗಳು, ಎನ್ ಆರ್.ಎಲ್ ಎಮ್ ಯೋಜನೆಯ ಸಿಬ್ಬಂದಿಗಳು, ತಾಲೂಕಾ ಪಂಚಾಯತ ಸಿಬ್ಬಂದಿ ವರ್ಗದವರು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಇತರರು ಉಪಸ್ಥಿತರಿದ್ದರು.

## ಕಟ್ಟಡ ಕಾಮಗಾರಿಗೆ ಭೂಮಿಪೂಜೆ



**ಗದಗ:** ನಗರದ ಕಳಸಾಪುರ ರಸ್ತೆ ಚಂದಪ್ಪನವರ ಲೇಔಟ್‌ದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಕಟ್ಟಡ ಕಾಮಗಾರಿಗಳ ಭೂಮಿ ಪೂಜೆಯನ್ನು ಬುದವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ನೆರವೇರಿಸಿದರು.

ಈ ಸಂದರ್ಬದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಆಶೋಕ ಮಂದಾಲಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ನಗರಸಬೆ ಆಯುಕ್ತ ರಾಜಾರಾಮ ಪವಾರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಬಸವರಾಜ ಬಳ್ಳಾರಿ ಉಪಸ್ಥಿತರಿದ್ದರು.

## ವಿವಿಧ ಇಲಾಖೆಗಳಿಂದ ಅರ್ಜಿ ಆಹ್ವಾನ

**ಬೆಳಗಾವಿ:** ಬ್ಯಾಂಕಿಂಗ್ ಅಥವಾ ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸರ್ಕಾರಿ ಹುದ್ದೆ ಪಡೆಯಲು ಬಯಸುತ್ತಿರುವ ಪದವೀಧರರಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲು ಕಾರ್ಯಕ್ರಮವನ್ನು ಆಯೋಜಿಸಿದೆ. ಆಸಕ್ತ ಪದವೀಧರ ಅಭ್ಯರ್ಥಿಗಳು ಸೆಪ್ಟಂಬರ, 30, 2025 ರ ಒಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳ ಬಹುದಾಗಿದೆ. ಏಖಔಗ ನ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವು ಬ್ಯಾಂಕಿಂಗ ಮತ್ತು ಕೇಂದ್ರ ಸರ್ಕಾರದ ಹುದ್ದೆಗಳ ನೇಮಕಾತಿ ಪರೀಕ್ಷೆಗಳಿಗೆ 50 ದಿನಗಳ ವಿಶೇಷ ತರಬೇತಿ ಹಾಗೂ ಪರೀಕ್ಷೆಗಳನ್ನು ಯಶಸ್ವಿಯಾಗಿ ಎದುರಿಸಲು ಅಗತ್ಯವಾದ ಎಲ್ಲಾ ಕೌಶಲ್ಯ ಮತ್ತು ಜ್ಞಾನವನ್ನು ಒದಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0821-2515944/9964760090 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಚಿಕ್ಕೋಡಿ: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕೋಥಳಿ-ಕುಪ್ಪನವಾಡಿ ಗ್ರಾಮದಲ್ಲಿರುವ ಜವಾಹರ ನವೋದಯ ವಿದ್ಯಾಲಯದ 2026-27 ನೇ ಸಾಲಿನ ಶೈಕ್ಷಣಿಕ ವರ್ಷಕ್ಕಾಗಿ 9 ಮತ್ತು 11 ನೇ ತರಗತಿಗಳಲ್ಲಿ ಖಾಲಿ ಇರುವ ಸ್ಥಾನ ಭರ್ತಿ ಮಾಡಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅಕ್ಟೋಬರ, 07, 2025 ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದ್ದು ಹಾಗೂ ಪೆಬ್ರುವರಿ, 07, 2025 ರಂದು ಪ್ರವೇಶ ಪರೀಕ್ಷೆಯ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8904651847, 6361298224, 9972892950, ಗೆ ಅಥವಾ ವಿದ್ಯಾಲಯ ಸಮಿತಿಯ ಜಾಲತಾಣ – 9 ನೇ ತರಗತಿಗೆ – https://cbseitms.nic.in/2025/nvsix_9 ಮತ್ತು 11 ನೇ ತರಗತಿಗೆ https://cbseitms.nic.in/2025/nvsxi_11 ಹಾಗೂ ಜವಾಹರ ನವೋದಯ ವಿದ್ಯಾಲಯದ ಸಹಾಯಕ ಕೇ0ದ್ರವನ್ನು ಸ0ಪರ್ಕಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಗ್ಯಲಕ್ಷ್ಮೀ ಫಲಾನುಭವಿಗಳ ಗಮನಕ್ಕೆ

**ಬೆಳಗಾವಿ:** ಶಿಶು ಅಭಿವೃದ್ಧಿ ಯೋಜನೆ ನಿಪ್ಪಾಣಿ ವ್ಯಾಪ್ತಿಯ ಭಾಗ್ಯಲಕ್ಷ್ಮೀ ಯೋಜನೆಯಡಿ 2006-07ನೇ ಸಾಲಿನಲ್ಲಿ 1546 ಫಲಾನುಭವಿಗಳ ನೊಂದಣಿಯಾಗಿ ಬಾಂಡ ಸೌಲಭ್ಯ ಪಡೆದಿರುತ್ತಾರೆ. ಪರಿಪಕ್ವ ಮೊತ್ತಕ್ಕಾಗಿ ಆರ್ಥಿಕ ಸೌಲಭ್ಯ ಪಡೆಯಲು 1270 ಫಲಾನುಭವಿಗಳನ್ನು ಆನ್‌ಲೈನ್‌ನಲ್ಲಿ ಅಳವಡಿಸಲಾಗಿದೆ.

ಉಳಿದ 274 ಫಲಾನುಭವಿಗಳಲ್ಲಿ 203 ಫಲಾನುಭವಿಗಳು ಅನರ್ಹರಾಗಿದ್ದು, ಇನ್ನುಳಿದ 71 ಫಲಾನುಭವಿಗಳ ಆನ್‌ಲೈನ್ ಮಾಡಿಸಲು ಬಾಕಿ ಉಳಿದಿರುತ್ತಾರೆ. 2006-07ನೇ ಸಾಲಿನ ಭಾಗ್ಯಲಕ್ಷ್ಮೀ ಯೋಜನೆಯ ಬಾಂಡ ಪಡೆದ ಫಲಾನುಭವಿಗಳಿಗೆ ಪ್ರಧಾನ ಕಚೇರಿಯ ಆದೇಶದನ್ವಯ ಅಕ್ಟೋಬರ, 31, 2025 ರಂದು ಕೊನೆಯ ದಿನವಾಗಿದೆ. ಆದ್ದರಿಂದ ಆನ್‌ಲೈನ್ ನೊಂದಣಿಗೆ ಬಾಕಿ ಇರುವ ಫಲಾನುಭವಿಗಳು ಕಚೇರಿ ಅವಧಿಯಲ್ಲಿ ಬಂದು ಭಾಗ್ಯಲಕ್ಷ್ಮೀ ಬಾಂಡಿನಲ್ಲಿ ನಿಗದಿ ಪಡಿಸಿದ ಸೂಕ್ತ ದಾಖಲೆಗಳೊಂದಿಗೆ ಹಾಜರಾಗಿ ಆರ್ಥಿಕ ಸೌಲಭ್ಯ ಪಡೆಯುವಂತೆ ತಿಳಿಸಲಾಗಿದೆ.

ಸದರಿ ದಿನಾಂಕದ ನಂತರ ಅರ್ಹ ಫಲಾನುಭವಿಗಳು ಆರ್ಥಿಕ ಸೌಲಭ್ಯ ಪಡೆಯಲು ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08338-222523 ಅಥವಾ ಹತ್ತಿರದ ಅಂಗನವಾಡಿ ಕೇಂದ್ರ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಅಕ್ಕೋಳ ರೋಡ್, ಕೋರ್ಟ್ ಹತ್ತಿರ, ಚೌಗುಲೆ ಬಿಲ್ಡಿಂಗ್ ನಿಪ್ಪಾಣಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಷ್ಟ್ರೀಯ ಮಾದಕ ದ್ರವ್ಯಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

# ಮಾದಕ ವಸ್ತುಗಳ ಬಳಕೆ ನಿಯಂತ್ರಣಕ್ಕೆ ಸಮನ್ವಯ ಅಗತ್ಯ



**ಬಾಗಲಕೋಟೆ:** ಜಿಲ್ಲೆಯಲ್ಲಿ ಮಾದಕ ವಸ್ತುಗಳ ಸಾಗಾಣಿಕೆ, ಮಾರಾಟ ಹಾಗೂ ಅವುಗಳ ಬಳಕೆಯನ್ನು ಸಂಪೂರ್ಣವಾಗಿ ನಿಯಂತ್ರಿಸಲು ವಿವಿಧ ಇಲಾಖೆಗಳ ಸಮನ್ವಯ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬುಧವಾರ ರಾಷ್ಟ್ರೀಯ ಮಾದಕ ದ್ರವ್ಯಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಾದಕ ವಸ್ತುಗಳಿಗೆ ಯುವ ಸಮುದಾಯ ಹೆಚ್ಚು ಆಕರ್ಷಿತವಾಗುತ್ತಿದೆ. ಇವುಗಳ ಬಳಕೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಬಗಗೆ ಅರಿವು ಮೂಡಿಸುವ ಕಾರ್ಯವಾಗಬೇಕಿದೆ. ಮಾದಕ ವಸ್ತುಗಳಿಂದ ದೂರ ಉಳಿಯುವಂತೆ ಮಾಡಲು ಕಾರ್ಯಕ್ರಮಗಳ ಹಮ್ಮಿಕೊಳ್ಳಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ ಶಾಲಾ ಕಾಲೇಜುಗಳಲ್ಲಿ ಮಾದಕ ವಸ್ತುಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಹಮ್ಮಿಕೊಂಡ ನಂತರ ಎಷ್ಟು ಪ್ರಮಾಣದಲ್ಲಿ ಉಪಯುಕ್ತವಾಗುತ್ತಿದೆ ಎಂಬ ಬಗ್ಗೆಯೂ ಮಾಹಿತಿ ಕಲೆ ಹಾಕುವ ಕೆಲಸವಾಗಬೇಕು. ತಂಬಾಕು ಉತ್ಪನ್ನಗಳು ಸೇರಿದಂತೆ ಮಾದಕ ವಸ್ತುಗಳ ದುಶ್ಚಟಗಳಿಗೆ ಕಾರ್ಮಿಕರು ವ್ಯಸನಿಗಳಾಗುತ್ತಿದ್ದಾರೆ. ಅವರಲ್ಲಿಯೂ ಅರಿವು ಮೂಡಿಸುವ ಕೆಲಸವಾಗಬೇಕು. ಮಾದಕ ವಸ್ತು ಕಳ್ಳಸಾಗಣೆ ಉದ್ದೇಶಗಳಿಗಾಗಿ ಕೋರಿಯರ್ ಸೇವೆಗಳ ಸರಿಯಾದ ಮೇಲ್ವಿಚಾರಣೆ ಸಹ ಅಗತ್ಯವಾಗಿದೆ ಎಂದರು.

ಕೃಷಿ, ತೋಟಗಾರಿಕೆ, ಅರಣ್ಯ ಇಲಾಖೆ ಸಿಬ್ಬಂದಿ ಆಗಾಗ್ಗೆ ಕೃಷಿ ಜಮೀನು, ತೋಟಗಳಿಗೆ ಭೇಟಿ ನೀಡಿ ಗಾಂಜಾ ಬೆಳೆಗಳನ್ನು ಬೆಳೆಯುತ್ತಿರುವ ಬಗ್ಗೆ ಪರಿಶೀಲಿಸಬೇಕು. ಖಾಸಗಿ ಪಾರ್ಸಲ್ ಸರ್ವಿಸ್‌ಗಳ ಕಚೇರಿಗಳನ್ನು ಹಾಗೂ ಆನ್‌ಲೈನ್ ಮಾರುಕಟ್ಟೆ ಗೋದಾಮುಗಳನ್ನು ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕು. ನಿರ್ಭಂದಿತ ಔಷಧಿಗಳು ಜನ ಸಾಮಾನ್ಯರಿಗೆಲ್ಲರೂ ಮಾರಾಟ ಮಾಡುವಂತಿಲ್ಲ. ಈ ಬಗ್ಗೆ ಜಿಲ್ಲೆಯ ಔಷಧ ನಿಯಂತ್ರಣ ಅಧಿಕಾರಿಗಳು ಔಷಧಿ ಅಂಗಡಿಗಳ ಬಗ್ಗೆ ಎಚ್ಚರವಹಿಸಬೇಕು. ಜಿಲ್ಲೆಯನ್ನು ಮಾದಕ ವ್ಯಸನ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಕೈ ಜೋಡಿಸಬೇಕಿದೆ ಎಂದರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಮಾತನಾಡಿ ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳಲ್ಲಿ ಮಾದಕ ದ್ರವ್ಯ ನಿಯಂತ್ರಣ ತಂಡಗಳನ್ನು ರಚಿಸಿ ವಿದ್ಯಾರ್ಥಿಗಳಿಗೆ ಮತ್ತು ಅವರ ಪೋಷಕಗಳಿಗೆ ಅರಿವು ಮೂಡಿಸುವ ಕೆಲಸವಾಗಬೇಕು. ಕಾಲೇಜು ವಿದ್ಯಾರ್ಥಿ ನಿಲಯಗಳಲ್ಲಿ ರಜೆಯ ದಿನಗಳಲ್ಲಿ ಮನೆಗಳಿಗೆ ಹೋಗಿ ನಂತರ ಹಾಸ್ಟೆಲ್‌ಗಳಿಗೆ ಮರಳಿ ಬರುವ ಸಂದರ್ಭದಲ್ಲಿ ಅವರು ಯಾವುದಾದರೂ ಮಾದಕ ವಸ್ತುಗಳನ್ನು ತೆಗೆದುಕೊಂಡು ಬರುತ್ತಾರಾ ಎಂಬುದನ್ನು ಪರಿಶೀಲನೆ ಮಾಡಬೇಕಾಗುತ್ತದೆ ಎಂದರು.

ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ, ಮಹಾಂತೇಶ್ವರ ಜಿದ್ದಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಂಡಲೀಕ ಕಾಂಬಳೆ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಡಿವಾಯ್‌ಎಸ್‌ಪಿ ಗಜಾನನ ಸುತಾರ ಸೇರಿದಂತೆ ಇತರ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.




## ಮುನವಳ್ಳಿ: ಪೌರ ಕಾರ್ಮಿಕರ ದಿನಾಚರಣೆ

**ಯರಗಟ್ಟಿ:** ಸಮೀಪದ ಮುನವಳ್ಳಿ ಪಟ್ಟಣದ ಸೌಂದರ್ಯ ಕಾಪಾಡುವಲ್ಲಿ ಪೌರ ಕಾರ್ಮಿಕರ ಸೇವೆ ಅನನ್ಯವಾದುದು, ಮಳೆ, ಬಿಸಿಲು, ಚಳಿ ಎನ್ನದೆ ತಮ್ಮ ದಿನ ನಿತ್ಯದ ಸ್ವಚ್ಛತಾ ಸೇವೆಯಲ್ಲಿ ತೊಡಗಿಕೊಂಡಿರುತ್ತಾರೆ. ಪೌರ ಕಾರ್ಮಿಕರು ವ್ಯಸನಗಳಿಗೆ ಅಂಟಿಕೊಳ್ಳದೆ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಪೌರಕಾರ್ಮಿಕರಿಗೆ ರಿಗೆ ಎಷ್ಟು ಗೌರವಿಸಿದರೂ ಕಡಿಮೆ, ಸಾರ್ವಜನಿಕರು ಅವರಿಗೆ ಸಹಕಾರ ನೀಡಬೇಕು. ಪೌರಕಾರ್ಮಿಕರು ತಮ್ಮ ಮಕ್ಕಳ ಶಿಕ್ಷಣದ ಕಡೆಗೆ ವಿಶೇಷ ಗಮನ ನೀಡಬೇಕೆಂದು ಪುರಸಭೆ ಅಧ್ಯಕ್ಷ ಸಿ. ಬಿ. ಬಾಳಿ ಹೇಳಿದರು.

ಅವರು ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು. ಪುರಸಭೆ ಮುಖ್ಯಾಧಿಕಾರಿ ಮಹೇಂದ್ರ ತಿಮ್ಮಾಣಿ ಮಾತನಾಡಿ ಸರಕಾರವು ಪೌರ ಕಾರ್ಮಿಕ ಕಾರ್ಯವನ್ನು ಗುರುತಿಸಿ, ಅವರಿಗೆ ಸೂಕ್ತ ಸ್ಥಾನಮಾನ ನೀಡುವ ಉದ್ದೇಶದಿಂದ ಕಳೆದ 14 ವರ್ಷಗಳಿಂದ ಪೌರಕಾರ್ಮಿಕರ ದಿನಾಚರಣೆ ಆಚರಿಸಲಾಗುತ್ತಿದೆ. ಖಾಯಂಗೊಂಡ ನೌಕರರಿಗೆ ವಿಶೇಷ ಭತ್ಯೆ ನೀಡುವುದು, ಮನರಂಜನೆಯ ಆಟಗಳನ್ನು ಆಡಿಸಿ ಬಹುಮಾನ ವಿತರಿಸುವುದು ಇಂಥ ಹಲವಾರು ಕಾರ್ಯಕ್ರಮಗಳನ್ನು ಇಂದು ಆಯೋಜಿಸಲಾಗಿದೆ ಎಂದರು.ಪುರಸಭೆಯ ಉಪಾಧ್ಯಕ್ಷೆ ಕೆ.ಎಚ್.ಹಿರೇಮೇತ್ರಿ, ಕಂದಾಯ ಅಧಿಕಾರಿ ಅನಿಲಕುಮಾರ ಗಿಡ್ನಂದಿ, ಪುರಸಭೆಯ ಸರ್ವ ಸದಸ್ಯರು, ಸಿಬ್ಬಂದಿ ವರ್ಗದವರು ಇದ್ದರು.

ಉತ್ತಮ ಕೆಲಸ ನಿರ್ವಹಿಸಿದ ಪೌರಕಾರ್ಮಿಕರಿಗೆ ಸನ್ಮಾನ, ಮನರಂಜನಾ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಮಧುಮತಿ ಕೌಜಲಗಿ ನಿರೂಪಿಸಿದರು. ಪೂಜಾ ದೊಡಮನಿ ಸ್ವಾಗತಿಸಿದರು. ಸರಸ್ವತಿ ದಳವಾಯಿ ವಂದಿಸಿದರು.

## ಔಷಧ ಉಗ್ರಾಣಕ್ಕೆ ಅಧಿಕಾರಿಗಳ ದಿಢೀರ ಭೇಟಿ

**ಬೆಳಗಾವಿ:** ಬೆಳಗಾವಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಅವರು, ಬೆಳಗಾವಿ ನಗರದ ಜಿಲ್ಲಾ ಔಷಧ ಉಗ್ರಾಣಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

ಉಗ್ರಾಣದ ಸ್ಟೋರ್ ಹಾಗೂ ಸಿಬ್ಬಂದಿಗಳ ಹಾಜರಾತಿ ಬಗ್ಗೆ ಮಾಹಿತಿ ಪಡೆದು, ಔಷಧ ತಂತ್ರಾಂಶದ ಬಗ್ಗೆ ಸಂಪೂರ್ಣ ವಿವರಣೆ ಪಡೆದುಕೊಂಡು ಪರಿಶೀಲನೆ ಮಾಡಿದರು. ಬೆಳಗಾವಿ ಜಿಲ್ಲೆಯ ಆರೋಗ್ಯ ಸಂಸ್ಥೆಗಳಿಗೆ ಔಷಧಗಳ ಸರಬರಾಜಿನ ಬಗ್ಗೆ ತಿಳಿದುಕೊಂಡು ಆರೋಗ್ಯ ಸಂಸ್ಥೆಗಳ ಬೇಡಿಕೆಗೆ ಅನುಗುಣವಾಗಿ ಸರಬರಾಜು ಆಗುತ್ತಿರುವ ಕುರಿತು ಪರಿಶೀಲನೆ ನಡೆಸಿದರು.

ಜಿಲ್ಲೆಯ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ರೋಗಿಗಳ ಸಂಖ್ಯೆ ಒಂದೇ ರೀತಿಯಾಗಿ ಇರದೇ ಇರುವುದರಿಂದ ರೋಗಿಗಳ ಸಂಖ್ಯೆಗನುಗುಣವಾಗಿ ಹಾಗೂ ಆರೋಗ್ಯ ಸಂಸ್ಥೆಗಳ ಅವಶ್ಯಕತೆಗನುಗುಣವಾಗಿ ಔಷಧಿಗಳನ್ನು ವಿತರಿಸಲು ಉಗ್ರಾಣದ ಪ್ರಭಾರಧಾರಕರಿಗೆ ನಿರ್ದೇಶನ ನೀಡಿದರು. ಔಷಧಗಳ ಅವಧಿ ಮೀರದಂತೆ ನಿಗಾವಹಿಸುವುದು ಹಾಗೂ ಅವಧಿ ಮೀರಿದ ಔಷಧಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಕ್ರಮ ವಹಿಸಲು ತಿಳಿಸಿದರು.

ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ಸ್ಥಳೀಯವಾಗಿ ಖರೀದಿಸಿದ ಔಷಧಗಳನ್ನು ಇ-ಔಷಧ ತಂತ್ರಾಂಶದಲ್ಲಿ ಇಂದೀಕರಿಸಲು ಕಟ್ಟು ನಿಟ್ಟಾಗಿ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಬಸವರಾಜ ಅಡವಿಮಠ, ಬೆಳಗಾವಿ ಜಿಲ್ಲಾ ಆರೋಗ್ಯಾಧಿಕಾರಿ ಡಾ: ಐ.ಪಿ ಗಡಾದ್, ಜಿಲ್ಲಾ ಔಷಧ ಉಗ್ರಾಣದ ಪ್ರಭಾರಧಾರಕ ಶಿವಾನಂದ ಸೊಂಟಕ್ಕಿ ಹಾಗೂ ಉಗ್ರಾಣದ ಸಿಬ್ಬಂದಿಗಳು ಉಪಸ್ಥಿತರಿದ್ದರು.





## ವ್ಹಿಪಿಕೆಪಿಎಸ್ ಬ್ಯಾಂಕ್‌ಗೆ 89.50 ಲಕ್ಷ ನಿವ್ವಳ ಲಾಭ

**ಬಸವನಬಾಗೇವಾಡಿ:** ಪಟ್ಟಣದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘವು 2024-25 ನೇ ಸಾಲಿನಲ್ಲಿ ಗೊತ್ತುಪಡಿಸಿದ ಎಲ್ಲ ಕಾರ್ಯಕ್ರಮಗಳನ್ನು ವ್ಯವಸ್ಥಿತ ರೀತಿಯಲ್ಲಿ ನಿರ್ವಹಿಸುವ ಮೂಲಕ ನಿರೀಕ್ಷಿತ ಮಟ್ಟದಲ್ಲಿ ಸಾಲ ವಸೂಲಾತಿ ಮಾಡಿದೆ. ಸಾಲ ನಿರ್ವಹಣೆ ಮತ್ತು ಸಂಪನ್ಮೂಲಗಳ ಸಮಯೋಚಿತ ಹೂಡಿಕೆಗಳಿಂದ ವರದಿ ವರ್ಷದಲ್ಲಿ ಸಂಘವು ಪ್ರೊ.ವೈದ್ಯನಾಥನ್ ವರದಿ ಅನ್ವಯ ನಿಷ್ಕ್ರಿಯ ಆಸ್ತಿಗಳ ಮೇಲೆ ಅನುವು ಹಾಗೂ ಅವಶ್ಯಕ ಅನುವುಗಳನ್ನು ಕಲ್ಪಿಸಿದ ನಂತರ ಸಂಘವು ರೂ. 89.50 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದು ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ಹೇಳಿದರು.

ಪಟ್ಟಣದ ಯಲ್ಲಾಲಿಂಗ ಮಠದ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 2024-25ನೇ ಸಾಲಿನ 81 ವಾರ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವರದಿ ವರ್ಷಾಂತ್ಯಕ್ಕೆ ಸಂಘದ ಸ್ವಂತ ಬಂಡವಾಳ ರೂ. 1442.13 ಲಕ್ಷ, ಒಟ್ಟು ಠೇವಣಿ ರೂ.5075.01 ಲಕ್ಷ, ಪಡೆದ ಸಾಲಗಳ ಬಾಕಿ ರೂ. 1418.55 ಲಕ್ಷಗಳಷ್ಟಿದ್ದು. ದುಡಿಯುವ ಬಂಡವಾಳ ರೂ.7936.41 ಲಕ್ಷ ಇರುವದು. ಮಾ.31 ಕ್ಕೆ ಬರತಕ್ಕ ಸಾಲಗಳ ಬಾಕಿ ರೂ. 4026.48 ಲಕ್ಷ ಇದೆ. ಸಂಘವು ಶಾಸನ ಬದ್ಧ ಹಾಗೂ ಇತರೆ ಸಂಘ-ಸಂಸ್ಥೆಗಳಲ್ಲಿ ಹೂಡಿದ ಮೊತ್ತ ರೂ.3387.42 ಲಕ್ಷಗಳಷ್ಟಿದೆ ಎಂದ ಅವರು, ಸಂಘವು ಅಪೆಕ್ಸ ಬ್ಯಾಂಕ ರಾಜ್ಯಮಟ್ಟದ ಹಾಗೂ ವಿಜಯಪುರ ಜಿಲ್ಲೆಯ ಡಿಸಿಸಿ ಬ್ಯಾಂಕದಿಂದ ಅತ್ಯುತ್ತಮ ಸಹಕಾರಿ ಸಂಘ ಪ್ರಶಸ್ತಿಗೆ ಭಾಜನವಾಗಿದೆ ಎಂದರು.

ಸಭೆಯಲ್ಲಿ ಠೇವಣಿಗಳ ಆಕರ್ಷಣೆಗಾಗಿ ಬಡ್ಡಿ ದರ ಹೆಚ್ಚಿಸುವಂತೆ, ಬಿನ್ ಶೇತ್ಕಿ ಸಾಲಕ್ಕಾಗಿ ರೈತರ ಬೆಳೆ ಸಾಲ ಇದ್ದವರ ಜಾಮೀನು ಪಡೆಯುವ ಬದಲು ವ್ಯಾಪಾರಸ್ಥರ ಜಾಮೀನು ಪಡೆಯುವುದು, ರೈತರ ಬೆಳೆ ಸಾಲದ ಪ್ರಮಾಣವನ್ನು ಹೆಚ್ಚಿಸುವಂತೆ, ರೈತರ ಜಮೀನಿನಲ್ಲಿ ಮನೆ ಕಟ್ಟಲು ಸಾಲ ಸೌಲಭ್ಯ ಒದಗಿಸುವಂತೆ ಸಭೆಯಲ್ಲಿ ಸದಸ್ಯರು ಒತ್ತಾಯಿಸಿದರು.

ಕೃಷಿಯೇತರ ಸಾಲ ಪಡೆದ ಸಾಲಗಾರರು ಸಕಾಲಿಕವಾಗಿ ತಮ್ಮ ಸಾಲವನ್ನು ತುಂಬುವ ಮೂಲಕ ಸಂಘದ ಅಭಿವೃದ್ಧಿ ಸಹಕಾರ ನೀಡಬೇಕೆಂದರು.

ವೇದಿಕೆಯಲ್ಲಿ ಸಂಘದ ಉಪಾಧ್ಯಕ್ಷ ಮಲ್ಲೇಶಿ ಕಡಕೋಳ, ನಿರ್ದೇಶಕರಾದ ಶ್ರೀಶೈಲ ಪರಮಗೊಂಡ, ಈರಣ್ಣ ವಂದಾಲ, ಸುರೇಶ ನಾಯಕ, ನಿಂಗಪ್ಪ ,ಕುಳಗೇರಿ, ಸಂತೋಷ ಹಾರಿವಾಳ, ಸಂಗನಬಸಪ್ಪ ನಾಯ್ಕೋಡಿ, ಮುತ್ತಪ್ಪ ಉಕ್ಕಲಿ, ಮಾದೇವಿ ಮೈಲೇಶ್ವರ, ಜಯಶ್ರೀ ಪಾಟೀಲ ಇದ್ದರು. ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ಸ್ವಾಗತಿಸಿದರು. ಸಹ ಮುಖ್ಯಕಾರ್ಯನಿರ್ವಾಹಕ ಶಂಕರಗೌಡ ಚಿಕ್ಕೊಂಡ, ಸಿಬ್ಬಂದಿಗಳಾದ ಮಹೇಶ ಅವಟಿ, ಶ್ರೀಶೈಲ ಮುರಾಳ, ವಿಶ್ವನಾಥ ಕಡಕೋಳ, ಶಂಕರಲಿಂಗ ಅಡಗಿಮನಿ, ಸುರೇಶ ಕುಳಗೇರಿ ಇತರರು ಇದ್ದರು. ಇದೇ ಸಂದರ್ಭದಲ್ಲಿ ಸಂಘದ ಸದಸ್ಯರ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

## ವಿವಿಧೋದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಭೆ

**ಅಥಣಿ:** ಆಡಳಿತ ಮಂಡಳಿ ಮತ್ತು ರೈತ ಸದಸ್ಯರ ಸಹಕಾರ ಹಾಗೂ ಸಿಬ್ಬಂದಿ ವರ್ಗದವರ ಪರಿಶ್ರಮದಿಂದಾಗಿ ನಮ್ಮ ಸಂಘಕ್ಕೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ 10 ಲಕ್ಷ 5 ಸಾವಿರ 647 ರೂ. ನಿವ್ವಳ ಲಾಭವಾಗಿದ್ದು, ಶೇ. 5 ರಷ್ಟು ಲಾಭಾಂಶ ವಿತರಿಸಲಾಗುವುದೆಂದು ಸಂಘದ ಅಧ್ಯಕ್ಷ ಸ್ವಪ್ನಿಲ(ಕಾಕಾ) ಪಾಟೀಲ ತಿಳಿಸಿದ್ದಾರೆ.

ಅವರು, ಮಂಗಳವಾರ ಕಾಗವಾಡ ಪಟ್ಟಣದ ವಿವಿಧೋದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಭೆ; ಸಂಘದ 106ನೇ ವಾರ್ಷಿಕ ಸರ್ವ ಸಾಧಾರಣೆ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡುತ್ತಿದ್ದರು. ನಾವು ಸಂಘದಲ್ಲಿ ಅಧಿಕಾರಕ್ಕೆ ಬಂದ ನಂತರ ಸಾಕಷ್ಟು ಬದಲಾವಣೆಗಳನ್ನು ಮತ್ತು ಹೊಸ ಯೋಜನೆಗಳನ್ನು ಹಮ್ಮಿಕೊಂಡು, ಸಂಘದ ಅಭಿವೃದ್ಧಿಗೆ ಜೊತೆಗೆ ರೈತ ಸದಸ್ಯರಿಗೆ ಸರ್ಕಾರದಿಂದ ಸಿಗಬೇಕಾಗದ ಎಲ್ಲ ಸೌಲಭ್ಯಗಳನ್ನು ವದಗಿಸುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿದ್ದು, ರೈತರ ಮತ್ತು ಸಂಘದ ಅಭಿವೃದ್ಧಿಗಾಗಿ ಪ್ರಾಮಾಣಿವಾಗಿ ಶ್ರಮಿಸುವುದಾಗಿ ತಿಳಿಸಿದರು.

ಮುಖ್ಯ ಕಾರ್ಯನಿರ್ವಾಹಕ ರಾಜೇಂದ್ರ ಪೂಜಾರಿ ವರದಿ ವಾಚನ ಮಾಡುತ್ತ, ಸಂಘವು ಒಟ್ಟು 2047 ಸದಸ್ಯರನ್ನು ಹೊಂದಿದ್ದು, 1.25 ಕೋಟಿ ಶೇರ ಬಂಡವಾಳ ಮತ್ತು 12.97 ಕೋಟಿ ದುಡಿಯುವ ಬಂಡವಾಳ ಹೊಂದಿದೆ. ಇನ್ನೂ 3.07 ಕೋಟಿ ಠೇವಣಿಗಳನ್ನು ಹೊಂದಿದ್ದು, 9.36 ಕೋಟಿ ಸಾಲ ವಿತರಿಸಲಾಗಿದೆ ಎಂದರು.

ಸಭೆಯಲ್ಲಿ ಅಗಲಿದ ಗಣ್ಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಗ್ರಾಮದ ಹಿರಿಯರು ತಮ್ಮ ಅನಿಸಿಕೆ ಹಂಚಿಕೊಂಡರು.

ಈ ವೇಳೆ ಮುಖಂಡರಾದ ಜ್ಯೋತಿಕುಮಾರ ಪಾಟೀಲ, ಬಿ.ಜೆ. ಪಾಟೀಲ, ಅಣ್ಣಾಸಾಬ ಕಠಾರೆ, ಬಾಳಗೌಡಾ ಪಾಟೀಲ, ಮಾಮಾಸಾಬ ಗಡೆನ್ನವರ, ಸೌರಭ ಪಾಟೀಲ, ಉಪಾಧ್ಯಕ್ಷ ಪದ್ಮಾಕರ ಕರವ, ನಿರ್ದೇಶಕರಾದ ಬಸಗೌಡಾ ಪಾಟೀಲ, ಶಾಂತಿನಾಥ ಮಾಲಗಾಂವೆ, ರಾವಸಾಬ ಚೌಗುಲಾ, ಅಪ್ಪಾಸಾಬ ಗುಮಟೆ, ಸುವರ್ಣಾ ಪಾಟೀಲ, ರುಪಾಲಿ ಪವಾರ, ಅನೀಲ ಬಜಂತ್ರಿ, ಲಕ್ಕಪ್ಪಾ ಕೋಳಿ, ಖಾಜಾಸಾಬ ಮುಲ್ಲಾ, ಭಾರತಿ ಚೌಗುಲೆ ಸೇರಿದಂತೆ ಸಿಬ್ಬಂದಿ ವರ್ಗದವರು, ಸದಸ್ಯರು ಉಪಸ್ಥಿತರಿದ್ದರು. ಪದ್ಮಾಕರ ಕರವ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಕೋರೆ ನಿರೂಪಿಸಿದರು. ಪವನ ಪಾಟೀಲ ವಂದಿಸಿದರು.

## ನಾಳೆ ವಿಶ್ವ ಪ್ರವಾಸೋದ್ಯಮ ದಿನಾಚರಣೆ

**ಬೆಳಗಾವಿ:** ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ 27 ಸೆಪ್ಟೆಂಬರ 2025 ರಂದು ಬೆಳಿಗ್ಗೆ. 09 ಗಂಟೆಗೆ ಚ.ಕಿತ್ತೂರಿನ ರಾಜಗುರು ಗುರು ಭವನ, ಸರ್ಕಾರಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ-2025 ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಚ. ಕಿತ್ತೂರಿನ ರಾಜಗುರು ಸಂಸ್ಥಾನದ ಕಲ್ಮಠ ಶ್ರೀ ಮ. ನಿ. ಪ್ರ. ಸ್ವ. ಮಡಿವಾಳ ರಾಜಯೋಗೀಂದ್ರ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದು, ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಶಾಸಕರಾದ ಬಾಬಾಸಾಹೇಬ್ ಪಾಟೀಲ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹಾಗೂ ಕರ್ನಾಟಕ ಸರ್ಕಾರ ಕಾನೂನು ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್. ಕೆ. ಪಾಟೀಲ್ ಅವರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ-2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಹಿರಿಯ ಸಾಹಿತಿಗಳು ಹಾಗೂ ನಿವೃತ ತಹಶೀಲ್ದಾರ ಯ.ರು. ಪಾಟೀಲ್ ಅವರು ವಿಶೇಷ ಉಪನ್ಯಾಸ ಮಾಡಲಿದ್ದಾರೆ. ಇದಕ್ಕೂ ಮುನ್ನ ಕಿತ್ತೂರು ಚನ್ನಮ್ಮ ವೃತ್ತದಿಂದ ಕಿತ್ತೂರು ಕೋಟೆ ವರೆಗೆ ಪ್ರವಾಸಿ ಜಾಥಾ ಜರುಗಲಿದೆ.

## ಹಣಮಸಾಗರ: ಅರ್ಜಿ ಆಹ್ವಾನ

**ಬೆಳಗಾವಿ:** ಜಿಲ್ಲೆಯ ರಾಮದುರ್ಗ ತಾಲೂಕಿನ ಹಣಮಸಾಗರ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.ದಿನಾಂಕ: 10-10-2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ರಾಮದುರ್ಗ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ರಾಮದುರ್ಗ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಯರಗಟ್ಟಿ: ಸಮೀಪದ ಮುನವಳ್ಳಿ ಪಟ್ಟಣದ ಶ್ರೀ ಪಂಚಲಿಂಗೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಜರುಗುವ 25ನೇ ವರ್ಷದ ರಜತ ಮಹೋತ್ಸವ ನಾಡಹಬ್ಬದ ಪ್ರಾಯೋಜಕರು, ಉದ್ದಿಮೆದಾರರಾದ ವಿರೇಶ ಬ್ಯಾಹಟ್ಟಿ ಅವರಿಗೆ ನಾಡಹಬ್ಬ ಉತ್ಸವದ ಆಮಂತ್ರಣ ನೀಡಲಾಯಿತು. ಅಧ್ಯಕ್ಷ ಸುರೇಶ ಜಾವೂರ, ಶ್ರೀಶೈಲ ಹಂಜಿ, ನಾರಾಯಣ ಕಲಾಲ, ಕಲ್ಲಪ್ಪ ನಲವಡೆ, ಶಿವಕುಮಾರ ಜಿಡ್ಡಿಮನಿ ಸೇರಿದಂತೆ ಇತರರಿದ್ದರು.**

## ನೇಕಾರರಿಗೆ ವಿಮೆ ಸೌಲಭ್ಯ

**ಬೆಳಗಾವಿ:** ಜಿಲ್ಲೆಯಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯ ನೇಕಾರ ಸಮ್ಮಾನ ಯೋಜನೆಯಡಿ ನೋಂದಾಯಿಸಲ್ಪಟ್ಟ ಎಲ್ಲ ಕೈಮಗ್ಗ ಹಾಗೂ ವಿದ್ಯುತ್ ಮಗ್ಗ ನೇಕಾರರು ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ (PMJJBY) ಮತ್ತು ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ (PMSBY) ಗಳಡಿ ನೋಂದಾಯಿಸಲು ತಮ್ಮ ಉಳಿತಾಯ ಖಾತೆ ಇರುವ ಬ್ಯಾಂಕಿಗೆ ಖುದ್ದಾಗಿ ಭೇಟಿ ನೀಡಿ ಈ ಕುರಿತು ಮಾಹಿತಿ ಪಡೆದು ಕಡ್ಡಾಯವಾಗಿ ನೋಂದಾಯಿಸಲು ಹಾಗೂ ನೋಂದಾವಣೆ ಮಾಡಿಕೊಂಡಿರುವ ನೇಕಾರರು ಉಪ ನಿರ್ದೇಶಕರ ಕಛೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ, ಬೆಳಗಾವಿ ಇವರಿಗೆ ಮಾಹಿತಿ ನೀಡಲು ಕೋರಿದೆ.

## ಅರೆ ಕಾಲಿಕ ಕಾನೂನು ಸ್ವಯಂ ಸೇವಕರ ನೇಮಕ

**ಕಾರವಾರ:** ಜಿಲ್ಲೆಯಲ್ಲಿ ಗ್ರಾಮೀಣ ಜನತೆ, ಅಶಕ್ತರು, ಮಹಿಳೆ ಮತ್ತು ಮಕ್ಕಳು ಸೇರಿದಂತೆ ಪ್ರತಿಯೊಬ್ಬರಿಗೂ ಸುಲಭ ರೀತಿಯಲ್ಲಿ ಕಾನೂನು ಸೇವೆ ಮತ್ತು ನೆರವು ಒದಗಿಸುವ ಉದ್ದೇಶದಿಂದ ಕಾರವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ 1 ವರ್ಷಗಳ ಅವಧಿಗೆ ಅರೆಕಾಲಿಕ ಕಾನೂನು ಸ್ವಯಂ ಸೇವಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ. ಹೇಳಿದರು.



ಅವರು ಮಂಗಳವಾರ ಜಿಲ್ಲಾ ನ್ಯಾಯಾಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಶಿಕ್ಷಕರು/ ನಿವೃತ್ತ ಶಿಕ್ಷಕರು, ಮಾಜಿ ಪಂಚಾಯತ ಸದಸ್ಯರು, ವಿವಿಧ ಇಲಾಖೆಗಳಿಂದ ನಿವೃತ್ತರಾದ ಸರಕಾರಿ ನೌಕರರು, ಹಿರಿಯ ನಾಗರಿಕರು, ಕಾನೂನು ಸೇವೆಗಳಲ್ಲಿ ತೊಡಗಿರುವ ಸಮಾಜ ಸೇವಕರು, ಮಹಿಳೆಯರು, ಟ್ರಾನ್ಸ್‌ಜೆಂಡರಗಳು, ಪಂಗಡ ಸಮುದಾಯದವರು, ಅಲ್ಪಸಂಖ್ಯಾತರು, ಇತರ ಗೌರವಾನಿತ್ವ ವ್ಯಕ್ತಿಗಳು, ಎಂಎಸ್‌ಡಬ್ಲ್ಯೂ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು/ಚಿಕಿತ್ಸಕರು, ವಿದ್ಯಾರ್ಥಿಗಳು ಮತ್ತು ಕಾನೂನು ವಿದ್ಯಾರ್ಥಿಗಳು (ವಕೀಲರಾಗಿ ನೋಂದಣಿ ಮಾಡಿಕೊಳ್ಳುವವರೆಗೆ), ರಾಜಕೀಯೇತರ ಸೇವಾ ಮನೋಭಾವ ಹೊಂದಿರುವ ಎನ್.ಜಿ.ಒ.ಗಳು ಮತ್ತು ಕ್ಲಬ್ ಗಳ ಸದಸ್ಯರು, ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರು, ಮೈತ್ರಿ ಸಂಘಗಳು ಮತ್ತು ಉತ್ತಮ ವರ್ತನೆ ಹೊಂದಿರುವ ದೀರ್ಘಾವಧಿ ಶಿಕ್ಷೆಯನ್ನು ಅನುಭವಿಸುತ್ತಿರುವ ಶಿಕ್ಷಣ ಪಡೆದ ಕೈದಿಗಳು, ಮೃತ ರಕ್ಷಣಾ ಸಿಬ್ಬಂದಿಯ ವಿಧವೆಯರು, ಮಾಜಿ ಸೈನಿಕರು ಅಥವಾ ನಾಗರೀಕ ಪ್ರದೇಶಗಳಲ್ಲಿ ವಾಸಿಸುವ ಅವರ ಅವಲಂಭಿತರು, ಪ್ರಸ್ತುತ ಸೇವೆಯಲ್ಲಿರುವ ರಕ್ಷಣಾ ಸಿಬ್ಬಂದಿಯ ಪತ್ನಿ ಅಥವಾ ವಯಸ್ಕ ಮಕ್ಕಳು ಕನಿಷ್ಠ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿರುವವರು ಸೇರಿದಂತೆ ಜಿಲ್ಲೆಯಲ್ಲಿ ಸುಮಾರು 50 ರಿಂದ 100 ಜನರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದರು.

ಆಯ್ಕೆಯಾದ ಅರೆಕಾಲಿಕ ಕಾನೂನು ಸ್ವಯಂ ಸೇವಕರಿಗೆ ಅಗತ್ಯ ತರಬೇತಿ ಮತ್ತು ಗುರುತಿನ ಚೀಟಿಯನ್ನು ನೀಡಲಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಗೆ ಸಂಬಂಧಪಟ್ಟ ಚಟುವಟಿಕೆಗಳಲ್ಲಿ ಹಾಗೂ ಕಾರ್ಯಕ್ರಮಗಳಲ್ಲಿ ಬೆಳಗ್ಗೆಯಿಂದ ಸಂಜೆಯ ತನಕ ಹಾಜರಾಗಿ, ಪಾಲ್ಗೊಂಡಿದ್ದಲ್ಲಿ ಅವರಿಗೆ ರೂ.750 ಗೌರವಧನ ಮತ್ತು ಅರ್ಧ ದಿನ ಕೆಲಸ ಮಾಡಿದ್ದಲ್ಲಿ ರೂ.375 ರಂತೆ ಗೌರವಧನ ನೀಡಲಾಗುವುದು. ಪ್ರಾಧಿಕಾರದ ಇನ್ನಿತರ ಉಪಯುಕ್ತ ಸಾರ್ವಜನಿಕ ಸಮಸ್ಯೆಗಳ ಬಗೆಹರಿಸುವಲ್ಲಿ ಅವರಿಗೆ ತಗುಲುವ ಮೂಲ/ಸಾಮಾನ್ಯ ಪ್ರಯಾಣದ ಖರ್ಚನ್ನು ನೀಡಲಾಗುವುದು ಎಂದರು.

ಆಸಕ್ತರು ತಮ್ಮ ಅರ್ಜಿ ನಮೂನೆಯನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯ ಆವರಣ, ಕಾರವಾರ ಇವರಿಗೆ ಅಕ್ಟೋಬರ್ 10 ರೊಳಗಾಗಿ ಸಲ್ಲಿಸಬಹುದು ಮತ್ತು ಹೆಚ್ಚಿನ ಮಾಹಿತಿಗಾಗಿ ದೂ.ಸಂ 08382-222990 ನ್ನು ಸಂಪರ್ಕಿಸಬಹುದಾಗಿದೆ ಎಂದರು.

# ದ್ರಾಕ್ಷಿಗೆ ಕರ್ಪಾ ಬೂರಿ ರೋಗ ಕಂಗಾಲಾದ ರೈತ

ವರದಿ: ಮಲ್ಲಿಕಾರ್ಜುನ ತುಂಗಳ

**ರಬಕವಿ-ಬನಹಟ್ಟಿ:** ತಾಲೂಕಿನಲ್ಲಿ ವೀಳ್ಯದೆಲೆಯಷ್ಟೇ ಮಹತ್ವ ಪಡೆದಿರುವ ದ್ರಾಕ್ಷಿ ಬೆಳೆಗೆ ಕರಪಾ ಹಾಗೂ ಬೂರಿ ರೋಗದಿಂದ ಇದೀಗ ರೈತರ ಕಂಗಾಲಾಗುವಲ್ಲಿ ಕಾರಣವಾಗಿದೆ.

ಈಗಷ್ಟೇ ಚಾಟ್ನಿ ಮಾಡಿದ ರೈತರಿಗೆ ಕರಪಾ ರೋಗ ಬರಸಿಡಿಲಿನಂತೆ ಕಾಡುತ್ತಿದ್ದು, ಇಳುವರಿಗೆ ಭಾರಿ ಪೆಟ್ಟು ಬೀಳುವ ಸಾಧ್ಯತೆಯಿದೆ.

ದ್ರಾಕ್ಷಿಯಲ್ಲಿ ಸಾಮಾನ್ಯವಾಗಿ ಬೂದಿ, ಡೌನಿ, ತುಕ್ಕು, ಎಲೆ ಸುರುಳಿ ರೋಗಗಳು ಕಂಡು ಬರುತ್ತವೆ. ಕರ್ಪಾ ಮತ್ತು ಬೂರಿ ರೋಗಗಳು ತೀವ್ರ ಅಪಾಯಕಾರಿ ಎಂಬುದು ರೈತರದ್ದು.

**ಕಪ್ಪಾದ ಎಲೆಗಳು:** ಕರ್ಪಾ ರೋಗವೆಂದರೆ ಶೀಲೀಂದ್ರ ಮತ್ತು ಕೀಟಗಳ ರೋಗ ಲಕ್ಷಣಗಳನ್ನು ಉಲ್ಲೇಖಿಸಿವೆ. ದ್ರಾಕ್ಷಿಗಳಲ್ಲಿ ಇದೀಗ ಎಲೆಗಳು ಕಂದು ಬಣ್ಣಕ್ಕೆ ತಿರುಗಿ, ಪುಡಿ, ಪದರ ಎಲೆಗಳಾಗಿ ಉದುರುತ್ತಿವೆ. ಮುಂದೆ ಚಿಗುರುವದು ಕುಗ್ಗಿ, ಹಣ್ಣುಗಳಿಗೆ ಹಾನಿಯಾಗುವ ಲಕ್ಷಣಗಳೂ ತೀವ್ರವಾಗಿದ್ದು, ಬೂರಿ ರೋಗಕ್ಕೂ ತುತ್ತಾಗುತ್ತಿರುವದು ಸಾಮಾನ್ಯವಾಗಿದೆ.



ಜಗದಾಳ-ನಾವಲಗಿ ಗ್ರಾಮದಲ್ಲಷ್ಟೇ ಸುಮಾರು 500 ಕ್ಕಿಂತಲೂ ಹೆಚ್ಚು ಎಕರೆ ಪ್ರದೇಶದಲ್ಲಿ ದ್ರಾಕ್ಷಿ ಬೆಳೆದಿದ್ದು, ಬಾಗಲಕೋಟೆ ಜಿಲ್ಲೆಯಾದ್ಯಂತ ಬಾದಾಮಿ, ಮುಧೋಳ, ಜಮಖಂಡಿ ತಾಲೂಕುಗಳಲ್ಲಿ ಸುಮಾರು 2000 ಎಕರೆಗಳಲ್ಲಿ ರೈತರು ದ್ರಾಕ್ಷಿ ಬೆಳೆದಿದ್ದು, ಬಹುತೇಕ ರೈತರು ಕರ್ಪಾ ಹಾಗು ಬೂರಿ ರೋಗದ ಸಮಸ್ಯೆ ಎದುರಿಸುವಲ್ಲಿ ಕಾರಣವಾಗಿದೆ.

**ತಂಪಾದ ವಾತಾವರಣ ಪರಿಣಾಮ:** ಕಳೆದ ತಿಂಗಳು ನಿರಂತರವಾಗಿ ತಂಪೆರೆದ ಜಿಟಿ ಜಿಟಿ ಮಳೆ ಹಾಗೂ ತಂಪಾದ ವಾತಾವರಣದ ನಡುವೆ ದ್ರಾಕ್ಷಿ ಬೆಳೆಗೆ ಸೂರ್ಯನ ಶಾಖದ ವಾತಾವರಣ ಲಭಿಸದ ಕಾರಣ ಈ ರೋಗಗಲಿಂದ ದ್ರಾಕ್ಷಿ ಬೆಳೆಗಾರರು ಹೈರಾನಾಗಿದ್ದಾಗಿದೆ.

> 'ಉತ್ತಮ ಬೆಲೆಯಿದ್ದರೂ ಈ ಬಾರಿ ಬೆಳೆ ಸಂಪೂರ್ಣ ಕೈ ಕೊಡಲಿದೆ. ತೋಟಗಾರಿಕಾ ಇಲಾಖೆ ತೀವ್ರ ವಿಮೆ ಪರಿಹಾರ ಒದಗಿಸಿದ್ದಲ್ಲಿ ಅನುಕೂಲವಾಗುವದು.
>
> **ಬಸವರಾಜ ಕಾನಟ್ಟಿ,**
> **ಯುವ ರೈತ ಜಗದಾಳ.**

**ತಯಾರಿಯಲ್ಲಿಯೇ ಕೈ ಕೊಟ್ಟ ಬೆಳೆ:** ಬೇಸಿಗೆ ಚಾಟ್ನಿ ಮಾಡಿ ಕಡಡಿ ತಯಾರು ಮಾಡಿಕೊಳ್ಳುವ ಈ ಸಮಯದಲ್ಲಿ ತಪ್ಪಲು ಉದುರಿ ಕಡ್ಡಿಗಳು ಒಣಗುತ್ತಿವೆ. ಬರುವ ಅಕ್ಟೋಬರ್ ತನಕ ಕಡ್ಡಿ ತಯಾರಿಸಿ ನಂತರ ಕಾಯಿ ಚಾಟ್ನಿ ಮಾಡಿ ಉತ್ತಮ ಆದಾಯದ ನಿರೀಕ್ಷೆಯಿಟ್ಟ ದ್ರಾಕ್ಷಿ ಬೆಳೆಗಾರ ಮತ್ತೆ ಸಂಕಷ್ಟಕ್ಕೆ ಸಿಲುಕಿದ್ದಾನೆ. ಒಂದು ಹೆಕ್ಟೇರ್‌ಗೆ 4-5 ಲಕ್ಷ ರೂ.ಗಳಷ್ಟು ಖರ್ಚು ಮಾಡಬೇಕಾಗುತ್ತದೆ. ತೋಟಗಾರಿಕಾ ಇಲಾಖೆ ಇತ್ತ ಗಮನಹರಿಸಿ ಹವಾಮಾನ ಆಧಾರಿತ ವಿಮೆಯನ್ನು ಸರ್ಕಾರ ಬಿಡುಗಡೆ ಮಾಡಿ ರೈತರಿಗೆ ಸಹಾಯ ಮಾಡಬೇಕಾದ ಅನಿವಾರ್ಯತೆಯಿದೆ.

ರಾಷ್ಟ್ರೀಯ ಸ್ವಯಂ ಸೇವಾ ಯೋಜನೆ

# 56ನೇ ಸಂಸ್ಥಾಪನಾ ದಿನಾಚರಣೆ



**ಮೂಡಲಗಿ:** ರಾಷ್ಟ್ರೀಯ ಸ್ವಯಂ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ರಾಷ್ಟ್ರಪ್ರೇಮವನ್ನು ಬೆಳೆಸುತ್ತದೆ, ಎನ್.ಎಸ್.ಎಸ್. ವತಿಯಿಂದ ಹಲವಾರು ಉಪಯುಕ್ತ ಕಾರ್ಯಕ್ರಮಗಳನ್ನು ನಡೆಸುತ್ತಿದ್ದಾರೆ ಗಿಡ ನೆಡುವುದು, ರಕ್ತದಾನ, ಆರೋಗ್ಯ ತಪಾಸಣೆ, ಗ್ರಾಮ ಸ್ವಚ್ಛತಾ ಅಭಿಯಾನ, ಶಿಕ್ಷಣ ಜಾಗೃತಿ ಪ್ಲಾಸ್ಟಿಕ ಮುಕ್ತ ಅಭಿಯಾನ ಇಂತಹ ಮುಂತಾದ ಸೇವಾ ಕಾರ್ಯಕ್ರಮಗಳು ಸಮಾಜಕ್ಕೆ ಮಾತ್ರವಲ್ಲ ತಮ್ಮ ಜೀವನದಲ್ಲಿ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ಕಿ.ರಾ.ಚ.ತೋ.ಮ.ನ ಡೀನ್ ಡಾ. ಎಮ್. ಜಿ. ಕೆರುಟಗಿ ಹೇಳಿದರು

ಬುಧವಾರ ಅರಭಾವಿಯ ಕಿತ್ತೂರ ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ವತಿಯಿಂದ ರಾಷ್ಟ್ರೀಯ ಸ್ವಯಂ ಸೇವಾ ಯೋಜನೆಯ 56 ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಎನ್.ಎಸ್.ಎಸ್. ಧ್ವಜಾರೋಹಣ ನೇರವೇರಿಸಿ ಮಾತನಾಡಿದರು.

ವಿದ್ಯಾರ್ಥಿನಿ ಪ್ರೀಯಾಂಕಾ ರಾಷ್ಟ್ರೀಯ ಸ್ವಯಂ ಸೇವಾ ಯೋಜನೆಯ ಕುರಿತು ಭಾರತ ಸರ್ಕಾರವು 1969 ರಲ್ಲಿ ಮಹಾತ್ಮ ಗಾಂಧಿಜೀಯವರ ಜನ್ಮ ಶತಮಾನೋತ್ಸವ ದಿನಾಚರಣೆ ಅಂಗವಾಗಿ ಪ್ರಾರಂಭಿಸಿತು. ಇದರ ಮೂಲ ಉದ್ದೇಶ ಸೇವೆಯ ಮೂಲಕ ನಾಯಕತ್ವ, ಜವಾಬ್ದಾರಿ, ಸಹಕಾರ ಮತ್ತು ಮಾನವಿಯತೆ ಗುಣಗಳನ್ನು ಬೆಳೆಸುವುದು ಎಂದು ಹೇಳಿದರು.

ವಿವಿಧ ಘಟಕಗಳ ಸಂಯೋಜನಾ ಅಧಿಕಾರಿಗಳಾದ ಡಾ. ಎಸ್ ಜಿ. ಪ್ರವೀಣಕುಮಾರ, ಡಾ॥ ಪ್ರತೀಕ್ಷಾ ಮತ್ತು ಡಾ. ರಾಘವೇಂದ್ರ ಕೆ.ಎಸ್ ಉಪಸ್ಥಿತದರು. ಕಾರ್ಯಕ್ರಮದ ನಿರೂಪಣೆ ಹಾಗೂ ವಂದನಾರ್ಪಣೆಯನ್ನು ರಕ್ಷೀತಾ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಶಿಕ್ಷಕ ಶಿಕ್ಷಕೇತರ ಸಿಬ್ಬಂದಿಗಳು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಪೌರ ಕಾರ್ಮಿಕರ ಸೇವೆ ಅತ್ಯಂತ ಮಹತ್ವದ್ದು



**ಕಲ್ಲೋಳಿಯ ಬಸವೇಶ್ವರ ಶಿಕ್ಷಣ ಸಂಸ್ಥೆ ಮತ್ತು ಕಲ್ಲೋಳಿಯ ಪಟ್ಟಣ ಪಂಚಾಯತ ಸಹಯೋಗದಲ್ಲಿ ಪೌರಕಾರ್ಮಿಕರ ದಿನಾಚರಣೆಯ ನಿಮಿತ್ಯ ಪೌರ ಕಾರ್ಮಿಕರನ್ನು ಸನ್ಮಾನಿಸಿದರು.**

**ಮೂಡಲಗಿ:** ಪೌರ ಕಾರ್ಮಿಕರ ಸೇವೆ ಅತ್ಯಂತ ಮಹತ್ವವಾದದ್ದು, ತಮ್ಮ ಆರೋಗ್ಯ ಬದಿಯಿಟ್ಟು ಸಮಾಜದ ಆರೋಗ್ಯಕ್ಕೆ ಸದಾ ಕಂಕಣ ಬದ್ಧರಾಗಿರುತ್ತಾರೆ. ಹಲವು ಕಷ್ಟ ಸಹಿಸಿಕೊಳ್ಳುತ್ತಾರೆ. ಇಂತಹ ಪೌರ ಕಾರ್ಮಿಕರ ಸನ್ಮಾನಿಸುವುದು ನಮ್ಮ ಕರ್ತವ್ಯ. ಇವರ ಕಾರ್ಯ ವೈಖರಿ ಮೆಚ್ಚುವಂತಹುದು, ಕಾರಣ ಊರ ಸ್ವಚ್ಛತೆ ಇರಲು ಅವರ ಪರಿಶ್ರಮ ಮತ್ತು ಕಾರ್ಯ ನಿಷ್ಠೆಯ ಬಗ್ಗೆ ಸ್ವಾಭಿಮಾನ ಮೂಡುತ್ತದೆ ಎಂದು ಬಸವೇಶ್ವರ ಶಿಕ್ಷಣ ಸಂಸ್ಥೆಯ ಚೇರ್ಮನ್ ಹಾಗೂ ಪಟ್ಟಣ ಪಂಚಾಯತಿ ನಾಮನಿರ್ದೇಶನ ಸದಸ್ಯ ರಮೇಶ ಬೆಳಕೂಡ ಹೇಳಿದರು,

ಬುಧವಾರ ಸಮೀಪದ ಕಲ್ಲೋಳಿಯ ಬಸವೇಶ್ವರ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಬಸವೇಶ್ವರ ಶಿಕ್ಷಣ ಸಂಸ್ಥೆ ಮತ್ತು ಕಲ್ಲೋಳಿಯ ಪಟ್ಟಣ ಪಂಚಾಯತ ಸಹಯೋಗದಲ್ಲಿ ಪೌರ ಕಾರ್ಮಿಕರ ದಿನಾಚರಣೆಯ ನಿಮಿತ್ಯ ಪೌರ ಕಾರ್ಮಿಕರನ್ನು ಶಾಲು ಹೊದಿಸಿ ಫಲ ಪುಷ್ಪ ನೀಡಿ ಕಾಣಿಕೆಯೊಂದಿಗೆ ಸನ್ಮಾನಿಸಿ ಮಾತನಾಡಿದರು,

ಮುಖ್ಯಾಧಿಕಾರಿ ಚಿದಾನಂದ ಮುಗಳಖೋಡ ಮಾತನಾಡುತ್ತ ಪಟ್ಟಣದ ಸ್ವಚ್ಛತೆಗೆ ಎಲ್ಲ ಸಾರ್ವಜನಿಕರ ಸಹಕಾರ ಅಗತ್ಯ,ಪೌರ ಕಾರ್ಮಿಕರು ತಮ್ಮ ಸೇವೆಯನ್ನು ಪ್ರಾಮಾಣಿಕವಾಗಿ ಮಾಡಿ ಗ್ರಾಮ.ರಸ್ತೆ,ಚರಂಡಿಗಳನ್ನು ಸ್ವಚ್ಛವಾಗಿ ಇಡುವವ ಮೂಲಕ ಜನರ ಆರೋಗ್ಯವನ್ನು ಆಪಾಡುವ ಪೌರ ವೈದ್ಯರಾಗಿ ಸೇವೆ ನೀಡುತ್ತಾರೆ ಎಂದರು

ಪೌರ ಕಾರ್ಮಿಕರಿಗೆ ವಿವಿಧ ಸ್ಪರ್ಧೆಗಳನ್ನೂ ಏರ್ಪಡಿಸಿ ವಿಜೇತರಿಗೆ ವಿಶೇಷ ಬಹುಮಾನಗಳನ್ನು ನೀಡಲಾಯಿತು ಪಟ್ಟಣ ಪಂಚಾಯತಿಯ ಎಲ್ಲ ಸಿಬ್ಬಂದಿಯವರು ಉಪಸ್ಥಿತರಿದ್ದರು,

ಕೆಂಪಣ್ಣ ಮಕ್ಕಳಗೇರಿ ಸ್ವಾಗತಿಸಿದರು ವಿಠ್ಠಲ ಸುಳ್ಳನವರ ನಿರೂಪಿಸಿದರು ಗಿರಿರಾಜ್ ವಂದಿಸಿದರು.

# ತೇರದಾಳ ಪಿಕೆಪಿಎಸ್‌ಗೆ 70.35 ಲಕ್ಷ ಲಾಭ

**ತೇರದಾಳ:** ಸಹಕಾರಿ ಕ್ಷೇತ್ರದಷ್ಟು ಸೂಕ್ಷ್ಮ ಮೊತ್ತೊಂದು ಇಲ್ಲ. ಬ್ಯಾಂಕಿನ ಆಡಳಿತ ಮಂಡಳಿ ಹಾಗೂ ಗ್ರಾಹಕರು ಒಂದು ನಾಣ್ಯದ ಎರಡು ಮುಖ ಇದ್ದಂತೆ. ಇಬ್ಬರಲ್ಲಿಯೂ ಪ್ರಾಮಾಣಿಕತೆ ಇದ್ದಾಗ ಮಾತ್ರ ಬ್ಯಾಂಕಗಳು ಪ್ರಗತಿ ಹೊಂದಲು ಸಾಧ್ಯ ಎಂದು ಇಲ್ಲಿನ ಪಿಕೆಪಿಎಸ್ ಅಧ್ಯಕ್ಷ ಸುನೀಲ ಆಳಗೊಂಡ ಹೇಳಿದರು.

ಬ್ಯಾಂಕಿನ ವಾರ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 10 ಕೋಟಿಗೂ ಅಧಿಕ ಠೇವಣಿ ಹೊಂದಿದ್ದು, ಹಲವು ಯೋಜನೆಯಡಿ ರೈತರಿಗೆ 9.65 ಕೋಟಿಯಷ್ಟು ಸಾಲ ನೀಡಲಾಗಿದೆ. ಪ್ರಸಕ್ತ ಸಾಲಿಗೆ 70.35 ಲಕ್ಷದಷ್ಟು ಲಾಭ ಹೊಂದಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಕಾರ್ಯದರ್ಶಿ ಮಹಾವೀರ ಸನಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ನಿರ್ದೇಶಕರಾದ ಮಹಾವೀರ ಕೊಕಟನೂರ, ಅಲ್ಲಪ್ಪ ಬಾಬಗೊಂಡ, ಸುಭಾಸ ಗಾತಾಡೆ, ಭೂಪಾಲ ವಾಜಂತ್ರಿ, ಜಿನ್ನಪ್ಪ ಸವದತ್ತಿ, ವರ್ಧಮಾನ ಕಡಹಟ್ಟಿ, ಪ್ರಕಾಶ ಶೇಡಬಾಳ, ಪ್ರಭು ಜೈನರ ಇದ್ದರು.




## ಅಕ್ರಮವಾಗಿ ಮಾಂಸ ಸಾಗಾಣೆ: ಬಂಧನ

**ತೇರದಾಳ:** ಇಲ್ಲಿನ ಕುಡಚಿ ರಸ್ತೆಯಿಂದ ಅಟೋ ರೀಕ್ಷಾದಲ್ಲಿ ಅಕ್ರಮವಾಗಿ ಮಾಂಸ ಸಾಗಿಸುತ್ತಿದ್ದ ಇಬ್ಬರನ್ನು ಪೊಲೀಸರು ಬಂಧಿಸಿ ತನಿಖೆ ಕೈಗೊಂಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಅಟೋ ರೀಕ್ಷಾ ಪರಿಶೀಲಿಸಿದ ವೇಳೆ 150 ಕೆಜಿ ಮಾಂಸ ದೊರೆತಿದ್ದು, ಅಕ್ರಮವಾಗಿ ಸಾಗಿಸುತ್ತಿದ್ದ ನಿಯಾಜ್ ಅನ್ವರ ಮುಲ್ಲಾ ಹಾಗೂ ಸಾಬೀರ ಸಲೀಂ ಬೇಪಾರಿ ಅವರನ್ನು ಬಂಧಿಸಲಾಗಿದೆ. ಈ ಕುರಿತು ಸ್ಥಳೀಯ ಠಾಣೆಯಲ್ಲಿ ದೂರು ದಾಖಲಾಗಿದ್ದು, ಠಾಣಾಧಿಕಾರಿ ಎಸ್.ಕೆ. ಸಿಂಗನ್ನವರ ತನಿಖೆ ಮುಂದುವರೆಸಿದ್ದಾರೆ.

# ಚಿಕ್ಕಬೊಮ್ಮನಾಳ: ಪೋಷಣ್ ಮಾಸಾಚರಣೆ




**ಕೊಪ್ಪಳ:** ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಕೊಪ್ಪಳ ಇವರ ಸಂಯುಕ್ತಾಶ್ರದಲ್ಲಿ ಸೆ.24 ರಂದು ಕೊಪ್ಪಳ ಯೋಜನೆಯ ಚಿಕ್ಕಬೊಮ್ಮನಾಳ 1ನೇ ಕೇಂದ್ರದಲ್ಲಿ 8 ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಯ ಅಂಗವಾಗಿ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕಾರ್ಯಕ್ರಮ ನಿರೂಪಣಾಧಿಕಾರಿಗಳಾದ ನಟರಾಜ ಅವರು, ಪಾಲಕರಿಗೆ ಪೋಷಣ್ ಮಾಸಾಚರಣೆ ಉದ್ದೇಶ ಮತ್ತು ಆರೋಗ್ಯ ಕುರಿತು, ಶಾಲಾ ಪೂರ್ವ ಶಿಕ್ಷಣ ಕುರಿತು ವಿವರವಾದ ಮಾಹಿತಿಯನ್ನು ಹಂಚಿಕೊಂಡರು. ಆರೋಗ್ಯವೇ ಭಾಗ್ಯ ಆರೋಗ್ಯವನ್ನು ಕಳೆದುಕೊಂಡರೆ ಎಲ್ಲವನ್ನು ಕಳೆದುಕೊಂಡಂತೆ. ಆರೋಗ್ಯಕ್ಕೆ ಬೇಕಾದ ಪೋಷಕಾಂಶಗಳನ್ನು ಎಲ್ಲರೂ ತಿಳಿದಿರಬೇಕು. ಅಂಗನವಾಡಿಯಲ್ಲಿ ನೀಡುವ ಶಾಲಾ ಪೂರ್ವ ಶಿಕ್ಷಣ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶಿವಶರಣಪ್ಪ ಗದ್ದಿ, ಗ್ರಾಮ ಪಂಚಾಯತ್ ಅಧ್ಯಕ್ಷರು, ಸರ್ವ ಸದಸ್ಯರು, ಶಾಲಾ ಪೂರ್ವ ಶಿಕ್ಷಣದ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ಸಿದ್ದಪ್ಪ ಕುರಿ ಹಾಗೂ ವಲಯ ಮೇಲ್ವಿಚಾರಕರು, ಆರೋಗ್ಯ ಸಿಬ್ಬಂದಿ, ಮಕ್ಕಳು, ಪ್ರಾಥಮಿಕ ಆರೋಗ್ಯ ಕೇಂದ್ರ ಸಿಬ್ಬಂದಿ, ಅಂಗನವಾಡಿ ಶಿಕ್ಷಕಿಯರು, ಸಹಾಯಕಿಯರು ಹಾಗೂ ಗರ್ಭಿಣಿ, ಬಾಣಂತಿಯರು ಹಾಜರಿದ್ದರು.

ನಾವದಗಿ ಪಿಕೆಪಿಎಸ್ ಸಂಘದ 67ನೇ ವಾರ್ಷಿಕ ಸಭೆ

# ಸಹಕಾರಿ ರಂಗದಿಂದ ಬಡವರ ಸಂಕಷ್ಟಕ್ಕೆ ಸ್ಪಂದನೆ

**ತಾಳಿಕೋಟೆ:** ಸಹಕಾರಿ ಕ್ಷೇತ್ರವೆಂಬುದು ಬಡ ಮತ್ತು ಮದ್ಯಮ ವರ್ಗ ಅಲ್ಲದೇ ದುಡಿಯುವ ಕೈಗಳಿಗೆ ಸದಾ ಮನ್ನಣೆ ನೀಡುತ್ತಾ ಬಂದಿವೆ ಅದರಲ್ಲಿ ರೈತರ ಸಂಕಷ್ಟದ ಸಂದರ್ಬದಲ್ಲಿ ಬಡ್ಡಿ ರಹಿತ ಸಾಲ ನೀಡಿ ಅವರ ಕಣ್ಣೀರೊರೆಸುವಂತಹ ಕೆಲಸ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘಗಳು ಮಾಡುತ್ತಾ ಬಂದಿವೆ ಎಂದು ನಾವದಗಿ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಅಧ್ಯಕ್ಷ ಜಿಪಂ ಮಾಜಿ ಸದಸ್ಯ ಬಸನಗೌಡ ವಣಕ್ಯಾಳ ಅವರು ಹೇಳಿದರು.



ಮಂಗಳವಾರರಂದು ತಾಲೂಕಿನ ನಾವದಗಿ ಗ್ರಾಮದ ವಿವಿಧೋದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ 67ನೇ ವಾರ್ಷಿಕ ಸರ್ವ ಸಾಧಾರಣಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು ತಾಲೂಕಿನ 36 ಪಿಕೆಪಿಎಸ್‌ಗಳಲ್ಲಿ 15 ಪಿಕೆಪಿಎಸ್‌ಗಳು ಮಾತ್ರ ಲಾಭದಲ್ಲಿವೆ ಯಾಕೆಂದರೆ ಪಿಕೆಪಿಎಸ್ ಎಂಬುದು ಹುಟ್ಟಿರುವದು ರೈತರಿಗಾಗಿ ರೈತರ ಏಳಿಗೆ ಬಯಸುವದಕ್ಕಾಗಿ ಆಗಿದೆ ರೈತರ ಬಿತ್ತನೆ ಸಮಿಪಿಸುವ ಸಂದರ್ಬದಲ್ಲಿ ಬಡ್ಡಿ ರಹಿತ ಸಾಲವನ್ನು ನೀಡಿ ಅವರಿಗೆ ಉತ್ತೇಜಿಸುವಂತಹ ಕೆಲಸ ಮಾಡುತ್ತಾ ಬಂದಿವೆ ಇನ್ನೂ ಲಾಭದಲ್ಲಿರುವ ಪಿಕೆಪಿಎಸ್‌ಗಳು ಪಿಗ್ಮಿ ಅಲ್ಲದೇ ಡಿಫಾಜಿಟ್‌ಗಳಂತಹ ಹಣವನ್ನು ಇನ್ನಿತರ ವ್ಯಾಪಾರ ವೈಹಿವಾಟುಗಾರರಿಗೆ ಸಾಲ ನೀಡಿ ದುಡಿಸುವದರೊಂದಿಗೆ ಲಾಭದಲ್ಲಿ ಮುನ್ನಡೆದಿದ್ದು ಅದರಂತೆ ನಾವದಗಿ ಪಿಕೆಪಿಎಸ್‌ಗೆ 7 ಮಳಿಗೆಗಳು ಹೊಸದಾಗಿ ನಿರ್ಮಾಣಗೊಂಡಿದ್ದರಿಂದ ಮುಂದಿನ ದಿನಗಳಲ್ಲಿ ಲಾಭದ ಜೊತೆಗೆ ಇನ್ನಿತರ ಸಾಲವಿತರಿಸಿ ತಾಲೂಕಿನಲ್ಲಿಯೇ ಪ್ರಥಮ ಸ್ಥಾನಕ್ಕೆ ಬರಲಿದ್ದು ಅದರಂತೆ ಈಗಾಗಲೇ ಟ್ರ್ಯಾಕ್ಟರ್ ಸಾಲವನ್ನು ಕೂಡಾ ನೀಡಲು ಮುಂದಾಗಲಾಗಿದ್ದು 0.30 ಬಡ್ಡಿಯಲ್ಲಿ ಸಾಲ ನೀಡಲಾಗುತ್ತಿದೆ ಇದಕ್ಕೆ ಈಗಾಗಲೇ 3 ಅರ್ಜಿಗಳು ಬಂದಿದ್ದು ಪರಿಶೀಲಿಸಿ ಸಾಲ ಮಂಜೂರು ಮಾಡಲಾಗುವದು ಈಗಾಗಲೇ ಸಹಕಾರಿ ರಂಗವು ಸಂಪೂರ್ಣ ಡಿಜಿಟಲ್ಲಿಕರಣಕ್ಕೆ ಒಳಪಡುತ್ತಿರುವದರಿಂದ ನಾವದಗಿ ಗ್ರಾಮದ ಪಿಕೆಪಿಎಸ್ ಕೂಡಾ ನಾವದಗಿ, ಲಕ್ಕುಂಡಿ, ಬೇಲೂರ 3 ಗ್ರಾಮಗಳಿಗೆ ಒಳಪಡುತ್ತಿರುವದರಿಂದ ಈ ಪಿಕೆಪಿಎಸ್‌ನ್ನು ಕೂಡಾ ಮುಂದಿನ ವರ್ಷದೊಳಗೆ ಸಂಪೂರ್ಣ ಡಿಜಿಟಲ್ಲಿಕರಣ ಗೊಳಿಸಲಾಗುವುದೆಂದರು. ಸಾನಿದ್ಯ ವಹಿಸಿದ್ದ ನಾವದಗಿ ಹಿರೇಮಠದ ಶ್ರೀ ರಾಜಗುರು ರಾಜೇಂದ್ರ ಒಡೆಯರ ಮಹಾ ಸ್ವಾಮಿಗಳು ಮಾತನಾಡಿದರು. ಇದೇ ಸಮಯದಲ್ಲಿ ಅತಿಥಿ ಮಹೋದವರಿಗೆ ಬ್ಯಾಂಕಿನ ನಿರ್ದೇಶಕರುಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಸಂಘದ ಕಾರ್ಯದರ್ಶಿ ಎಂ.ಪಿ. ದೊಡಮನಿ ವಾರ್ಷಿಕ ವರದಿ ವಾಚಿಸಿದರು. ವೇದಿಕೆಯ ಮೇಲೆ ನಾವದಗಿ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಉಪಾಧ್ಯಕ್ಷರಾದ ಪ್ರಭುಗೌಡ ಕಾಟಮಳ್ಳಿ, ನಿರ್ದೇಶಕರುಗಳಾದ ಪರಪ್ಪಗೌಡ ಪಾಟೀಲ, ನಿಂಗಣ್ಣ ಮಾಲಗತ್ತಿ, ಸಂಗನಗೌಡ ಇಬ್ರಾಹಿಂಪೂರ, ನಾವದಗಿ, ಚಂದಪ್ಪ ಸಾಲವಾಡಗಿ, ಧರ್ಮಣ್ಣ ಮಾದರ, ಡಿಸಿಸಿ ಬ್ಯಾಂಕ್ ಕ್ಷೇತ್ರಾಧಿಕಾರಿ ಎಸ್.ಬಿ.ಬಿರಾದಾರ, ಮೊದಲಾದವರು ಇದ್ದರು.

# ಪಂಡಿತ ದೀನದಯಾಳ ಜನ್ಮದಿನಾಚರಣೆ




**ಗೋಕಾಕ:** ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದ ವತಿಯಿಂದ ಶಾಸಕ ರಮೇಶ ಜಾರಕಿಹೊಳಿ ಅವರ ಗೃಹ ಕಚೇರಿಯಲ್ಲಿ ಪಂಡಿತ ದೀನದಯಾಳ ಉಪಾಧ್ಯಾಯರ ಜನ್ಮ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು.

ಯುವ ನಾಯಕ ಅಮರನಾಥ ಜಾರಕಿಹೊಳಿ ಮಾತನಾಡಿ, ಅಂತ್ಯೋದಯ ಪರಿಕಲ್ಪನೆ ಹರಿಕಾರ ಪಂಡಿತ ದೀನ ದಯಾಳರು ಒಬ್ಬ ಉದಾತ್ತ ಆದರ್ಶವ್ಯಕ್ತಿ, ಪ್ರಚಂಡ ಸಂಘಟನಾ ಸಾಮರ್ಥ್ಯ ಹೊಂದಿದವರಾಗಿದ್ದರು. ಅವರು ಕೇವಲ ವ್ಯಕ್ತಿಯಾಗಿರದೇ ಪ್ರತಿಯೊಂದು ರಂಗದಲ್ಲೂ ಅತ್ಯದ್ಭುತ ಪ್ರತಿಭೆಯನ್ನು ಹೊಂದಿದ್ದರು. ಅವರು ಸಾಮಾಜಿಕ ಚಿಂತಕ, ಅರ್ಥಶಾಸ್ತ್ರಜ್ಞ, ಶಿಕ್ಷಣ ತಜ್ಞ, ರಾಜಕಾರಣಿ, ಬರಹಗಾರ ಮುಂತಾದ ಗುಣಗಳ ಆಕರವಾಗಿದ್ದರು. ರಾಷ್ಟ್ರ ನಿರ್ಮಾಣದಲ್ಲಿ ತಮ್ಮ ಜೀವನವನ್ನೇ ಸಮರ್ಪಿಸಿರುವ ಪಂಡಿತ ದೀನ್ ದಯಾಳ ಉಪಾಧ್ಯಾಯ ಅವರ ಅನೇಕ ವಿಚಾರಧಾರೆಗಳು ಕಾರ್ಯಕರ್ತರಿಗೆ ಪ್ರೇರಣೆಯಾಗಿವೆ ಎಂದರು.

ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಜಿಪಂ ಮಾಜಿ ಸದಸ್ಯ ಟಿ ಆರ್ ಕಾಗಲ, ಬಿಜೆಪಿ ಪದಾಧಿಕಾರಿಗಳಾದ ಲಕ್ಕಪ್ಪ ತಹಶೀಲದಾರ, ಬಸವರಾಜ ಹಿರೇಮಠ, ಸುರೇಶ ಪತ್ತಾರ, ರಾಜೇಶ್ವರಿ ಒಡೆಯರ, ಕುಸುಮಾ ಖನಗಾಂವಿ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಇದ್ದರು.

# ಸಕ್ಕರೆ ಕಾರ್ಖಾನೆಗೆ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ

**ರಾಮದುರ್ಗ:** ತಾಲೂಕಿನ ಖಾನಪೇಟದ ಶ್ರೀ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಗೆ ಮಾಜಿ ಶಾಸಕ ಮಹಾದೇವಪ್ಪ ಶಿವಲಿಂಗಪ್ಪ ಯಾದವಾಡ ಅಧ್ಯಕ್ಷರಾಗಿ ಹಾಗೂ ಭೀಮಪ್ಪ ಶಿವಪ್ಪ ಬೆಳವಣಕಿ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ಆಡಳಿತ ಮಂಡಳಿಗೆ ಸೆ.14 ರಂದು ನಡೆದ ಚುನಾವಣೆಯಲ್ಲಿ ಮಾಜಿ ಶಾಸಕ ಮಹಾದೇವಪ್ಪ ಯಾದವಾಡ ಬಣದ 11 ಸದಸ್ಯರು ಹಾಗೂ ಸಂಸ್ಥಾಪಕ ಅಧ್ಯಕ್ಷ ಮಾಜಿ ಶಾಸಕ ದಿ. ಬಿ.ಬಿ.ಹಿರೇರಡ್ಡಿ ಬಣದ 7 ಸದಸ್ಯರು ಆಯ್ಕೆಯಾಗಿದ್ದರು.

ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಆಡಳಿತ ಕಚೇರಿಯಲ್ಲಿ ಗುರುವಾರ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆಯಾಗಿ ಸೆ 25 ರಂದು ಚುನಾವಣೆ ನಿಗಿಧಿಯಾಗಿತ್ತು. ಸ್ಪಷ್ಟ ಬಹುಮತ ಪಡೆದ ಯಾದವಾಡ ಬಣದಿಂದ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಶಾಸಕ ಮಹಾದೇವಪ್ಪ ಯಾದವಾಡ, ಉಪಾಧ್ಯಕ್ಷ ಸ್ಥಾನಕ್ಕೆ ಭೀಮಪ್ಪ ಬೆಳವಣಿಗೆ ಉಪಾಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದರು.

ವಿರೋಧಿ ಬಣದಿಂದ ಯಾರೂ ನಾಮಪತ್ರ ಸಲ್ಲಿಸದ ಕಾರಣ ಹಾಗೂ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಂದೊಂದೆ ನಾಮಪತ್ರ ಸಲ್ಲಿಕೆಯಾಗಿದ್ದರಿಂದ ಅಧ್ಯಕ್ಷರಾಗಿ ಮಹಾದೇವಪ್ಪ ಯಾದವಾಡ ಹಾಗೂ ಉಪಾಧ್ಯಕ್ಷರಾಗಿ ಭೀಮಪ್ಪ ಬೆಳವಣಿಗೆ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಪ್ರವೀಣ ಜೈನ್ ಅಧಿಕೃತವಾಗಿ ಘೋಷಿಸಿದರು.

ನಂತರ ನೂತನ ಅಧ್ಯಕ್ಷ ಮಹಾದೇವಪ್ಪ ಯಾದವಾಡ ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ 15 ವರ್ಷಗಳಿಂದ ಪ್ರಾಮಾಣಿಕವಾಗಿ ಆಡಳಿತ ನಡೆಸಿದ್ದರಿಂದ ಸಕ್ಕರೆ ಕಾರ್ಖಾನೆ ಸಾಲಮುಕ್ತವಾಗಿದೆ. ತಮ್ಮ ಮೇಲೆ ವಿಶ್ವಾಸವಿಟ್ಟು ಶೇರು ಸದಸ್ಯ ರೈತರು ಮೂರನೇ ಭಾರಿಗೆ ಆಯ್ಕೆ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಎಲ್ಲ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮತ್ತಷ್ಟು ಉತ್ತಮ ಆಡಳಿತ ಮಾಡುವ ಮೂಲಕ ರೈತ ಹಾಗೂ ಶೇರು ಸದಸ್ಯರ ಹಿತವನ್ನು ಕಾಯುವದಾಗಿ ಭರವಸೆ ನೀಡಿದರು.

ನೂತನ ಸದಸ್ಯರಾದ ಬಸವರಾಜ ತುಪ್ಪದ, ಮಲ್ಲಪ್ಪ ಯಾದವಾಡ, ಮಹಾದೇವಪ್ಪ ಆತಾರ, ಅನ್ನಪೂರ್ಣಾ ಪಾಟೀಲ, ಶಶಿಕಲಾ ಸೋಮಗೊಂಡ, ಚಂದ್ರು ರಜಪೂತ, ಶಿವಾನಂದ ಮುಷ್ಠಿಗೇರಿ, ಬಸವಗೌಡ್ರ ದ್ಯಾಮನಗೌಡ್ರ, ನಾಮನಿರ್ದೇಶಿತ ಸದಸ್ಯ ಪರಪ್ಪ ಜಂಗವಾಡ, ಮುಖಂಡರಾದ ಶೇಖರಪ್ಪ ಯಾದವಾಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಹಿರಿಯ ನಾಗರಿಕರನ್ನು ಗೌರವದಿಂದ ಕಾಣಬೇಕು

**ಕಾರವಾರ:** ಹಿರಿಯ ನಾಗರಿಕರನ್ನು ಪ್ರತಿಯೊಬ್ಬರು ಗೌರವದಿಂದ ಕಾಣಬೇಕು ಹಾಗೂ ವಿವಿಧ ಇಲಾಖೆಗಳಿಂದ ಹಿರಿಯ ನಾಗರಿಕರಿಗೆ ದೊರೆಯುವ ಸೌಲಭ್ಯಗಳು ಅವರಿಗೆ ತಲುಪುವ ನಿಟ್ಟಿನಲ್ಲಿ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದು ಹಿರಿಯ ಸಿವಿಲ್ ನ್ಯಾಯಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಿದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ. ಎಮ್ ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಉತ್ತರ ಕನ್ನಡ, ಕಾರವಾರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರವಾರ, ಜಿಲ್ಲಾ ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಮತ್ತು ತಾಲೂಕು ಸರ್ಕಾರಿ ನಿವೃತ್ತ ನೌಕರರ ಸಂಘಗಳು ಹಾಗೂ ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಹಿರಿಯ ನಾಗರಿಕರಿಗಾಗಿ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರಿಕರಿಗೆ ಉದ್ದೇಶಿಸಿ ವಯಸ್ಸು ಒಂದು ಕೇವಲ ಸಂಖ್ಯೆಯಾಗಿರುತ್ತದೆ. ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ ಪ್ರಾರಂಭಿಸುವುದುರ ಬಗ್ಗೆ ನಮ್ಮಿಂದ ಆದಷ್ಟು ಬೇಗನೆ ಇದರ ಬಗ್ಗೆ ಪತ್ರ ಬರೆಯಲಾಗುವುದು. ಎಲ್ಲಾ ಹಿರಿಯ ನಾಗರೀಕರು ನಗುಮುಖದಿಂದ ಭಾಗವಹಿಸಲು ಬಂದಿರುವುದನ್ನು ನೋಡಿ ಖುಷಿಯಾಗುತ್ತಿದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ವಿರೂಪಾಕ್ಷಗೌಡ ಪಿ. ಪಾಟೀಲ ಅದ್ಯಕ್ಷತೆ ವಹಿಸಿ ಮಾತನಾಡಿ, ಹಿರಿಯ ನಾಗರಿಕರು ಉದ್ಯೋಗದಿಂದ ನಿವೃತ್ತಿಯಾಗಿರಬಹುದು ಜೀವನದಿಂದ ನಿವೃತ್ತಿಯಾಗಿರುವುದಿಲ್ಲ. ಇದೇ ತರಹ ಹೆಚ್ಚು ಹಿರಿಯ ನಾಗರಿಕರು ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಇಂತಹ ಕಾರ್ಯಕ್ರಮವನ್ನು ಇನ್ನು ಮುಂದೆ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದರು. ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತಿ ನೌಕರರ ಸಂಘ, ಜಿಲ್ಲಾ ಶಾಖೆಯ ವಿ. ಎಮ್. ಹೆಗಡೆ ಮಾತನಾಡಿ, ಹಿರಿಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಂಘಗಳಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ಹೆಚ್ಚು ಹೆಚ್ಚು ಹಿರಿಯ ನಾಗರಿಕರ ಸಂಘದ ಅಭಿವೃದ್ಧಿಯಾಗಬೇಕು ಎಂದರು.

ಹಿರಿಯ ನಾಗರಿಕರ ಹಿತರಕ್ಷಣಾ ಸಂಘ ಅಧ್ಯಕ್ಷ /ಕಾರ್ಯದರ್ಶಿ ಎಮ್. ಆರ್. ನಾಯ್ಕ, ಮಾತನಾಡಿ, ಎಲ್ಲಾ ತಾಲೂಕುಗಳಲ್ಲಿ ಹಿರಿಯ ನಾಗರಿಕರ ಸಂಘಗಳು ಅಭಿವೃದ್ಧಿಯಾಗಿ, ಒಮ್ಮತದಿಂದ ಎಲ್ಲೂ ಸೇರಿ ಮುಂದಿನ ದಿನಗಳಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸೋಣ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ರಾಘವೇಂದ್ರ ಜಿ. ಭಟ್ಟ ಸ್ವಾಗತಿಸಿದರು. ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು, ಹಿರಿಯ ನಾಗರೀಕರು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :198, Postal Reg No. PMG/KA/NK/BM/135/25-27 / POST AT Vantamury Colony Post Office